# ಅಧ್ಯಾಯ – I
## ಪ್ರಾರಂಭಿಕ

1. ಸಂಕ್ಷಿಪ್ತ ಹೆಸರು, ವ್ಯಾಪ್ತಿ ಮತ್ತು ಪ್ರಾರಂಭ.– (1) ಈ ಅಧಿನಿಯಮವನ್ನು ಮಾಹಿತಿ ಹಕ್ಕು ಅಧಿನಿಯಮ, 2005 ಎಂದು ಕರೆಯತಕ್ಕದ್ದು.
(2) ಇದು ಜಮ್ಮು ಮತ್ತು ಕಾಶ್ಮೀರ ರಾಜ್ಯವನ್ನು ಹೊರತುಪಡಿಸಿ ಇಡೀ ಭಾರತಕ್ಕೆ ವ್ಯಾಪ್ತವಾಗತಕ್ಕದ್ದು.
(3) ಈ ಅಧಿನಿಯಮದ 4ನೇ ಪ್ರಕರಣದ (1)ನೇ ಉಪ ಪ್ರಕರಣ, 5ನೇ ಪ್ರಕರಣದ (1) ಮತ್ತು (2)ನೇ ಉಪ ಪ್ರಕರಣಗಳು, 12, 13, 15, 16, 24, 27 ಮತ್ತು 28ನೇ ಪ್ರಕರಣಗಳ ಉಪಬಂಧಗಳು ಕೂಡಲೇ ಜಾರಿಗೆ ಬರತಕ್ಕದ್ದು ಮತ್ತು ಉಳಿದ ಉಪಬಂಧಗಳು ಇದನ್ನು ಅಧಿನಿಯಮಿತಿಗೊಳಿಸಿದ ಒಂದುನೂರ ಇಪ್ಪತ್ತನೇ ದಿನದಿಂದ ಜಾರಿಗೆ ಬರತಕ್ಕದ್ದು.
2. ಪರಿಭಾಷೆಗಳು.– ಈ ಅಧಿನಿಯಮದಲ್ಲಿ ಸಂದರ್ಭವು ಅನ್ಯಥಾ ಅಗತ್ಯಪಡಿಸಿದ ಹೊರತು,–
(ಎ) "ಸಮುಚಿತ ಸರ್ಕಾರ" ಎಂದರೆ ಸರ್ಕಾರೀ ಪ್ರಾಧಿಕಾರಕ್ಕೆ ಸಂಬಂಧಪಟ್ಟಂತೆ, ಕೇಂದ್ರ ಸರ್ಕಾರದಿಂದ ಅಥವಾ ಕೇಂದ್ರಾಡಳಿತ ಪ್ರದೇಶದ ಆಡಳಿತದಿಂದ ಸ್ಥಾಪಿತವಾದ, ರಚಿತವಾದ, ಅದರ ಒಡೆತನಕ್ಕೆ, ನಿಯಂತ್ರಣಕ್ಕೆ ಒಳಪಟ್ಟ ಅಥವಾ ಕೇಂದ್ರ ಸರ್ಕಾರವು ಅಥವಾ ಕೇಂದ್ರಾಡಳಿತ ಪ್ರದೇಶದ ಆಡಳಿತವು ನೇರವಾಗಿ ಅಥವಾ ಪರೋಕ್ಷವಾಗಿ,–

(i) ಕೇಂದ್ರ ಸರ್ಕಾರ, ಒದಗಿಸಿರುವ ನಿಧಿಗಳಿಂದ ಗಣನೀಯ ಆರ್ಥಿಕ ನೆರವು ಪಡೆದ ಸಾರ್ವಜನಿಕ ಪ್ರಾಧಿಕಾರದ ಸಂದರ್ಭದಲ್ಲಿ, ಕೇಂದ್ರ ಸರ್ಕಾರ;

(ii) ರಾಜ್ಯ ಸರ್ಕಾರ ಒದಗಿಸಿರುವ ನಿಧಿಗಳಿಂದ ಗಣನೀಯ ಆರ್ಥಿಕ ನೆರವು ಪಡೆದಿರುವ ಸಾರ್ವಜನಿಕ ಪ್ರಾಧಿಕಾರದ ಸಂದರ್ಭದಲ್ಲಿ, ರಾಜ್ಯ ಸರ್ಕಾರ;
(ಬಿ) "ಕೇಂದ್ರ ಮಾಹಿತಿ ಆಯೋಗ" ಎಂದರೆ 12ನೇ ಪ್ರಕರಣದ (1)ನೇ ಉಪ ಪ್ರಕರಣದ ಅಡಿಯಲ್ಲಿ ರಚಿತವಾದ ಕೇಂದ್ರ ಮಾಹಿತಿ ಆಯೋಗ;
(ಸಿ) "ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿ" ಎಂದರೆ, 5ನೇ ಪ್ರಕರಣದ (1)ನೇ ಉಪಪ್ರಕರಣದ ಅಡಿಯಲ್ಲಿ ಹಾಗೆ ಹೆಸರಿಸಲಾದ ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿ ಮತ್ತು ಇದು (2)ನೇ ಉಪಪ್ರಕರಣದ ಅಡಿಯಲ್ಲಿ ಹೆಸರಿಸಲಾದ ಕೇಂದ್ರ ಸಹಾಯಕ ಸಾರ್ವಜನಿಕ ಮಾಹಿತಿ ಅಧಿಕಾರಿಯನ್ನು ಒಳಗೊಳ್ಳುತ್ತದೆ;

(ಡಿ) "ಮುಖ್ಯ ಮಾಹಿತಿ ಆಯುಕ್ತ" ಮತ್ತು "ಮಾಹಿತಿ ಆಯುಕ್ತ" ಎಂದರೆ 12ನೇ ಪ್ರಕರಣದ (3)ನೇ ಉಪ ಪ್ರಕರಣದ ಅಡಿಯಲ್ಲಿ ನೇಮಕಗೊಂಡ ಮುಖ್ಯ ಮಾಹಿತಿ ಆಯುಕ್ತ ಮತ್ತು ಮಾಹಿತಿ ಆಯುಕ್ತ.
(ಇ) "ಸಕ್ಷಮ ಪ್ರಾಧಿಕಾರ" ಎಂದರೆ,–

(i) ಲೋಕ ಸಭೆ ಅಥವಾ ರಾಜ್ಯದ ವಿಧಾನ ಸಭೆ ಅಥವಾ ಅಂತಹ ವಿಧಾನ ಸಭೆಯನ್ನು ಹೊಂದಿರುವ ಕೇಂದ್ರಾಡಳಿತ ಪ್ರದೇಶದ ವಿಧಾನ ಸಭೆಯ ಸಂದರ್ಭದಲ್ಲಿ ಸಭಾಧ್ಯಕ್ಷ ಮತ್ತು ರಾಜ್ಯ ಸಭೆ ಅಥವಾ ರಾಜ್ಯಗಳ ವಿಧಾನ ಪರಿಷತ್ತುಗಳ ಸಂದರ್ಭದಲ್ಲಿ ಸಭಾಪತಿ;

(ii) ಸರ್ವೋಚ್ಚ ನ್ಯಾಯಾಲಯದ ಸಂದರ್ಭದಲ್ಲಿ ಭಾರತದ ಮುಖ್ಯ ನ್ಯಾಯಮೂರ್ತಿ;

(iii) ಉಚ್ಚ ನ್ಯಾಯಾಲಯದ ಸಂದರ್ಭದಲ್ಲಿ ಉಚ್ಚ ನ್ಯಾಯಾಲಯದ ಮುಖ್ಯ ನ್ಯಾಯಮೂರ್ತಿ;

(iv) ಸಂವಿಧಾನದ ಮೂಲಕ ಅಥವಾ ಅದರ ಅಡಿಯಲ್ಲಿ ಸ್ಥಾಪಿತವಾದ ಅಥವಾ ರಚಿತವಾದ ಇತರ ಪ್ರಾಧಿಕಾರಗಳ ಸಂದರ್ಭದಲ್ಲಿ ರಾಷ್ಟ್ರಪತಿ ಅಥವಾ ಸಂದರ್ಭಾನುಸಾರ, ರಾಜ್ಯಪಾಲ;

(v) ಸಂವಿಧಾನದ 239ನೇ ಅನುಚ್ಛೇಧದ ಅಡಿಯಲ್ಲಿ ನೇಮಕಗೊಂಡ ಆಡಳಿತಾಧಿಕಾರಿ;
(ಎಫ್) "ಮಾಹಿತಿ" ಎಂದರೆ, ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಇತರ ಕಾನೂನಿನ ಅಡಿಯಲ್ಲಿ ಸಾರ್ವಜನಿಕ ಪ್ರಾಧಿಕಾರದಿಂದ ಪಡೆಯಬಹುದಾದ ದಾಖಲೆಗಳು, ದಸ್ತಾವೇಜುಗಳು, ಮೆಮೋಗಳು, ಇ–

ಮೇಲ್‌ಗಳು, ಅಭಿಪ್ರಾಯಗಳು, ಸಲಹೆಗಳು, ಪತ್ರಿಕಾ ಹೇಳಿಕೆಗಳು, ಸುತ್ತೋಲೆಗಳು, ಆದೇಶಗಳು, ಲಾಗ್ ಪುಸ್ತಕಗಳು, ಕರಾರುಗಳು, ವರದಿಗಳು, ಕಾಗದಪತ್ರಗಳು, ನಮೂನೆಗಳು, ಮಾದರಿಗಳು, ಯಾವುದೇ ವಿದ್ಯುನ್ಮಾನ ರೂಪದಲ್ಲಿ ಹೊಂದಿರುವ ದತ್ತಾಂಶ ಮತ್ತು ಯಾವುದೇ ಖಾಸಗಿ ನಿಕಾಯಕ್ಕೆ ಸಂಬಂಧಿಸಿದ ಮಾಹಿತಿ ಒಳಗೊಂಡಂತೆ ಯಾವುದೇ ರೂಪದಲ್ಲಿರುವ ಯಾವುದೇ ವಿಷಯ ಸಾಮಗ್ರಿ;

(ಜಿ) "ಗೊತ್ತುಪಡಿಸಲಾದುದು" ಎಂದರೆ, ಈ ಅಧಿನಿಯಮದಡಿಯಲ್ಲಿ ಸಮುಚಿತ ಸರ್ಕಾರ ಅಥವಾ ಸಂದರ್ಭಾನುಸಾರ, ಸಕ್ಷಮ ಪ್ರಾಧಿಕಾರವು ಈ ಅಧಿನಿಯಮದ ಅಡಿಯಲ್ಲಿ ರಚಿಸಿದ ನಿಯಮಗಳ ಮೂಲಕ ಗೊತ್ತುಪಡಿಸಲಾದುದು;

(ಹೆಚ್) "ಸಾರ್ವಜನಿಕ ಪ್ರಾಧಿಕಾರ" ಎಂದರೆ,–

(ಎ) ಸಂವಿಧಾನದ ಮೂಲಕ ಅಥವಾ ಅದರ ಅಡಿಯಲ್ಲಿ;

(ಬಿ) ಸಂಸತ್ತಿನಿಂದ ಮಾಡಲಾದ ಯಾವುದೇ ಇತರ ಕಾನೂನಿನ ಮೂಲಕ;

(ಸಿ) ರಾಜ್ಯ ವಿಧಾನ ಮಂಡಲದಿಂದ ಮಾಡಲಾದ ಯಾವುದೇ ಇತರ ಕಾನೂನಿನ ಮೂಲಕ;

(ಡಿ) ಸಮುಚಿತ ಸರ್ಕಾರದಿಂದ ಹೊರಡಿಸಲಾದ ಅಧಿಸೂಚನೆ ಅಥವಾ ಮಾಡಲಾದ ಆದೇಶದ ಮೂಲಕ

– ಸ್ಥಾಪಿತವಾದ ಅಥವಾ ರಚಿತವಾದ ಯಾವುದೇ ಪ್ರಾಧಿಕಾರ ಅಥವಾ ನಿಕಾಯ ಅಥವಾ ಸ್ವಯಂ ಆಡಳಿತ ಸಂಸ್ಥೆ ಮತ್ತು ಇದು,–

(i) ಸಮುಚಿತ ಸರ್ಕಾರದ ಒಡೆತನಕ್ಕೆ, ನಿಯಂತ್ರಣಕ್ಕೆ ಒಳಪಟ್ಟ ಅಥವಾ ಅಂಥ ಸರ್ಕಾರ ಒದಗಿಸಿದ ನಿಧಿಗಳಿಂದ ನೇರವಾಗಿ ಅಥವಾ ಪರೋಕ್ಷವಾಗಿ ಗಣನೀಯ ಪ್ರಮಾಣದ ಹಣಕಾಸು ನೆರವು ಪಡೆದ ಯಾವುದೇ ನಿಕಾಯವನ್ನು;

(ii) ಸಮುಚಿತ ಸರ್ಕಾರ ಒದಗಿಸಿದ ನಿಧಿಗಳಿಂದ ನೇರವಾಗಿ ಅಥವಾ ಪರೋಕ್ಷವಾಗಿ ಗಣನೀಯ ಪ್ರಮಾಣದ ಹಣಕಾಸು ನೆರವು ಪಡೆದ ಸರ್ಕಾರೇತರ ಸಂಸ್ಥೆಯನ್ನು

– ಒಳಗೊಳ್ಳುತ್ತದೆ.

(ಐ) "ದಾಖಲೆ"ಯು,–

(ಎ) ಯಾವುದೇ ದಸ್ತಾವೇಜು, ಹಸ್ತಪ್ರತಿ ಮತ್ತು ಕಡತವನ್ನು;

(ಬಿ) ಯಾವುದೇ ದಸ್ತಾವೇಜಿನ ಮೈಕ್ರೋಫಿಲಂ, ಮೈಕ್ರೋಫಿಷ್ ಮತ್ತು ಪಡಿಯಚ್ಚು ಪ್ರತಿಯನ್ನು;

(ಸಿ) ಅಂತಹ ಮೈಕ್ರೋಫಿಲಂನಲ್ಲಿ (ಗಾತ್ರವನ್ನು ವಿಸ್ತರಿಸಿರಲಿ ಅಥವಾ ವಿಸ್ತರಿಸದಿರಲಿ) ಸಾಕಾರಗೊಳಿಸಿರುವ ಪ್ರತಿರೂಪ (ಇಮೇಜ್) ಅಥವಾ ಪ್ರತಿರೂಪಗಳ ಮರು ಪ್ರತಿ ಮಾಡುವುದನ್ನು; ಮತ್ತು

(ಡಿ) ಗಣಕಯಂತ್ರ ಅಥವಾ ಯಾವುದೇ ಇತರ ಸಾಧನದ ಮೂಲಕ ಸಿದ್ಧಪಡಿಸಲಾದ ಯಾವುದೇ ಇತರ ವಿಷಯ ಸಾಮಗ್ರಿಯನ್ನು,

– ಒಳಗೊಳ್ಳುತ್ತದೆ.

(ಜೆ) "ಮಾಹಿತಿಗಾಗಿ ಹಕ್ಕು" ಎಂದರೆ ಯಾವುದೇ ಸಾರ್ವಜನಿಕ ಪ್ರಾಧಿಕಾರ ಹೊಂದಿರುವ ಅಥವಾ ಅದರ ನಿಯಂತ್ರಣದಲ್ಲಿರುವ, ಈ ಅಧಿನಿಯಮದ ಅಡಿಯಲ್ಲಿ ಪಡೆಯಬಹುದಾದ ಮಾಹಿತಿಯ ಹಕ್ಕು ಮತ್ತು ಇದರಲ್ಲಿ,–

(i) ಕೆಲಸದ, ದಸ್ತಾವೇಜುಗಳ, ದಾಖಲೆಗಳ, ಪರಿವೀಕ್ಷಣೆ ಮಾಡುವ;

(ii) ದಸ್ತಾವೇಜುಗಳ ಅಥವಾ ದಾಖಲೆಗಳ ಟಿಪ್ಪಣಿಗಳನ್ನು, ಉದ್ಧೃತ ಭಾಗಗಳನ್ನು ಅಥವಾ ಪ್ರಮಾಣೀಕೃತ ಪ್ರತಿಗಳನ್ನು ತೆಗೆದುಕೊಳ್ಳುವ;

(iii) ವಿಷಯ ಸಾಮಗ್ರಿಯ ಪ್ರಮಾಣೀಕೃತ ಮಾದರಿಗಳನ್ನು ಪಡೆದುಕೊಳ್ಳುವ;

(iv) ಡಿಸ್ಕೆಟ್‌ಗಳು, ಫ್ಲಾಪಿಗಳು, ಟೇಪುಗಳು, ವಿಡಿಯೋ ಕ್ಯಾಸೆಟ್‌ಗಳ ರೂಪದಲ್ಲಿ ಅಥವಾ ಯಾವುದೇ ಇತರ ವಿದ್ಯುನ್ಮಾನ ವಿಧಾನದಲ್ಲಿ ಅಥವಾ ಅಂತಹ ಮಾಹಿತಿಯನ್ನು ಗಣಕಯಂತ್ರದಲ್ಲಿ ಅಥವಾ ಯಾವುದೇ ಇತರ ಸಾಧನದಲ್ಲಿ ಸಂಗ್ರಹಿಸಿಟ್ಟಿದ್ದರೆ ಅದರ ಮುದ್ರಿತ ಪ್ರತಿಯ ಮೂಲಕ ಮಾಹಿತಿ ಪಡೆಯುವ ಹಕ್ಕು ಒಳಗೊಂಡಿರುತ್ತದೆ.

(ಕೆ) "ರಾಜ್ಯ ಮಾಹಿತಿ ಆಯೋಗ" ಎಂದರೆ 15ನೇ ಪ್ರಕರಣದ (1)ನೇ ಉಪಪ್ರಕರಣದ ಅಡಿಯಲ್ಲಿ ರಚಿತವಾದ ರಾಜ್ಯ ಮಾಹಿತಿ ಆಯೋಗ;

(ಎಲ್) "ರಾಜ್ಯ ಮುಖ್ಯ ಮಾಹಿತಿ ಆಯುಕ್ತ" ಮತ್ತು "ರಾಜ್ಯ ಮಾಹಿತಿ ಆಯುಕ್ತ" ಎಂದರೆ, 15ನೇ ಪ್ರಕರಣದ (3)ನೇ ಉಪ ಪ್ರಕರಣದ ಅಡಿಯಲ್ಲಿ ನೇಮಕಗೊಂಡಿರುವ ರಾಜ್ಯ ಮುಖ್ಯ ಮಾಹಿತಿ ಆಯುಕ್ತ ಮತ್ತು ರಾಜ್ಯ ಮಾಹಿತಿ ಆಯುಕ್ತ;

(ಎಂ) "ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿ" ಎಂದರೆ 5ನೇ ಪ್ರಕರಣದ (1)ನೇ ಉಪ ಪ್ರಕರಣದ ಅಡಿಯಲ್ಲಿ ಹೆಸರಿಸಲಾದ ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿ ಮತ್ತು (2)ನೇ ಉಪ ಪ್ರಕರಣದ ಅಡಿಯಲ್ಲಿ ಹಾಗೆ ಹೆಸರಿಸಲಾದ ರಾಜ್ಯ ಸಹಾಯಕ ಸಾರ್ವಜನಿಕ ಮಾಹಿತಿ ಅಧಿಕಾರಿಯನ್ನು ಒಳಗೊಳ್ಳುತ್ತದೆ;

(ಎನ್) "ಮೂರನೇ ಪಕ್ಷಕಾರ" ಎಂದರೆ, ಮಾಹಿತಿಗಾಗಿ ಕೋರಿಕೆ ಸಲ್ಲಿಸುವ ನಾಗರಿಕನನ್ನು ಹೊರತುಪಡಿಸಿದ ವ್ಯಕ್ತಿ ಮತ್ತು ಸಾರ್ವಜನಿಕ ಪ್ರಾಧಿಕಾರವನ್ನು ಒಳಗೊಳ್ಳುತ್ತದೆ.

ಅಧ್ಯಾಯ – II

ಮಾಹಿತಿ ಹಕ್ಕು ಮತ್ತು ಸಾರ್ವಜನಿಕ ಪ್ರಾಧಿಕಾರಗಳ ಹೊಣೆಗಾರಿಕೆ

3. ಮಾಹಿತಿ ಹಕ್ಕು.– ಈ ಅಧಿನಿಯಮದ ಉಪಬಂಧಗಳಿಗೆ ಒಳಪಟ್ಟು, ಎಲ್ಲ ನಾಗರಿಕರು ಮಾಹಿತಿ ಹಕ್ಕನ್ನು ಹೊಂದಿರತಕ್ಕದ್ದು.

4. ಸಾರ್ವಜನಿಕ ಪ್ರಾಧಿಕಾರಗಳ ಹೊಣೆಗಾರಿಕೆ.– (1) ಪ್ರತಿಯೊಂದು ಸಾರ್ವಜನಿಕ ಪ್ರಾಧಿಕಾರವು,–

(ಎ) ಈ ಅಧಿನಿಯಮದ ಅಡಿಯಲ್ಲಿ ಮಾಹಿತಿ ಹಕ್ಕಿಗಾಗಿ ಅನುಕೂಲ ಮಾಡಿಕೊಡುವ ರೀತಿಯಲ್ಲಿ ಮತ್ತು ನಮೂನೆಯಲ್ಲಿ ಕ್ರಮಬದ್ಧ ಸೂಚಿಪಟ್ಟಿ ಮತ್ತು ಸೂಚೀಕರಣಗೊಂಡ ಅದರ ಎಲ್ಲಾ ದಾಖಲೆಗಳನ್ನು ನಿರ್ವಹಿಸತಕ್ಕದ್ದು ಮತ್ತು ಸೂಕ್ತ ಸಮಯದೊಳಗಾಗಿ ಮತ್ತು ಸಂಪನ್ಮೂಲಗಳ ಲಭ್ಯತೆಗೊಳಪಟ್ಟು, ಗಣಕೀಕರಣಕ್ಕೆ ಸೂಕ್ತವಾದ ಎಲ್ಲ ದಾಖಲೆಗಳನ್ನು ಗಣಕೀಕರಿಸುವಂತೆ ಮತ್ತು ಅಂತಹ ದಾಖಲೆಗಳು ಸುಲಭವಾಗಿ ದೊರೆಯುವಂತೆ ದೇಶಾದ್ಯಂತ ವಿವಿಧ ಸಿಸ್ಟಂಗಳಲ್ಲಿ ಸಂಪರ್ಕಜಾಲದ ಮೂಲಕ ಸಂಪರ್ಕ ಕಲ್ಪಿಸುವಂತೆ ಮಾಡತಕ್ಕದ್ದು;

(ಬಿ) ಈ ಅಧಿನಿಯಮವನ್ನು ಅಧಿನಿಯಮಿತಿಗೊಳಿಸಿದ ದಿನಾಂಕದಿಂದ ಒಂದುನೂರ ಇಪ್ಪತ್ತು ದಿನಗಳೊಳಗಾಗಿ,–

(i) ಅದರ ರಚನೆ, ಕಾರ್ಯಗಳು ಮತ್ತು ಕರ್ತವ್ಯಗಳ ವಿವರಗಳನ್ನು;

(ii) ಅದರ ಅಧಿಕಾರಿಗಳ ಮತ್ತು ನೌಕರರ ಅಧಿಕಾರಗಳನ್ನು ಮತ್ತು ಕರ್ತವ್ಯಗಳನ್ನು;

(iii) ಮೇಲ್ವಿಚಾರಣೆ ಮತ್ತು ಹೊಣೆಗಾರಿಕೆಯ ಮಾರ್ಗಗಳು ಸೇರಿದಂತೆ ತೀರ್ಮಾನ ತೆಗೆದುಕೊಳ್ಳುವ ಪ್ರಕ್ರಿಯೆಯಲ್ಲಿ ಅನುಸರಿಸಬೇಕಾದ ಕಾರ್ಯವಿಧಾನವನ್ನು;

(iv) ಅದರ ಕಾರ್ಯಗಳ ನಿರ್ವಹಣೆಗೆ ಅದು ರೂಪಿಸಿರುವ ಸೂತ್ರಗಳನ್ನು;

(v) ಅದರ ಕಾರ್ಯಗಳನ್ನು ನೆರವೇರಿಸುವುದಕ್ಕಾಗಿ ಅದು ಹೊಂದಿರುವ ಅಥವಾ ಅದರ ನಿಯಂತ್ರಣದಲ್ಲಿರುವ ಅಥವಾ ಅದರ ಉದ್ಯೋಗಿಗಳು ಬಳಸುವ ನಿಯಮಗಳು, ವಿನಿಯಮಗಳು, ಅನುಸೂಚಿಗಳು, ಕೈಪಿಡಿಗಳು ಮತ್ತು ದಾಖಲೆಗಳನ್ನು;

(vi) ಅದು ಹೊಂದಿರುವ ಅಥವಾ ಅದರ ನಿಯಂತ್ರಣದಲ್ಲಿರುವ ದಸ್ತಾವೇಜುಗಳ ಪ್ರವರ್ಗಗಳ ವಿವರಪಟ್ಟಿಯನ್ನು;

(vii) ಅದರ ಕಾರ್ಯನೀತಿಯ ರಚನೆ ಅಥವಾ ಅದರ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಸಾರ್ವಜನಿಕರೊಡನೆ ಸಮಾಲೋಚಿಸಲು ಅಥವಾ ಅವರ ಪ್ರಾತಿನಿಧ್ಯವಿರುವಂತೆ ಮಾಡಲು ಇರುವಂಥ ಯಾವುದೇ ವ್ಯವಸ್ಥೆಯ ವಿವರಗಳನ್ನು;

(viii) ಮಂಡಳಿಗಳು, ಪರಿಷತ್ತುಗಳು, ಸಮಿತಿಗಳು ಅಥವಾ ಇತರ ನಿಕಾಯಗಳು ಮತ್ತು ಅದರ ಭಾಗವಾಗಿ ಅಥವಾ ಅದರ ಸಲಹೆಯ ಉದ್ದೇಶಕ್ಕಾಗಿ ರಚಿತವಾದ ಇಬ್ಬರು ಅಥವಾ ಹೆಚ್ಚು ವ್ಯಕ್ತಿಗಳನ್ನೊಳಗೊಂಡ ಮಂಡಳಿಗಳ, ಪರಿಷತ್ತುಗಳ, ಸಮಿತಿಗಳ ಮತ್ತು ಇತರ ನಿಕಾಯಗಳ ಸಭೆಗಳು ಸಾರ್ವಜನಿಕರಿಗೆ ಮುಕ್ತವಾಗಿರುತ್ತವೆಯೇ ಅಥವಾ ಅಂತಹ ಸಭೆಗಳ ನಡಾವಳಿಗಳು ಸಾರ್ವಜನಿಕರಿಗೆ ದೊರೆಯುತ್ತವೆಯೇ ಎಂಬುದರ ವಿವರಪಟ್ಟಿಕೆಯನ್ನು;

(ix) ಅದರ ಅಧಿಕಾರಿಗಳ ಮತ್ತು ನೌಕರರ ನಿರ್ದೇಶಿಕೆಯನ್ನು;

(x) ಅದರ ವಿನಿಯಮಗಳಲ್ಲಿ ಉಪಬಂಧಿಸಿರುವಂತೆ ಪರಿಹಾರದ ವ್ಯವಸ್ಥೆಯೂ ಸೇರಿದಂತೆ ಅದರ ಪ್ರತಿಯೊಬ್ಬ ಅಧಿಕಾರಿ ಮತ್ತು ನೌಕರರು ಪಡೆಯುವ ತಿಂಗಳ ಗೌರವಧನವನ್ನು;

(xi) ಎಲ್ಲ ಯೋಜನೆಗಳ ವಿವರಗಳನ್ನು ಸೂಚಿಸುವ, ಪ್ರಸ್ತಾವಿತ ವೆಚ್ಚಗಳನ್ನು ಮತ್ತು ಮಾಡಲಾದ ಬಟವಾಡೆಗಳ ವರದಿಯನ್ನು ಸೂಚಿಸಿ; ಅದರ ಪ್ರತಿಯೊಂದು ಏಜೆನ್ಸಿಗೆ ಹಂಚಿಕೆ ಮಾಡಲಾದ ಆಯವ್ಯಯವನ್ನು,

(xii) ಹಂಚಿಕೆ ಮಾಡಲಾದ ಮೊಬಲಗನ್ನೊಳಗೊಂಡು, ಸಹಾಯಧನ ಕಾರ್ಯಕ್ರಮಗಳ ಜಾರಿಯ ವಿಧಾನವನ್ನು ಮತ್ತು ಅಂತಹ ಕಾರ್ಯಕ್ರಮಗಳ ಫಲಾನುಭವಿಗಳ ವಿವರಗಳನ್ನು;

(xiii) ಅದು ನೀಡಿರುವ ರಿಯಾಯಿತಿಗಳನ್ನು, ಅನುಮತಿ ಪತ್ರಗಳನ್ನು ಅಥವಾ ಅಧಿಕಾರಪತ್ರಗಳನ್ನು ಪಡೆಯುವವರ ವಿವರಗಳನ್ನು;

(xiv) ಅದರ ಬಳಿ ಲಭ್ಯವಿರುವ ಅಥವಾ ಅದು ಹೊಂದಿರುವ ವಿದ್ಯುನ್ಮಾನ ರೂಪಕ್ಕೆ ಪರಿವರ್ತಿಸಿರುವ, ಮಾಹಿತಿಗೆ ಸಂಬಂಧಿಸಿದ ವಿವರಗಳನ್ನು;

(xv) ಸಾರ್ವಜನಿಕ ಉಪಯೋಗಕ್ಕಾಗಿ ಗ್ರಂಥಾಲಯವನ್ನು ಅಥವಾ ವಾಚನಾಲಯವನ್ನು ನಿರ್ವಹಿಸುತ್ತಿದ್ದಲ್ಲಿ ಅದರ ಕೆಲಸದ ಸಮಯವನ್ನೊಳಗೊಂಡಂತೆ ಮಾಹಿತಿ ಪಡೆಯಲು ಸಾರ್ವಜನಿಕರಿಗೆ ಲಭ್ಯವಿರುವ ಸೌಲಭ್ಯಗಳ ವಿವರಗಳನ್ನು;

(xvi) ಸಾರ್ವಜನಿಕ ಮಾಹಿತಿ ಅಧಿಕಾರಿಗಳ ಹೆಸರುಗಳು, ಪದನಾಮಗಳು ಮತ್ತು ಇತರ ವಿವರಗಳನ್ನು; ನಿಯಮಿಸಬಹುದಾದಂತಹ ಇತರ ಮಾಹಿತಿಯನ್ನು ಪ್ರಕಟಿಸತಕ್ಕದ್ದು ಮತ್ತು ಆ ತರುವಾಯ ಪ್ರತಿವರ್ಷ ಈ ಪ್ರಕಟಣೆಗಳನ್ನು ಅಂದಿನವರೆಗೆ ಪರಿಷ್ಕರಿಸತಕ್ಕದ್ದು.

(ಸಿ) ಸಾರ್ವಜನಿಕರಿಗೆ ಸಂಬಂಧಿಸಿದ ಪ್ರಮುಖ ಕಾರ್ಯನೀತಿಗಳನ್ನು ರೂಪಿಸುವಾಗ ಅಥವಾನಿರ್ಧಾರಗಳನ್ನು ಘೋಷಿಸುವಾಗ ಎಲ್ಲ ಸುಸಂಗತ ಸಂಗತಿಗಳನ್ನು ಪ್ರಕಟಿಸತಕ್ಕದ್ದು;

(ಡಿ) ಆಡಳಿತಾತ್ಮಕ ಅಥವಾ ಅರೆನ್ಯಾಯಿಕ ಸ್ವರೂಪದ ನಿರ್ಣಯಗಳಿಂದ ಬಾಧಿತರಾದ ವ್ಯಕ್ತಿಗಳಿಗೆ ಅದರ ಕಾರಣಗಳನ್ನು ಒದಗಿಸತಕ್ಕದ್ದು.

(2) ಮಾಹಿತಿ ಪಡೆಯುವುದಕ್ಕಾಗಿ, ಈ ಅಧಿನಿಯಮದ ಉಪಯೋಗವನ್ನು ಕನಿಷ್ಠ ಪ್ರಮಾಣದಲ್ಲಿ ಅವಲಂಬಿಸುವುದಕ್ಕಾಗಿ ಪ್ರತಿಯೊಂದು ಸಾರ್ವಜನಿಕ ಪ್ರಾಧಿಕಾರವು ಅಂತರ್ಜಾಲವೂ ಸೇರಿದಂತೆ, ಅಂಥ ಮಾಹಿತಿಯನ್ನು ವಿವಿಧ ಸಂಪರ್ಕ ಸಾಧನಗಳ ಮೂಲಕ ನಿಯಮಿತ ಮಧ್ಯಂತರದಲ್ಲಿ (1)ನೇ ಉಪಪ್ರಕರಣದಲ್ಲಿ (ಬಿ) ಖಂಡದ ಅಗತ್ಯಗಳಿಗನುಸಾರವಾಗಿ ಸಾರ್ವಜನಿಕರಿಗೆ ಸಾಕಷ್ಟು ಮಾಹಿತಿ ದೊರಕಿಸಿಕೊಡಲು ಕ್ರಮ ತೆಗೆದುಕೊಳ್ಳುವುದು ಅದರ ನಿರಂತರ ಪ್ರಯತ್ನವಾಗಿರತಕ್ಕದ್ದು.

(3) (1)ನೇ ಉಪಪ್ರಕರಣದ ಉದ್ದೇಶಗಳಿಗಾಗಿ ಪ್ರತಿಯೊಂದು ಮಾಹಿತಿಯನ್ನು, ಸಾರ್ವಜನಿಕರಿಗೆ ಸುಲಭವಾಗಿ ದೊರೆಯುವಂತಹ ನಮೂನೆಯಲ್ಲಿ ಮತ್ತು ವಿಧಾನದಲ್ಲಿ ವ್ಯಾಪಕವಾಗಿ ಪ್ರಸಾರ ಮಾಡತಕ್ಕದ್ದು.

(4) ವೆಚ್ಚದ ಪ್ರಮಾಣವನ್ನು, ಸ್ಥಳೀಯ ಭಾಷೆಯನ್ನು ಮತ್ತು ಆ ಸ್ಥಳೀಯ ಪ್ರದೇಶದಲ್ಲಿನ ಸಂಪರ್ಕದ ಅತ್ಯಂತ ಪರಿಣಾಮಕಾರಿ ವಿಧಾನ ಇವುಗಳನ್ನು ಗಮನದಲ್ಲಿಟ್ಟುಕೊಂಡು ಎಲ್ಲ ವಿಷಯಗಳನ್ನು ಪ್ರಸಾರ ಮಾಡತಕ್ಕದ್ದು ಮತ್ತು ಆ ಮಾಹಿತಿಯು, ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿಯ ಅಥವಾ ಸಂದರ್ಭಾನುಸಾರ, ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿಯ ಬಳಿ ಸಾಧ್ಯವಾದಷ್ಟುಮಟ್ಟಿಗೆ ವಿದ್ಯುನ್ಮಾನ ನಮೂನೆಯಲ್ಲಿ ಸುಲಭವಾಗಿ, ಉಚಿತವಾಗಿ ಅಥವಾ ನಿಗದಿಪಡಿಸಬಹುದಾದಂತಹ ಮಾಧ್ಯಮ ವೆಚ್ಚದ ಅಥವಾ ಮುದ್ರಣಕ್ಕೆ ತಗಲುವ ವೆಚ್ಚದ ಬೆಲೆಯಲ್ಲಿ ಲಭ್ಯವಾಗುವಂತಿರತಕ್ಕದ್ದು.

ವಿವರಣೆ:- (3) ಮತ್ತು (4)ನೇ ಉಪ ಪ್ರಕರಣಗಳ ಉದ್ದೇಶಗಳಿಗಾಗಿ "ಪ್ರಸಾರ ಮಾಡಲಾದ" ಎಂದರೆ ಯಾವುದೇ ಸಾರ್ವಜನಿಕ ಪ್ರಾಧಿಕಾರದ ಕಚೇರಿಗಳ ಪರಿಶೀಲನೆಯು ಒಳಗೊಂಡಂತೆ ಮಾಹಿತಿಯನ್ನು ಸೂಚನಾ ಫಲಕಗಳು, ವೃತ್ತ ಪತ್ರಿಕೆಗಳು, ಸಾರ್ವಜನಿಕ ಪ್ರಕಟಣೆಗಳು, ಮಾಧ್ಯಮದ ಮೂಲಕ ಪ್ರಸಾರಗಳು, ಅಂತರ್ಜಾಲ ಅಥವಾ ಯಾವುದೇ ಇತರ ಮಾಧ್ಯಮಗಳ ಮೂಲಕ ಸಾರ್ವಜನಿಕರಿಗೆ ತಿಳಿಯುವಂತೆ ಮಾಡುವುದು ಅಥವಾ ತಿಳಿಸುವುದು.

5. ಸಾರ್ವಜನಿಕ ಮಾಹಿತಿ ಅಧಿಕಾರಿಗಳ ಪದನಾಮೀಕರಿಸುವುದು.– (1) ಪ್ರತಿಯೊಂದು ಸಾರ್ವಜನಿಕ ಪ್ರಾಧಿಕಾರವು, ಈ ಅಧಿನಿಯಮವನ್ನು ಅಧಿನಿಯಮಿತಿಗೊಳಿಸಿದ ದಿನಾಂಕದಿಂದ ನೂರು ದಿನಗಳೊಳಗಾಗಿ, ಈ ಅಧಿನಿಯಮದ ಅಡಿಯಲ್ಲಿ ಮಾಹಿತಿಗಾಗಿ ಕೋರಿಕೆ ಸಲ್ಲಿಸುವ ವ್ಯಕ್ತಿಗಳಿಗೆ ಮಾಹಿತಿ ಒದಗಿಸಲು, ಅದರ ಅಧೀನದಲ್ಲಿರುವ ಎಲ್ಲ ಆಡಳಿತ ಘಟಕಗಳು ಅಥವಾ ಕಚೇರಿಗಳಲ್ಲಿ ಅವಶ್ಯವಾಗಬಹುದಾದಷ್ಟು ಸಂಖ್ಯೆಯ ಅಧಿಕಾರಿಗಳನ್ನು ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿಗಳನ್ನಾಗಿ ಅಥವಾ ಸಂದರ್ಭಾನುಸಾರ ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿಗಳನ್ನಾಗಿ ಪದನಾಮೀಕರಿಸತಕ್ಕದ್ದು.

(2) (1)ನೇ ಉಪಪ್ರಕರಣದ ಉಪಬಂಧಗಳಿಗೆ ಬಾಧಕವಾಗದಂತೆ, ಪ್ರತಿಯೊಂದು ಸಾರ್ವಜನಿಕ ಪ್ರಾಧಿಕಾರವೂ ಈ ಅಧಿನಿಯಮವನ್ನು ಅಧಿನಿಯಮಿತಿಗೊಳಿಸಿದ ದಿನಾಂಕದಿಂದ ನೂರು ದಿನಗಳೊಳಗಾಗಿ ಪ್ರತಿಯೊಂದು ಉಪ ವಿಭಾಗೀಯ ಮಟ್ಟದಲ್ಲಿ ಅಥವಾ ಇತರ ಉಪ ಜಿಲ್ಲಾ ಮಟ್ಟದಲ್ಲಿ ಈ ಅಧಿನಿಯಮದ ಅಡಿಯಲ್ಲಿ ಮಾಹಿತಿಗಾಗಿ ಅರ್ಜಿಗಳನ್ನು ಅಥವಾ ಅಪೀಲುಗಳನ್ನು ಸ್ವೀಕರಿಸಲು, ಅವುಗಳನ್ನು ಸಂದರ್ಭಾನುಸಾರ, 19ನೇ ಪ್ರಕರಣದ (1)ನೇ ಉಪ ಪ್ರಕರಣದ ಅಡಿಯಲ್ಲಿ ನಿರ್ದಿಷ್ಟಪಡಿಸಿರುವ ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿಗೆ ಅಥವಾ ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿಗೆ ಅಥವಾ ಹಿರಿಯ ಅಧಿಕಾರಿಗೆ ಅಥವಾ ಕೇಂದ್ರ ಮಾಹಿತಿ ಆಯೋಗಕ್ಕೆ ಅಥವಾ ರಾಜ್ಯ ಮಾಹಿತಿ ಆಯೋಗಕ್ಕೆ ಕೂಡಲೇ ಕಳುಹಿಸಲು ಒಬ್ಬ ಅಧಿಕಾರಿಯನ್ನು ಕೇಂದ್ರ ಸಹಾಯಕ ಸಾರ್ವಜನಿಕ ಮಾಹಿತಿ ಅಧಿಕಾರಿಯನ್ನಾಗಿ ಅಥವಾ ಸಂದರ್ಭಾನುಸಾರ, ರಾಜ್ಯ ಸಹಾಯಕ ಸಾರ್ವಜನಿಕ ಮಾಹಿತಿ ಅಧಿಕಾರಿಯನ್ನಾಗಿ ಪದನಾಮೀಕರಿಸತಕ್ಕದ್ದು:

ಪರಂತು, ಮಾಹಿತಿಗಾಗಿ ಸಲ್ಲಿಸಲಾದ ಅರ್ಜಿಯನ್ನು ಅಥವಾ ಅಪೀಲನ್ನು ಕೇಂದ್ರ ಸಹಾಯಕ ಸಾರ್ವಜನಿಕ ಮಾಹಿತಿ ಅಧಿಕಾರಿಗೆ ಅಥವಾ ಸಂದರ್ಭಾನುಸಾರ, ರಾಜ್ಯ ಸಹಾಯಕ ಸಾರ್ವಜನಿಕ ಮಾಹಿತಿ ಅಧಿಕಾರಿಗೆ ನೀಡಿದ್ದಲ್ಲಿ, 7ನೇ ಪ್ರಕರಣದ (1)ನೇ ಉಪಪ್ರಕರಣದಲ್ಲಿ ನಿರ್ದಿಷ್ಟಪಡಿಸಿರುವಂತೆ ಉತ್ತರ ನೀಡುವ ಅವಧಿಯನ್ನು ಲೆಕ್ಕ ಹಾಕುವಾಗ ಅದಕ್ಕೆ ಐದು ದಿನಗಳ ಅವಧಿಯನ್ನು ಸೇರಿಸತಕ್ಕದ್ದು.

(3) ಪ್ರತಿಯೊಬ್ಬ ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿಯು ಅಥವಾ ಸಂದರ್ಭಾನುಸಾರ, ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿಯು ಮಾಹಿತಿ ಕೋರುವ ವ್ಯಕ್ತಿಗಳಿಂದ ಬರುವ ಮನವಿಗಳ ಬಗ್ಗೆ ವ್ಯವಹರಿಸತಕ್ಕದ್ದು ಮತ್ತು ಅಂತಹ ಮಾಹಿತಿ ಕೋರುವ ವ್ಯಕ್ತಿಗಳಿಗೆ ಸೂಕ್ತ ನೆರವು ನೀಡತಕ್ಕದ್ದು.

(4) ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿಯು ಅಥವಾ ಸಂದರ್ಭಾನುಸಾರ, ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿಯು, ತನ್ನ ಕರ್ತವ್ಯಗಳನ್ನು ಸರಿಯಾಗಿ ನಿರ್ವಹಿಸಲು ಅವಶ್ಯಕವೆಂದು ಆತನು ಅಥವಾ ಆಕೆ ಪರಿಗಣಿಸುವಂತಹ ಯಾರೇ ಇತರ ಅಧಿಕಾರಿಗಳ ನೆರವು ಪಡೆಯಬಹುದು.

(5) (4)ನೇ ಉಪಪ್ರಕರಣದ ಅಡಿಯಲ್ಲಿ ಯಾರ ನೆರವನ್ನು ಕೋರಲಾಗಿದೆಯೋ ಆ ಅಧಿಕಾರಿಯು, ಆತನ ಅಥವಾ ಆಕೆಯ ನೆರವನ್ನು ಕೋರಿರುವ ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿಗೆ ಅಥವಾ ಸಂದರ್ಭಾನುಸಾರ, ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿಗೆ ಎಲ್ಲಾ ನೆರವನ್ನು ನೀಡತಕ್ಕದ್ದು, ಮತ್ತು ಈ ಅಧಿನಿಯಮದ ಉಪಬಂಧಗಳ ಯಾವುದೇ ಉಲ್ಲಂಘನೆಯ ಉದ್ದೇಶಕ್ಕಾಗಿ, ಅಂತಹ ಇತರ ಅಧಿಕಾರಿಯನ್ನು ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿ ಅಥವಾ ಸಂದರ್ಭಾನುಸಾರ, ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿ ಎಂದು ಪರಿಗಣಿಸತಕ್ಕದ್ದು.

(6.) ಮಾಹಿತಿ ಪಡೆಯುವುದಕ್ಕಾಗಿ ಕೋರಿಕೆ.– (1) ಈ ಅಧಿನಿಯಮದ ಅಡಿಯಲ್ಲಿ ಯಾವುದೇ ಮಾಹಿತಿಯನ್ನು ಪಡೆಯಲಿಚ್ಛಿಸುವ ವ್ಯಕ್ತಿಯು ಲಿಖಿತದಲ್ಲಿ ಅಥವಾ ವಿದ್ಯುನ್ಮಾನ ಸಾಧನಗಳ ಮೂಲಕ ಇಂಗ್ಲಿಷ್ ಅಥವಾ ಹಿಂದಿಯಲ್ಲಿ ಅಥವಾ ಸಲ್ಲಿಸಲಾಗುತ್ತಿರುವಂಥ ಅಧಿಕೃತ ಪ್ರಾದೇಶಿಕ ಭಾಷೆಯಲ್ಲಿ

ಅರ್ಜಿಯನ್ನು ಆತನು ಅಥವಾ ಆಕೆಯು ಕೋರಿರುವ ಮಾಹಿತಿಯ ವಿವರಗಳನ್ನು ನಿರ್ದಿಷ್ಟಪಡಿಸಿ, ನಿಗದಿಪಡಿಸಬಹುದಾದ ಶುಲ್ಕಗಳೂ ಸೇರಿದಂತೆ ಈ ಮುಂದಿನವರಿಗೆ ಕೋರಿಕೆಯನ್ನು ಸಲ್ಲಿಸತಕ್ಕದ್ದು,–

(ಎ) ಸಂಬಂಧಪಟ್ಟ ಸಾರ್ವಜನಿಕ ಪ್ರಾಧಿಕಾರದ ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿ ಅಥವಾ ಸಂದರ್ಭಾನುಸಾರ, ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿ;

(ಬಿ) ಕೇಂದ್ರ ಸಹಾಯಕ ಸಾರ್ವಜನಿಕ ಮಾಹಿತಿ ಅಧಿಕಾರಿ ಅಥವಾ ಸಂದರ್ಭಾನುಸಾರ, ರಾಜ್ಯ ಸಹಾಯಕ ಸಾರ್ವಜನಿಕ ಮಾಹಿತಿ ಅಧಿಕಾರಿ:

ಪರಂತು, ಅಂತಹ ಕೋರಿಕೆಯನ್ನು ಲಿಖಿತದಲ್ಲಿ ಸಲ್ಲಿಸಲು ಸಾಧ್ಯವಿಲ್ಲದಿರುವ ಪಕ್ಷದಲ್ಲಿ, ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿಯು ಅಥವಾ ಸಂದರ್ಭಾನುಸಾರ, ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿಯು ಮೌಖಿಕವಾಗಿ ಕೋರಿಕೆ ಸಲ್ಲಿಸಿದಗ ವ್ಯಕ್ತಿಗೆ ಅದನ್ನು ಬರವಣಿಗೆ ಮೂಲಕ ಕಾರ್ಯರೂಪಕ್ಕೆ ತರಲು ಎಲ್ಲಾ ಸೂಕ್ತ ನೆರವನ್ನು ನೀಡತಕ್ಕದ್ದು.

(2) ಮಾಹಿತಿಗಾಗಿ ಕೋರಿಕೆ ಸಲ್ಲಿಸುವ ಅರ್ಜಿದಾರನನ್ನು, ಅವನನ್ನು ಸಂಪರ್ಕಿಸಲು ಅವಶ್ಯವಿರುವ ವಿವರಗಳನ್ನು ಹೊರತುಪಡಿಸಿ ಮಾಹಿತಿ ಕೋರಿಕೆಗೆ ಯಾವುದೇ ಕಾರಣವನ್ನು ಅಥವಾ ಯಾವುದೇ ಇತರ ವೈಯಕ್ತಿಕ ವಿವರಗಳನ್ನು ನೀಡುವಂತೆ ಅಗತ್ಯಪಡಿಸತಕ್ಕದ್ದಲ್ಲ.

(3) ಒಬ್ಬ ಅರ್ಜಿದಾರನು,–

(i) ಮತ್ತೊಂದು ಸಾರ್ವಜನಿಕ ಪ್ರಾಧಿಕಾರ ಹೊಂದಿರುವಂಥ ಮಾಹಿತಿಗಾಗಿ; ಅಥವಾ

(ii) ವಸ್ತು ವಿಷಯವು ಮತ್ತೊಂದು ಸಾರ್ವಜನಿಕ ಪ್ರಾಧಿಕಾರದ ಕಾರ್ಯನಿರ್ವಹಣೆಗೆ ನಿಕಟವಾಗಿ ಸಂಬಂಧಿಸಿರುವ ಮಾಹಿತಿಗಾಗಿ,

– ಸಾರ್ವಜನಿಕ ಪ್ರಾಧಿಕಾರಕ್ಕೆ ಅರ್ಜಿ ಸಲ್ಲಿಸಿದ್ದರೆ, ಯಾವ ಪ್ರಾಧಿಕಾರಕ್ಕೆ ಅರ್ಜಿ ಸಲ್ಲಿಸಲಾಗಿದೆಯೋ ಆ ಸಾರ್ವಜನಿಕ ಪ್ರಾಧಿಕಾರವು ಅರ್ಜಿಯನ್ನು ಅಥವಾ ಸಮುಚಿತವೆನಿಸಬಹುದಾದ ಅದರ ಭಾಗವನ್ನು ಆ ಮತ್ತೊಂದು ಪ್ರಾಧಿಕಾರಕ್ಕೆ ವರ್ಗಾಯಿಸತಕ್ಕದ್ದು ಮತ್ತು ಅಂಥ ವರ್ಗಾವಣೆಯನ್ನು ಕೂಡಲೇ ಅರ್ಜಿದಾರನಿಗೆ ತಿಳಿಸತಕ್ಕದ್ದು:

ಪರಂತು, ಈ ಉಪಪ್ರಕರಣದ ಅನುಸಾರವಾಗಿ ಅರ್ಜಿಯ ವರ್ಗಾವಣೆಯನ್ನು ಕಾರ್ಯಸಾಧ್ಯವಾದಷ್ಟು ಬೇಗನೆ ಮಾಡತಕ್ಕದ್ದು. ಆದರೆ ಯಾವುದೇ ಸಂದರ್ಭದಲ್ಲಿಯೂ ಅರ್ಜಿ ಸ್ವೀಕರಿಸಿದ ದಿನಾಂಕದಿಂದ ಅದು ಐದು ದಿನಗಳನ್ನು ಮೀರತಕ್ಕದ್ದಲ್ಲ.

7. ಕೋರಿಕೆಯ ವಿಲೆ.– (1) 5ನೇ ಪ್ರಕರಣದ (2)ನೇ ಉಪಪ್ರಕರಣದ ಪರಂತುಕಕ್ಕೆ ಅಥವಾ 6ನೇ ಪ್ರಕರಣದ (3)ನೇ ಉಪಪ್ರಕರಣದ ಪರಂತುಕಕ್ಕೆ ಒಳಪಟ್ಟು, ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿಯು ಅಥವಾ ಸಂದರ್ಭಾನುಸಾರ, ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿಯು 6ನೇ ಪ್ರಕರಣದ ಅಡಿಯಲ್ಲಿ ಕೋರಿಕೆಯನ್ನು ಸ್ವೀಕರಿಸಿದ ನಂತರ ತ್ವರಿತವಾಗಿ ಮತ್ತು ಯಾವುದೇ ಸಂದರ್ಭದಲ್ಲಿ ಕೋರಿಕೆ ಸ್ವೀಕರಿಸಿದ ಮೂವತ್ತು ದಿವಸಗಳೊಳಗಾಗಿ, ನಿಗದಿಪಡಿಸಬಹುದಾದಂತಹ ಶುಲ್ಕವನ್ನು ಸಂದಾಯ ಮಾಡಿದ ಮೇಲೆ ಮಾಹಿತಿ ಒದಗಿಸತಕ್ಕದ್ದು ಅಥವಾ 8 ಮತ್ತು 9ನೇ ಪ್ರಕರಣಗಳಲ್ಲಿ ನಿರ್ದಿಷ್ಟಪಡಿಸಿರುವ ಯಾವುವೇ ಕಾರಣಗಳಿಗಾಗಿ ಕೋರಿಕೆಯನ್ನು ತಿರಸ್ಕರಿಸತಕ್ಕದ್ದು:

ಪರಂತು, ಕೋರಿರುವ ಮಾಹಿತಿಯು ಒಬ್ಬ ವ್ಯಕ್ತಿಯ ಜೀವ ಅಥವಾ ಸ್ವಾತಂತ್ರ್ಯಕ್ಕೆ ಸಂಬಂಧಿಸಿದ್ದಲ್ಲಿ ಆ ಮಾಹಿತಿಯ ಕೋರಿಕೆಯನ್ನು ಸ್ವೀಕರಿಸಿದ ನಲವತ್ತೆಂಟು ಗಂಟೆಗಳೊಳಗಾಗಿ ಒದಗಿಸತಕ್ಕದ್ದು.

(2) ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿಯು ಅಥವಾ ಸಂದರ್ಭಾನುಸಾರ, ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿಯು (1)ನೇ ಉಪಪ್ರಕರಣದ ಅಡಿಯಲ್ಲಿ ನಿರ್ಧಿಷ್ಟಪಡಿಸಿರುವ ಅವಧಿಯೊಳಗಾಗಿ

ಮಾಹಿತಿಗಾಗಿ ಮಾಡಿಕೊಂಡ ಕೋರಿಕೆಯ ಮೇಲೆ ತೀರ್ಮಾನ ತೆಗೆದುಕೊಳ್ಳಲು ವಿಫಲನಾದಲ್ಲಿ, ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿಯು ಅಥವಾ ಸಂದರ್ಭಾನುಸಾರ, ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿಯು ಕೋರಿಕೆಯನ್ನು ತಿರಸ್ಕರಿಸಿದ್ದಾನೆಂದು ಭಾವಿಸತಕ್ಕದ್ದು.

(3) ಮಾಹಿತಿ ಒದಗಿಸುವುದಕ್ಕೆ ಆಗುವ ವೆಚ್ಚವನ್ನು ಸೂಚಿಸುವ ಯಾವುದೇ ಹೆಚ್ಚಿನ ಶುಲ್ಕವನ್ನು ಸಂದಾಯ ಮಾಡಿದ ಮೇಲೆ ಮಾಹಿತಿ ಒದಗಿಸಬೇಕೆಂಬ ತೀರ್ಮಾನ ತೆಗೆದುಕೊಂಡಿದ್ದಲ್ಲಿ, ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿಯು ಅಥವಾ ಸಂದರ್ಭಾನುಸಾರ, ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿಯು ಕೋರಿಕೆ ಸಲ್ಲಿಸಿರುವ ವ್ಯಕ್ತಿಗೆ ಈ ಮುಂದಿನ ವಿವರಗಳನ್ನು ತಿಳಿಸತಕ್ಕದ್ದು,–

(ಎ) (1)ನೇ ಉಪಪ್ರಕರಣದ ಅಡಿಯಲ್ಲಿ ನಿಗದಿಪಡಿಸಿರುವ ಶುಲ್ಕದ ಮೊಬಲಗನ್ನು ನಿರ್ಧರಿಸಲು ಮಾಡಿದ ಲೆಕ್ಕಾಚಾರದೊಂದಿಗೆ ಅವನು ನಿರ್ಧರಿಸಿರುವಂತೆ ಮಾಹಿತಿ ಒದಗಿಸಲು ತಗಲುವ ವೆಚ್ಚವನ್ನು ಸೂಚಿಸುವ ಹೆಚ್ಚಿನ ಶುಲ್ಕದ ವಿವರಗಳು, ಶುಲ್ಕವನ್ನು ಠೇವಣಿ ಇಡುವಂತೆ ಅವನನ್ನು ಕೋರುವುದು ಮತ್ತು ಸದರಿ ಮಾಹಿತಿಯ ರವಾನೆ ಮತ್ತು ಶುಲ್ಕ ಸಂದಾಯದ ನಡುವಿನ ಅವಧಿಯನ್ನು ಆ ಉಪ ಪ್ರಕರಣದಲ್ಲಿ ಉಲ್ಲೇಖಿಸಿರುವ ಮೂವತ್ತು ದಿವಸಗಳ ಅವಧಿಯನ್ನು ಲೆಕ್ಕ ಹಾಕುವ ಉದ್ದೇಶಕ್ಕಾಗಿ ಗಣನೆಗೆ ತೆಗೆದುಕೊಳ್ಳತಕ್ಕದ್ದಲ್ಲ;

(ಬಿ) ಅಪೀಲು ಪ್ರಾಧಿಕಾರ, ಕಾಲಮಿತಿ, ಕಾರ್ಯ ವಿಧಾನ ಮತ್ತು ಯಾವುದೇ ಇತರ ನಮೂನೆಗಳ ವಿವರಗಳು ಸೇರಿದಂತೆ ವಿಧಿಸಲಾದ ಶುಲ್ಕ ಅಥವಾ ಒದಗಿಸಲಾದ ಮಾಹಿತಿ ಪಡೆಯುವ ಅವಕಾಶದ ವಿಧಾನದ ಬಗೆಗಿನ ತೀರ್ಮಾನವನ್ನು ಪುನರ್ ಪರಿಶೀಲಿಸುವ ಸಂಬಂಧದಲ್ಲಿ ಅವನಿಗೆ ಅಥವಾ ಅವಳಿಗೆ ಇರುವ ಹಕ್ಕಿಗೆ ಸಂಬಂಧಿಸಿದ ಮಾಹಿತಿ.

(4) ಈ ಅಧಿನಿಯಮದ ಅಡಿಯಲ್ಲಿ ದಾಖಲೆ ಅಥವಾ ಅದರ ಭಾಗವನ್ನು ನೋಡುವ ಅವಕಾಶ ಕಲ್ಪಿಸುವುದು ಅಗತ್ಯವಾಗಿರುವಲ್ಲಿ ಮತ್ತು ಯಾರಿಗೆ ಆ ಅವಕಾಶ ಕಲ್ಪಿಸಬೇಕಾಗಿದೆಯೋ ಆ ವ್ಯಕ್ತಿಯ ಇಂದ್ರಿಯಗಳಿಗೆ ಸಂಬಂಧಿಸಿದಂತೆ ಅಂಗವಿಕಲನಾಗಿದ್ದಲ್ಲಿ, ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿಯು ಅಥವಾ ಸಂದರ್ಭಾನುಸಾರ, ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿಯು ಪರಿಶೀಲನೆಗೆ ಸೂಕ್ತವಾದಂತಹ ನೆರವನ್ನು ಒದಗಿಸುವುದೂ ಒಳಗೊಂಡಂತೆ ಮಾಹಿತಿಯನ್ನು ನೋಡಿ ಪಡೆಯಲು ಸಾಧ್ಯವಾಗುವಂತಹ ನೆರವನ್ನೂ ಒದಗಿಸತಕ್ಕದ್ದು.

(5) ಮಾಹಿತಿ ಪಡೆಯಲು ಒದಗಿಸುವ ಅವಕಾಶವು ಮುದ್ರಣ ಅಥವಾ ಯಾವುದೇ ವಿದ್ಯುನ್ಮಾನ ನಮೂನೆಯಲ್ಲಿದ್ದಲ್ಲಿ ಅರ್ಜಿದಾರನು (6)ನೇ ಉಪಪ್ರಕರಣದ ಉಪಬಂಧಗಳಿಗೊಳಪಟ್ಟು ನಿಗದಿಪಡಿಸಬಹುದಾದಂತಹ ಶುಲ್ಕವನ್ನು ಸಂದಾಯ ಮಾಡತಕ್ಕದ್ದು:

ಪರಂತು, 6ನೇ ಪ್ರಕರಣದ (1)ನೇ ಉಪಪ್ರಕರಣ ಮತ್ತು 7ನೇ ಪ್ರಕರಣದ (1) ಮತ್ತು (5)ನೇ ಉಪಪ್ರಕರಣದ ಅಡಿಯಲ್ಲಿ ನಿಗದಿಪಡಿಸಿರುವ ಶುಲ್ಕವು ಯುಕ್ತವಾಗಿರತಕ್ಕದ್ದು ಮತ್ತು ಸಮುಚಿತ ಸರ್ಕಾರವು ನಿರ್ಧರಿಸಬಹುದಾದಂತೆ ಬಡತನ ರೇಖೆಗಿಂತ ಕೆಳಗಿರುವ ವ್ಯಕ್ತಿಗಳಿಗೆ ಅಂತಹ ಶುಲ್ಕವನ್ನು ವಿಧಿಸತಕ್ಕದ್ದಲ್ಲ.

(6) (5)ನೇ ಉಪಪ್ರಕರಣದಲ್ಲಿ ಏನೇ ಇದ್ದರೂ ಸಾರ್ವಜನಿಕ ಪ್ರಾಧಿಕಾರವು (1)ನೇ ಉಪಪ್ರಕರಣದಲ್ಲಿ ನಿರ್ದಿಷ್ಟಪಡಿಸಿರುವ ಕಾಲಮಿತಿಗಳನ್ನು ಪಾಲಿಸಲು ವಿಫಲವಾದಲ್ಲಿ ಮಾಹಿತಿಗಾಗಿ ಕೋರಿಕೆ ಸಲ್ಲಿಸುವ ವ್ಯಕ್ತಿಗೆ ಮಾಹಿತಿಯನ್ನು, ಶುಲ್ಕವಿಲ್ಲದೆ ಒದಗಿಸತಕ್ಕದ್ದು.

(7) (1)ನೇ ಉಪಪ್ರಕರಣದ ಅಡಿಯಲ್ಲಿ ಯಾವುದೇ ತೀರ್ಮಾನ ತೆಗೆದುಕೊಳ್ಳುವುದಕ್ಕೆ ಮೊದಲು ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿಯು ಅಥವಾ ಸಂದರ್ಭಾನುಸಾರ, ರಾಜ್ಯ ಸಾರ್ವಜನಿಕ ಮಾಹಿತಿ

ಅಧಿಕಾರಿಯು 11ನೇ ಪ್ರಕರಣದ ಅಡಿಯಲ್ಲಿ ಮೂರನೇ ಪಕ್ಷಕಾರನು ಸಲ್ಲಿಸಿದ ಮನವಿಯನ್ನು ಗಣನೆಗೆ ತೆಗೆದುಕೊಳ್ಳತಕ್ಕದ್ದು.

(8) ಕೋರಿಕೆಯನ್ನು (1)ನೇ ಉಪಪ್ರಕರಣದ ಅಡಿಯಲ್ಲಿ ನಿರಾಕರಿಸಿದಲ್ಲಿ, ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿಯು ಅಥವಾ ಸಂದರ್ಭಾನುಸಾರ, ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿಯು ಕೋರಿಕೆ ಸಲ್ಲಿಸುವ ವ್ಯಕ್ತಿಗೆ,–

(i) ಅಂಥ ನಿರಾಕರಣೆಗೆ ಕಾರಣಗಳನ್ನು;

(ii) ಅಂಥ ನಿರಾಕರಣೆಯ ವಿರುದ್ಧ ಅಪೀಲು ಸಲ್ಲಿಸಲು ಇರುವ ಅವಧಿಯನ್ನು; ಮತ್ತು

(iii) ಅಪೀಲು ಪ್ರಾಧಿಕಾರದ ವಿವರಗಳನ್ನು ತಿಳಿಸತಕ್ಕದ್ದು.

(9) ಮಾಹಿತಿಯನ್ನು, ಸಾರ್ವಜನಿಕ ಪ್ರಾಧಿಕಾರದ ಸಂಪನ್ಮೂಲಗಳು ಅತಿ ಹೆಚ್ಚಿನ ಪ್ರಮಾಣದಲ್ಲಿ ಬಳಕೆಯಾಗುವಂತಿದ್ದ ಹೊರತು, ಅಥವಾ ಪ್ರಶ್ನಿತವಾಗಿರುವ ದಾಖಲೆಯ ಸುರಕ್ಷತೆಗೆ ಅಥವಾ ಸಂರಕ್ಷಣೆಗೆ ಹಾನಿಯುಂಟಾಗುವಂತಿದ್ದ ಹೊರತು, ಸಾಮಾನ್ಯವಾಗಿ ಅದನ್ನು ಕೋರಿದ ನಮೂನೆಯಲ್ಲಿ ಒದಗಿಸತಕ್ಕದ್ದು.

8. ಮಾಹಿತಿಯನ್ನು ಬಹಿರಂಗಪಡಿಸುವುದರಿಂದ ವಿನಾಯಿತಿ.– (1) ಈ ಅಧಿನಿಯಮದಲ್ಲಿ ಏನೇ ಇದ್ದರೂ, ಯಾರೇ ನಾಗರಿಕನಿಗೆ ಈ ಮುಂದಿನ ಯಾವುದೇ ಮಾಹಿತಿಯನ್ನು ನೀಡುವುದು ಕಡ್ಡಾಯವಾಗಿರತಕ್ಕದ್ದಲ್ಲ; ಎಂದರೆ,–

(ಎ) ಯಾವ ಮಾಹಿತಿಯನ್ನು ಬಹಿರಂಗಪಡಿಸುವುದರಿಂದ ಭಾರತದ ಸಾರ್ವಭೌಮತ್ವ ಮತ್ತು ಏಕತೆ, ರಾಷ್ಟ್ರದ ಭದ್ರತೆ, ಕಾರ್ಯ ತಂತ್ರ, ರಾಜ್ಯದ ವೈಜ್ಞಾನಿಕ ಅಥವಾ ಆರ್ಥಿಕ ಹಿತಾಸಕ್ತಿಗಳು, ವಿದೇಶದೊಂದಿಗಿನ ಸಂಬಂಧ ಇವುಗಳ ಮೇಲೆ ಪ್ರತಿಕೂಲ ಪರಿಣಾಮವುಂಟಾಗುತ್ತದೋ ಅಥವಾ ಒಂದು ಅಪರಾಧಕ್ಕೆ ಪ್ರೇರಣೆ ನೀಡುತ್ತದೋ ಅಂಥ ಮಾಹಿತಿ;

(ಬಿ) ಯಾವುದೇ ನ್ಯಾಯಾಲಯ ಅಥವಾ ನ್ಯಾಯಾಧಿಕರಣವು ಯಾವ ಮಾಹಿತಿ ಪ್ರಕಟಣೆಯನ್ನು ಸ್ಪಷ್ಟವಾಗಿ ನಿಷೇಧಿಸಿದೆಯೋ ಅಥವಾ ಯಾವ ಮಾಹಿತಿಯನ್ನು ಬಹಿರಂಗಪಡಿಸುವುದರಿಂದ ನ್ಯಾಯಾಲಯ ನಿಂದನೆಯಾಗಬಹುದೋ ಅಂಥ ಮಾಹಿತಿ;

(ಸಿ) ಯಾವ ಮಾಹಿತಿಯನ್ನು ಬಹಿರಂಗಪಡಿಸುವುದರಿಂದ ಸಂಸತ್ತು ಅಥವಾ ರಾಜ್ಯ ವಿಧಾನ ಮಂಡಲದ ಹಕ್ಕುಚ್ಯುತಿ ಉಂಟಾಗುವುದೋ ಅಂಥ ಮಾಹಿತಿ;

(ಡಿ) ಯಾವ ಮಾಹಿತಿಯನ್ನು ಬಹಿರಂಗಪಡಿಸುವುದರಿಂದ ಮೂರನೇ ಪಕ್ಷದಾರನ ಸ್ಪರ್ಧಾತ್ಮಕತೆಗೆ ತೊಂದರೆಯುಂಟಾಗುತ್ತದೋ ಅಂಥ ವಾಣಿಜ್ಯ ರಹಸ್ಯ, ವ್ಯಾಪಾರ ಗೌಪ್ಯತೆಗಳು ಅಥವಾ ಬೌದ್ಧಿಕ ಆಸ್ತಿಯನ್ನೊಳಗೊಂಡ ಮಾಹಿತಿ, ಅಂಥ ಮಾಹಿತಿಯನ್ನು ಬಹಿರಂಗಪಡಿಸುವುದು ಬಹುಸಂಖ್ಯೆಯ ಸಾರ್ವಜನಿಕರ ಹಿತದೃಷ್ಟಿಯಿಂದ ಅಗತ್ಯವೆಂದು ಸಕ್ಷಮ ಪ್ರಾಧಿಕಾರಿಗೆ ಮನದಟ್ಟಾದ ಹೊರತು;

(ಇ) ತನ್ನ ನಂಬಿಕೆಯ ವಿಶ್ವಾಸದ ಸಂಬಂಧದಲ್ಲಿ ಒಬ್ಬ ವ್ಯಕ್ತಿಗೆ ದೊರಕುವ ಮಾಹಿತಿ, ಅಂಥ ಮಾಹಿತಿಯನ್ನು ಬಹಿರಂಗಪಡಿಸುವುದು ಬಹುಸಂಖ್ಯೆಯ ಸಾರ್ವಜನಿಕರ ಹಿತದೃಷ್ಟಿಯಿಂದ ಅಗತ್ಯವೆಂದು ಸಕ್ಷಮ ಪ್ರಾಧಿಕಾರಿಗೆ ಮನದಟ್ಟಾದ ಹೊರತು;

(ಎಫ್) ವಿದೇಶಿ ಸರ್ಕಾರದಿಂದ ರಹಸ್ಯವಾಗಿ ಪಡೆದ ಮಾಹಿತಿ;

(ಜಿ) ಯಾವ ಮಾಹಿತಿಯನ್ನು ಬಹಿರಂಗಪಡಿಸುವುದರಿಂದ ಯಾರೇ ವ್ಯಕ್ತಿಯ ಜೀವ ಅಥವಾ ದೈಹಿಕ ಸುರಕ್ಷತೆಗೆ ಅಪಾಯ ಉಂಟಾಗುತ್ತದೋ ಅಂಥ ಮಾಹಿತಿ ಅಥವಾ ಕಾನೂನು ಜಾರಿಯ ಅಥವಾ ಭದ್ರತೆಯ ಉದ್ದೇಶಗಳಿಗಾಗಿ ರಹಸ್ಯವಾಗಿ ನೀಡಿದ ಮಾಹಿತಿಯ ಅಥವಾ ಸಹಾಯದ ಮೂಲವನ್ನು ಗುರುತಿಸಬಹುದಾದಂಥ ಮಾಹಿತಿ;

(ಹೆಚ್) ತನಿಖಾ ಕ್ರಮಕ್ಕೆ ಅಥವಾ ಅಪರಾಧಿಗಳ ದಸ್ತಗಿರಿಗೆ ಅಥವಾ ಪ್ರಾಸಿಕ್ಯೂಷನ್ ಕಾರ್ಯಕ್ಕೆ ಅಡಚಣೆಯನ್ನುಂಟು ಮಾಡುವಂಥ ಮಾಹಿತಿ;

(ಐ) ಮಂತ್ರಿ ಪರಿಷತ್ತಿನ, ಕಾರ್ಯದರ್ಶಿಗಳ ಮತ್ತು ಇತರ ಅಧಿಕಾರಿಗಳ ಚರ್ಚೆಗಳ ದಾಖಲೆಗಳು ಸೇರಿದಂತೆ ಸಚಿವ ಸಂಪುಟದ ಕಾಗದ ಪತ್ರಗಳು;

ಪರಂತು, ಮಂತ್ರಿ ಪರಿಷತ್ತಿನ ನಿರ್ಣಯಗಳು, ಆ ನಿರ್ಣಯಗಳಿಗೆ ಕಾರಣಗಳು ಮತ್ತು ತೆಗೆದುಕೊಂಡ ನಿರ್ಣಯಗಳಿಗೆ ಆಧರಿಸಿದ ವಿಷಯ ಸಾಮಗ್ರಿ ಇವುಗಳನ್ನು, ನಿರ್ಣಯವನ್ನು ತೆಗೆದುಕೊಂಡ ಮತ್ತು ಆ ವಿಷಯ ಪೂರ್ಣಗೊಂಡ ಅಥವಾ ಮುಕ್ತಾಯಗೊಂಡ ತರುವಾಯ ಸಾರ್ವಜನಿಕರಿಗೆ ತಿಳಿಯುವಂತೆ ಮಾಡತಕ್ಕದ್ದು:

ಮತ್ತೂ ಮತ್ತೂ, ಈ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿದ ವಿನಾಯಿತಿಗಳ ಅಡಿಯಲ್ಲಿ ಬರುವಂಥ ವಿಷಯಗಳನ್ನು ಬಹಿರಂಗಪಡಿಸತಕ್ಕದ್ದಲ್ಲ.

(ಜೆ) ಸಂದರ್ಭಾನುಸಾರ, ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿ ಅಥವಾ ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿ ಅಥವಾ ಅಪೀಲು ಪ್ರಾಧಿಕಾರಕ್ಕೆ ಅಂಥ ಮಾಹಿತಿಯನ್ನು ಬಹಿರಂಗಪಡಿಸುವುದು ಬಹುಸಂಖ್ಯೆಯ ಸಾರ್ವಜನಿಕರ ಹಿತದೃಷ್ಟಿಯಿಂದ ನ್ಯಾಯಸಮ್ಮತ ಎಂದು ಮನದಟ್ಟಾದ ಹೊರತು ಯಾವ ಮಾಹಿತಿಯ ಬಹಿರಂಗಪಡಿಸುವಿಕೆಯು ಯಾವುದೇ ಸಾರ್ವಜನಿಕ ಚಟುವಟಿಕೆ ಅಥವಾ ಹಿತಾಸಕ್ತಿಗೆ ಸಂಬಂಧಪಡುವುದಿಲ್ಲವೋ ಅಥವಾ ಯಾವ ಮಾಹಿತಿಯನ್ನು ಬಹಿರಂಗಪಡಿಸುವುದರಿಂದ ವ್ಯಕ್ತಿಗತ ಗೌಪ್ಯತೆಯನ್ನು ಅನಗತ್ಯವಾಗಿ ಅತಿಕ್ರಮಿಸಿದಂತಾಗುತ್ತದೆಯೋ ಅಂಥ ವೈಯಕ್ತಿಕ ಮಾಹಿತಿಗೆ ಸಂಬಂಧಿಸಿದ ಮಾಹಿತಿ:

ಪರಂತು, ಸಂಸತ್ತು ಅಥವಾ ರಾಜ್ಯ ವಿಧಾನ ಮಂಡಲಕ್ಕೆ ನಿರಾಕರಿಸಲಾಗದಂಥ ಮಾಹಿತಿಯನ್ನು ಯಾರೇ ವ್ಯಕ್ತಿಗೆ ನಿರಾಕರಿಸತಕ್ಕದ್ದಲ್ಲ.

(2) ಸರ್ಕಾರಿ ರಹಸ್ಯಗಳ ಅಧಿನಿಯಮ, 1923 (1923ರ 19) ರಲ್ಲಿ ಏನೇ ಇದ್ದರೂ ಅಥವಾ (1)ನೇ ಉಪಪ್ರಕರಣದ ಅನುಸಾರವಾಗಿ ಅನುಮತಿಸಬಹುದಾದ ವಿನಾಯಿತಿಗಳೇನೇ ಇದ್ದರೂ, ಬಹಿರಂಗಪಡಿಸುವುದರಿಂದ ಸಂರಕ್ಷಿತ ಹಿತಾಸಕ್ತಿಗಳಿಗೆ ಉಂಟಾಗುವ ಆಪಾಯಕ್ಕಿಂತ ಸಾರ್ವಜನಿಕ ಹಿತಾಸಕ್ತಿಯೇ ಪ್ರಮುಖವಾಗಿದ್ದರೆ, ಸಾರ್ವಜನಿಕ ಪ್ರಾಧಿಕಾರವು ಆ ಮಾಹಿತಿಯನ್ನು ಪಡೆಯಲು ಅನುಮತಿ ನೀಡಬಹುದು.

(3) 6ನೇ ಪ್ರಕರಣದ ಅಡಿಯಲ್ಲಿ ಕೋರಿಕೆ ಸಲ್ಲಿಸಿದ ದಿನಾಂಕಕ್ಕೆ ಇಪ್ಪತ್ತು ವರ್ಷಗಳಷ್ಟು ಹಿಂದೆ ನಡೆದಿರುವ, ಉಂಟಾಗಿರುವ ಅಥವಾ ಸಂಭವಿಸಿರುವ ಯಾವುದೇ ಘಟನೆ, ಸಂಗತಿ ಅಥವಾ ವಿಷಯಕ್ಕೆ ಸಂಬಂಧಪಟ್ಟ ಯಾವುದೇ ಮಾಹಿತಿಯನ್ನು ಆ ಪ್ರಕರಣದ ಮೇರೆಗೆ ಕೋರಿಕೆ ಸಲ್ಲಿಸುವಂಥ ಯಾರೇ ವ್ಯಕ್ತಿಗೆ (1)ನೇ ಉಪ ಪ್ರಕರಣದ (ಎ) (ಸಿ) ಮತ್ತು (ಐ) ಖಂಡಗಳ ಉಪಬಂಧಗಳಿಗೊಳಪಟ್ಟು ಒದಗಿಸತಕ್ಕದ್ದು:

ಪರಂತು, ಸದರಿ ಇಪ್ಪತ್ತು ವರ್ಷಗಳ ಅವಧಿಯನ್ನು ಯಾವ ದಿನಾಂಕದಿಂದ ಲೆಕ್ಕ ಹಾಕಬೇಕು ಎಂಬ ಬಗ್ಗೆ ಯಾವುದೇ ಪ್ರಶ್ನೆ ಉದ್ಭವಿಸಿದಲ್ಲಿ, ಈ ಅಧಿನಿಯಮದಲ್ಲಿ ಉಪಬಂಧಿಸಲಾದ ಅಪೀಲುಗಳಿಗೆ ಒಳಪಟ್ಟು, ಕೇಂದ್ರ ಸರ್ಕಾರದ ತೀರ್ಮಾನವೇ ಅಂತಿಮವಾಗಿರತಕ್ಕದ್ದು.

9. ಕೆಲವು ಸಂದರ್ಭಗಳಲ್ಲಿ ಮಾಹಿತಿ ಪಡೆಯುವ ಅವಕಾಶದ ನಿರಾಕರಣೆಗೆ ಆಧಾರಗಳು.– 8ನೇ ಪ್ರಕರಣದ ಉಪಬಂಧಗಳಿಗೆ ಬಾಧಕವಾಗದಂತೆ, ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿಯು ಅಥವಾ ಸಂದರ್ಭಾನುಸಾರ, ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿಯು, ಅಂಥ ಮಾಹಿತಿಯನ್ನು ಒದಗಿಸುವುದರಿಂದ ರಾಜ್ಯವನ್ನು ಹೊರತುಪಡಿಸಿ ಒಬ್ಬ ವ್ಯಕ್ತಿಯು ಹೊಂದಿರುವ ಕೃತಿಸ್ವಾಮ್ಯದ ಉಲ್ಲಂಘನೆಯಾಗಬಹುದಾದಲ್ಲಿ ಮಾಹಿತಿಗಾಗಿ ಮಾಡಿದ ಕೋರಿಕೆಯನ್ನು ನಿರಾಕರಿಸಬಹುದು.

10. ಪ್ರತ್ಯೇಕಿಸುವಿಕೆ.– (1) ಮಾಹಿತಿ ಪಡೆಯುವುದಕ್ಕಾಗಿ ಸಲ್ಲಿಸಿದ ಕೋರಿಕೆಯನ್ನು, ಕೋರಿರುವ ಮಾಹಿತಿಯು ಬಹಿರಂಗಪಡಿಸುವುದರಿಂದ ವಿನಾಯಿತಿಗೊಳಿಸಿರುವಂಥ ಮಾಹಿತಿಗೆ ಸಂಬಂಧಿಸಿದ್ದಾಗಿದೆ ಎಂಬ ಕಾರಣದ ಮೇಲೆ ತಳ್ಳಿ ಹಾಕಿದಾಗ ಈ ಅಧಿನಿಯಮದಲ್ಲಿ ಏನೇ ಒಳಗೊಂಡಿದ್ದರೂ, ಈ ಅಧಿನಿಯಮದ ಅಡಿಯಲ್ಲಿ ಬಹಿರಂಗಪಡಿಸುವುದರಿಂದ ವಿನಾಯಿತಿಗೊಳಿಸಿರುವಂಥ ಯಾವುದೇ ಮಾಹಿತಿಯನ್ನು ಒಳಗೊಂಡಿರದಂಥ ಹಾಗೂ ವಿನಾಯಿತಿಗೊಳಿಸಿರುವ ಮಾಹಿತಿಯನ್ನೊಳಗೊಂಡ ಯಾವುದೇ ಭಾಗದಿಂದ ಅದನ್ನು ಯುಕ್ತವಾಗಿ ಪ್ರತ್ಯೇಕಿಸಬಹುದಾದಂಥ ದಾಖಲೆಯ ಆ ಭಾಗವನ್ನು ಪಡೆಯಲು ಅವಕಾಶ ನೀಡಬಹುದು.

(2) ಉಪಪ್ರಕರಣ (1)ರ ಮೇರೆಗೆ ದಾಖಲೆಯ ಆ ಭಾಗವನ್ನು ಪಡೆಯುವ ಅವಕಾಶವನ್ನು ನೀಡಿದಾಗ ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿ ಅಥವಾ ಸಂದರ್ಭಾನುಸಾರ, ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿಯು,–

(ಎ) ಬಹಿರಂಗಪಡಿಸುವುದರಿಂದ ವಿನಾಯಿತಿಗೊಳಿಸಲಾಗಿರುವಂಥ ಮಾಹಿತಿಯನ್ನು ಒಳಗೊಂಡಿರುವ ದಾಖಲೆಯನ್ನು ಪ್ರತ್ಯೇಕಿಸಿದ ನಂತರ, ಕೋರಲಾಗಿರುವ ದಾಖಲೆಯ ಭಾಗವನ್ನು ಮಾತ್ರ ಒದಗಿಸಲಾಗುತ್ತದೆ ಎಂದು ತಿಳಿಸಿ;

(ಬಿ) ನಿರ್ಣಯಗಳು ಯಾವ ವಿಷಯ ಸಾಮಗ್ರಿಯನ್ನು ಆಧರಿಸಿವೆಯೋ ಆ ವಿಷಯ ಸಾಮಗ್ರಿಯ ಉಲ್ಲೇಖವನ್ನು ಒಳಗೊಂಡಂತೆ ಸಂಗತಿಗೆ ಸಂಬಂಧಿಸಿದ ಯಾವುದೇ ಮುಖ್ಯ ಪ್ರಶ್ನೆಯ ಮೇಲಿನ ಯಾವುದೇ ನಿರ್ಣಯಕ್ಕೆ ಕಾರಣಗಳು;

(ಸಿ) ನಿರ್ಣಯ ನೀಡುವ ವ್ಯಕ್ತಿಯ ಹೆಸರು ಮತ್ತು ಪದನಾಮ;

(ಡಿ) ಆತನು ಅಥವಾ ಆಕೆಯು ಲೆಕ್ಕ ಹಾಕಿದ ಶುಲ್ಕದ ವಿವರಗಳು ಮತ್ತು ಅರ್ಜಿದಾರನು ಠೇವಣಿ ಮಾಡಬೇಕಾದ ಶುಲ್ಕದ ಮೊಬಲಗು; ಮತ್ತು

(ಇ) ಮಾಹಿತಿಯ ಭಾಗವನ್ನು ಬಹಿರಂಗಪಡಿಸದಿರುವುದಕ್ಕೆ ಸಂಬಂಧಿಸಿದ ನಿರ್ಧಾರವನ್ನು ಪುನರ್ ಪರಿಶೀಲಿಸುವುದಕ್ಕೆ ಸಂಬಂಧಪಟ್ಟಂತೆ ಆತನಿಗೆ ಅಥವಾ ಆಕೆಗೆ ಇರುವ ಹಕ್ಕುಗಳು, ವಿಧಿಸಲಾದ ಶುಲ್ಕದ ಮೊಬಲಗು ಅಥವಾ ಮಾಹಿತಿ ಪಡೆಯುವ ಅವಕಾಶದ ರೀತಿ ಹಾಗೂ 19ನೇ ಪ್ರಕರಣದ (1)ನೇ ಉಪ ಪ್ರಕರಣದ ಅಡಿಯಲ್ಲಿ ನಿರ್ದಿಷ್ಟಪಡಿಸಿರುವ ಹಿರಿಯ ಅಧಿಕಾರಿಯ ಅಥವಾ ಕೇಂದ್ರ ಮಾಹಿತಿ ಆಯೋಗದ ಅಥವಾ ಸಂದರ್ಭಾನುಸಾರ, ರಾಜ್ಯ ಮಾಹಿತಿ ಆಯೋಗದ ವಿವರಗಳು ಕಾಲಪರಿಮಿತಿ, ಪ್ರಕ್ರಿಯೆ ಹಾಗೂ ಮಾಹಿತಿ ಪಡೆಯುವ ಯಾವುದೇ ಇತರ ರೀತಿ ಇವುಗಳನ್ನು ತಿಳಿಸಿ ಅರ್ಜಿದಾರನಿಗೆ ಒಂದು ನೋಟೀಸು ನೀಡತಕ್ಕದ್ದು.

11. ಮೂರನೇ ಪಕ್ಷದಾರನ ಮಾಹಿತಿ.– (1) ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿಯು ಅಥವಾ ಸಂದರ್ಭಾನುಸಾರ, ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿಯು ಈ ಅಧಿನಿಯಮದ ಮೇರೆಗೆ ಸಲ್ಲಿಸಿರುವ ಕೋರಿಕೆಯ ಮೇಲೆ ಮೂರನೇ ಪಕ್ಷಕಾರನಿಗೆ ಸಂಬಂಧಿಸಿದ ಅಥವಾ ಆತ ಪೂರೈಸಿದಂಥ ಹಾಗೂ ಆ ಮೂರನೇ ಪಕ್ಷಕಾರನು ರಹಸ್ಯ ಎಂದು ಪರಿಗಣಿಸಿರುವಂಥ ಯಾವುದೇ ಮಾಹಿತಿಯನ್ನು ಅಥವಾ ದಾಖಲೆಯನ್ನು ಅಥವಾ ಅದರ ಭಾಗವನ್ನು ಬಹಿರಂಗಪಡಿಸಲು ಉದ್ದೇಶಿಸಿದಲ್ಲಿ, ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿಯು ಅಥವಾ ಸಂದರ್ಭಾನುಸಾರ, ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿಯು ಕೋರಿಕೆಯನ್ನು ಸ್ವೀಕರಿಸಿದ ಐದು ದಿವಸಗಳೊಳಗೆ, ಆ ಕೋರಿಕೆಯನ್ನು ಸಲ್ಲಿಸಿರುವಂಥ ಮೂರನೆ ಪಕ್ಷಕಾರನಿಗೆ ಮಾಹಿತಿಯನ್ನು ಅಥವಾ ದಾಖಲೆಯನ್ನು ಅಥವಾ ಅದರ ಭಾಗವನ್ನು ಬಹಿರಂಗಪಡಿಸಲು ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿಯು ಅಥವಾ ಸಂದರ್ಭಾನುಸಾರ, ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿಯು ಉದ್ದೇಶಿಸಿದ್ದಾನೆ ಎಂಬ ವಾಸ್ತವ ಸಂಗತಿಯನ್ನು ತಿಳಿಸಿ ಲಿಖಿತ ನೋಟೀಸು ನೀಡತಕ್ಕದ್ದು ಹಾಗೂ ಮಾಹಿತಿಯನ್ನು ಬಹಿರಂಗಪಡಿಸಬೇಕೆ ಎಂಬ ಬಗ್ಗೆ ಲಿಖಿತ ಅಥವಾ

ಮೌಖಿಕ ಹೇಳಿಕೆಯನ್ನು ಸಲ್ಲಿಸುವಂತೆ ಮೂರನೇ ಪಕ್ಷಕಾರನನ್ನು ಕೋರತಕ್ಕದ್ದು ಹಾಗೂ ಮೂರನೆ ಪಕ್ಷಕಾರನು ಸಲ್ಲಿಸಿದ ಅಂಥ ಹೇಳಿಕೆಯನ್ನು, ಮಾಹಿತಿಯನ್ನು ಬಹಿರಂಗಪಡಿಸುವ ಬಗ್ಗೆ ತೀರ್ಮಾನ ತೆಗೆದುಕೊಳ್ಳುವಾಗ ಗಮನದಲ್ಲಿ ಇಟ್ಟುಕೊಳ್ಳತಕ್ಕದ್ದು:

ಪರಂತು, ಕಾನೂನಿನಿಂದ ರಕ್ಷಣೆ ಒದಗಿಸಿರುವಂಥ ವ್ಯಾಪಾರ ಅಥವಾ ವಾಣಿಜ್ಯ ರಹಸ್ಯಗಳ ವಿಷಯದಲ್ಲಿ ಹೊರತು, ಬಹಿರಂಗಪಡಿಸುವುದರಲ್ಲಿರುವ ಸಾರ್ವಜನಿಕ ಹಿತಾಸಕ್ತಿಯು ಅಂಥ ಮೂರನೇ ಪಕ್ಷಕಾರನ ಹಿತಾಸಕ್ತಿಗೆ ಉಂಟಾಗುವ ಯಾವುದೇ ಸಂಭಾವ್ಯ ಹಾನಿ ಅಥವಾ ಕ್ಷತಿಗಿಂತ ಪ್ರಮುಖವೆನಿಸಿದ ಪಕ್ಷದಲ್ಲಿ ಬಹಿರಂಗಪಡಿಸುವುದಕ್ಕೆ ಅನುಮತಿ ನೀಡಬಹುದು.

(2) ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿಯು ಅಥವಾ ಸಂದರ್ಭಾನುಸಾರ, ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿಯು, ಯಾವುದೇ ಮಾಹಿತಿ ಅಥವಾ ದಾಖಲೆ ಅಥವಾ ಅದರ ಭಾಗದ ಸಂಬಂಧದಲ್ಲಿ ಮೂರನೆಯ ಪಕ್ಷಕಾರನಿಗೆ ಉಪಪ್ರಕರಣ (1)ರ ಮೇರೆಗೆ ನೋಟೀಸನ್ನು ಜಾರಿ ಮಾಡಿರುವಲ್ಲಿ, ಅಂಥ ನೋಟೀಸನ್ನು ಸ್ವೀಕರಿಸಿದ ದಿನಾಂಕದಿಂದ ಹತ್ತು ದಿವಸಗಳೊಳಗೆ ಉದ್ದೇಶಿತ ಬಹಿರಂಗಪಡಿಸುವಿಕೆಯ ವಿರುದ್ಧ ಮನವಿಯನ್ನು ಸಲ್ಲಿಸಲು ಮೂರನೆಯ ಪಕ್ಷಕಾರನಿಗೆ ಅವಕಾಶ ನೀಡತಕ್ಕದ್ದು.

(3) 7ನೇ ಪ್ರಕರಣದಲ್ಲಿ ಏನೇ ಒಳಗೊಂಡಿದ್ದರೂ, ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿಯು ಅಥವಾ ಸಂದರ್ಭಾನುಸಾರ, ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿಯು, (2)ನೇ ಉಪಪ್ರಕರಣದ ಅಡಿಯಲ್ಲಿ ಮನವಿಯನ್ನು ಸಲ್ಲಿಸಲು ಮೂರನೆಯ ಪಕ್ಷಕಾರನಿಗೆ ಅವಕಾಶ ನೀಡಿದ್ದರೆ 6ನೇ ಪ್ರಕರಣದ ಅಡಿಯಲ್ಲಿ ಸಲ್ಲಿಸಿದ ಕೋರಿಕೆಯನ್ನು ಸ್ವೀಕರಿಸಿದ ನಂತರ ನಲವತ್ತು ದಿವಸಗಳೊಳಗಾಗಿ ಮಾಹಿತಿಯನ್ನು ಅಥವಾ ದಾಖಲೆಯನ್ನು ಅಥವಾ ಅದರ ಭಾಗವನ್ನು ಬಹಿರಂಗಪಡಿಸುವುದಕ್ಕೆ ಅಥವಾ ಬಹಿರಂಗಪಡಿಸದಿರುವುದಕ್ಕೆ ಸಂಬಂಧಪಟ್ಟಂತೆ ನಿರ್ಣಯ ತೆಗೆದುಕೊಂಡು ತನ್ನ ನಿರ್ಣಯವನ್ನು ತಿಳಿಸಿರುವ ಲಿಖಿತ ನೋಟೀಸನ್ನು ಮೂರನೆಯ ಪಕ್ಷಕಾರನಿಗೆ ನೀಡತಕ್ಕದ್ದು.

(4) (3)ನೇ ಉಪಪ್ರಕರಣದ ಅಡಿಯಲ್ಲಿ ನೀಡಲಾದ ನೋಟೀಸಿನಲ್ಲಿ ಯಾರಿಗೆ ನೋಟಿಸನ್ನು ನೀಡಲಾಗಿದೆಯೋ ಅಂಥ ಮೂರನೇ ಪಕ್ಷಕಾರನು ಆ ನಿರ್ಣಯದ ವಿರುದ್ಧ 19ನೇ ಪ್ರಕರಣದ ಮೇರೆಗೆ ಅಪೀಲು ಸಲ್ಲಿಸಲು ಹಕ್ಕುಳ್ಳವನಾಗಿರುತ್ತಾನೆ ಎಂಬ ಹೇಳಿಕೆಯನ್ನು ಒಳಗೊಂಡಿರಕ್ಕದ್ದು.

## ಅಧ್ಯಾಯ – III

## ಕೇಂದ್ರ ಮಾಹಿತಿ ಆಯೋಗ

12. ಕೇಂದ್ರ ಮಾಹಿತಿ ಆಯೋಗದ ರಚನೆ.– (1) ಕೇಂದ್ರ ಸರ್ಕಾರವು, ಅಧಿಕೃತ ರಾಜಪತ್ರದಲ್ಲಿ ಅಧಿಸೂಚನೆಯ ಮೂಲಕ ಈ ಅಧಿನಿಯಮದ ಮೇರೆಗೆ ಪ್ರದತ್ತವಾದ ಅಧಿಕಾರಗಳನ್ನು ಚಲಾಯಿಸಲು ಮತ್ತು ವಹಿಸಿದ ಪ್ರಕಾರ್ಯಗಳನ್ನು ನಿರ್ವಹಿಸಲು ಕೇಂದ್ರ ಮಾಹಿತಿ ಆಯೋಗ ಎಂಬ ಹೆಸರಿನ ಸಂಸ್ಥೆಯನ್ನು ರಚಿಸತಕ್ಕದ್ದು.

(2) ಕೇಂದ್ರ ಮಾಹಿತಿ ಆಯೋಗವು,–

(ಎ) ಮುಖ್ಯ ಮಾಹಿತಿ ಆಯುಕ್ತರು ಮತ್ತು

(ಬಿ) ಅವಶ್ಯವೆಂದು ಭಾವಿಸಬಹುದಾದಂಥ ಹತ್ತಕ್ಕೆ ಮೀರದಷ್ಟು ಸಂಖ್ಯೆಯ ಕೇಂದ್ರ ಮಾಹಿತಿ ಆಯುಕ್ತರುಗಳನ್ನು ಒಳಗೊಂಡಿರತಕ್ಕದ್ದು.

(3) ಮುಖ್ಯ ಮಾಹಿತಿ ಆಯುಕ್ತ ಹಾಗೂ ಮಾಹಿತಿ ಆಯುಕ್ತರುಗಳನ್ನು,–

(i) ಪ್ರಧಾನ ಮಂತ್ರಿ, ಸಮಿತಿಯ ಅಧ್ಯಕ್ಷರಾಗಿರತಕ್ಕದ್ದು;

(ii) ಲೋಕಸಭೆಯಲ್ಲಿನ ವಿರೋಧಪಕ್ಷದ ನಾಯಕ; ಮತ್ತು

(iii) ಪ್ರಧಾನ ಮಂತ್ರಿಯು ನಾಮನಿರ್ದೇಶಿಸುವಂಥ ಕೇಂದ್ರ ಸಚಿವ ಸಂಪುಟ ದರ್ಜೆಯ ಸಚಿವ – ಇವರನ್ನೊಳಗೊಂಡ ಸಮಿತಿಯ ಶಿಫಾರಸನ್ನು ಆಧರಿಸಿ ರಾಷ್ಟ್ರಪತಿಯವರು ನೇಮಕ ಮಾಡತಕ್ಕದ್ದು.

ವಿವರಣೆ.– ಸಂದೇಹಗಳ ನಿವಾರಣೆಯ ಉದ್ದೇಶಗಳಿಗಾಗಿ, ಲೋಕಸಭೆಯಲ್ಲಿ ವಿರೋಧಪಕ್ಷದ ನಾಯಕನನ್ನು ಆ ರೀತಿ ಮಾನ್ಯ ಮಾಡಿರದಿದ್ದಲ್ಲಿ ಲೋಕಸಭೆಯಲ್ಲಿನ ಸರ್ಕಾರದ ವಿರೋಧಪಕ್ಷಗಳಲ್ಲಿ ಅತ್ಯಂತ ಹೆಚ್ಚು ಸದಸ್ಯರನ್ನೊಳಗೊಂಡ ಪಕ್ಷದ ನಾಯಕನನ್ನು ವಿರೋಧ ಪಕ್ಷದ ನಾಯಕನೆಂದು ಭಾವಿಸತಕ್ಕದ್ದು ಎಂಬುದಾಗಿ ಈ ಮೂಲಕ ಘೋಷಿಸಲಾಗಿದೆ.

(4) ಕೇಂದ್ರ ಮಾಹಿತಿ ಅಯೋಗದ ವ್ಯವಹಾರಗಳ ಸಾಮಾನ್ಯ ಉಸ್ತುವಾರಿ, ನಿರ್ದೇಶನ ಮತ್ತು ನಿರ್ವಹಣೆ ಮುಖ್ಯ ಮಾಹಿತಿ ಆಯುಕ್ತನಲ್ಲಿ ನಿಹಿತವಾಗಿರತಕ್ಕದ್ದು. ಆತನಿಗೆ ಮಾಹಿತಿ ಆಯುಕ್ತರುಗಳು ನೆರವು ನೀಡತಕ್ಕದ್ದು. ಆತ ಈ ಅಧಿನಿಯಮದಡಿಯಲ್ಲಿ ಯಾವುದೇ ಇತರ ಪ್ರಾಧಿಕಾರಿಯು ನೀಡುವ ನಿರ್ದೇಶನಗಳಿಗೆ ಒಳಪಡದೆ ಕೇಂದ್ರ ಮಾಹಿತಿ ಅಯೋಗವು ಚಲಾಯಿಸಬಹುದಾದಂಥ ಎಲ್ಲ ಅಧಿಕಾರಗಳನ್ನು ಆತನು ಸ್ವತಂತ್ರವಾಗಿ ಚಲಾಯಿಸಬಹುದು ಮತ್ತು ನಿರ್ವಹಿಸಬಹುದಾದಂಥ ಎಲ್ಲ ಕಾರ್ಯಗಳನ್ನು ಮತ್ತು ವಿಷಯಗಳನ್ನು ನಿರ್ವಹಿಸಬಹುದು.

(5) ಮುಖ್ಯ ಮಾಹಿತಿ ಆಯುಕ್ತರು ಹಾಗೂ ಮಾಹಿತಿ ಆಯುಕ್ತರುಗಳು ಕಾನೂನು, ವಿಜ್ಞಾನ ಮತ್ತು ತಂತ್ರಜ್ಞಾನ, ಸಮಾಜಸೇವೆ, ವ್ಯವಸ್ಥಾಪನೆ, ಪತ್ರಿಕೋದ್ಯಮ, ಸಮೂಹ ಮಾಧ್ಯಮ, ನಿರ್ವಹಣೆ ಅಥವಾ ಆಡಳಿತ ಈ ಕ್ಷೇತ್ರಗಳಲ್ಲಿ ಆಳವಾದ ಜ್ಞಾನ ಮತ್ತು ಅನುಭವವನ್ನು ಹೊಂದಿರುವುದರೊಂದಿಗೆ, ಸಾರ್ವಜನಿಕ ಜೀವನದಲ್ಲಿ ಉನ್ನತಸ್ಥಾನ ಗಳಿಸಿರುವಂಥ ವ್ಯಕ್ತಿಗಳಾಗಿರತಕ್ಕದ್ದು.

(6) ಮುಖ್ಯ ಮಾಹಿತಿ ಆಯುಕ್ತರು ಅಥವಾ ಸಂದರ್ಭಾನುಸಾರ, ಒಬ್ಬ ಮಾಹಿತಿ ಆಯುಕ್ತನು ಒಬ್ಬ ಸಂಸತ್ ಸದಸ್ಯ ಅಥವಾ ಯಾವುದೇ ರಾಜ್ಯದ ಅಥವಾ ಕೇಂದ್ರಾಡಳಿತ ಪ್ರದೇಶದ ವಿಧಾನಮಂಡಲದ ಸದಸ್ಯನಾಗಿರತಕ್ಕದ್ದಲ್ಲ, ಅಥವಾ ಯಾವುದೇ ಇತರ ಲಾಭದಾಯಕ ಪದನಾಮವನ್ನು ಹೊಂದಿರತಕ್ಕದ್ದಲ್ಲ ಅಥವಾ ಯಾವುದೇ ರಾಜಕೀಯ ಪಕ್ಷದೊಂದಿಗೆ ಸಂಪರ್ಕ ಹೊಂದಿರತಕ್ಕದ್ದಲ್ಲ ಅಥವಾ ಯಾವುದೇ ವ್ಯವಹಾರವನ್ನು ನಡೆಸತಕ್ಕದ್ದಲ್ಲ ಅಥವಾ ಯಾವುದೇ ವೃತ್ತಿಯನ್ನು ಅವಲಂಬಿಸಿರತಕ್ಕದ್ದಲ್ಲ.

(7) ಕೇಂದ್ರ ಮಾಹಿತಿ ಅಯೋಗದ ಕೇಂದ್ರ ಕಚೇರಿ ದೆಹಲಿಯಲ್ಲಿರತಕ್ಕದ್ದು. ಕೇಂದ್ರ ಮಾಹಿತಿ ಆಯೋಗವು, ಕೇಂದ್ರ ಸರ್ಕಾರದ ಪೂರ್ವ ಅನುಮೋದನೆಯೊಂದಿಗೆ ಭಾರತದ ಇತರ ಸ್ಥಳಗಳಲ್ಲಿ ಕಛೇರಿಗಳನ್ನು ಸ್ಥಾಪಿಸಬಹುದು.

13. ಪದಾವಧಿ ಮತ್ತು ಸೇವಾ ಷರತ್ತುಗಳು.– (1) ಮುಖ್ಯ ಮಾಹಿತಿ ಆಯುಕ್ತರು ತನ್ನ ಹುದ್ದೆಯನ್ನು ವಹಿಸಿಕೊಂಡ ದಿನಾಂಕದಿಂದ ಐದು ವರ್ಷಗಳ ಅವಧಿಗೆ ಪದದಲ್ಲಿರತಕ್ಕದ್ದು ಹಾಗೂ ಪುನರ್‌ನೇಮಕಕ್ಕೆ ಅರ್ಹನಾಗಿರತಕ್ಕದ್ದಲ್ಲ:

ಪರಂತು, ಯಾರೇ ಮಾಹಿತಿ ಆಯುಕ್ತರು ಆತನಿಗೆ ಅರವತ್ತೈದು ವರ್ಷ ವಯಸ್ಸಾದ ನಂತರ ಮಾಹಿತಿ ಆಯುಕ್ತರ ಹುದ್ದೆಯನ್ನು ಹೊಂದಿರತಕ್ಕದ್ದಲ್ಲ.

(2) ಪ್ರತಿಯೊಬ್ಬ ಮಾಹಿತಿ ಆಯುಕ್ತರು ತನ್ನ ಹುದ್ದೆಯನ್ನು ವಹಿಸಿಕೊಂಡ ದಿನಾಂಕದಿಂದ ಐದು ವರ್ಷಗಳ ಅವಧಿಗೆ ಅಥವಾ ಆತನಿಗೆ ಅರವತ್ತೈದು ವರ್ಷ ವಯಸ್ಸಾಗುವವರೆಗೆ, ಇವುಗಳಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ಹುದ್ದೆಯನ್ನು ಹೊಂದಿರತಕ್ಕದ್ದು ಮತ್ತು ಅಂಥ ಮಾಹಿತಿ ಆಯುಕ್ತರನ್ನಾಗಿ ಪುನರ್‌ನೇಮಕಗೊಳ್ಳುವುದಕ್ಕೆ ಅರ್ಹನಾಗಿರತಕ್ಕದ್ದಲ್ಲ:

ಪರಂತು, ಪ್ರತಿಯೊಬ್ಬ ಮಾಹಿತಿ ಆಯುಕ್ತನು ಈ ಉಪಪ್ರಕರಣದ ಮೇರೆಗೆ ತನ್ನ ಪದವನ್ನು ತೆರವುಗೊಳಿಸಿದ ನಂತರ 12ನೇ ಪ್ರಕರಣದ (3)ನೇ ಉಪಪ್ರಕರಣದಲ್ಲಿ ನಿರ್ದಿಷ್ಟಪಡಿಸಿರುವ ರೀತಿಯಲ್ಲಿ ಮುಖ್ಯ ಮಾಹಿತಿ ಆಯುಕ್ತನಾಗಿ ನೇಮಕಗೊಳ್ಳಲು ಅರ್ಹನಾಗಿರತಕ್ಕದ್ದು.

ಮತ್ತೂ ಪರಂತು, ಮಾಹಿತಿ ಆಯುಕ್ತನು ಮುಖ್ಯ ಮಾಹಿತಿ ಆಯುಕ್ತನಾಗಿ ನೇಮಕಗೊಂಡ ಪಕ್ಷದಲ್ಲಿ ಆತನ ಹುದ್ದೆಯು ಮಾಹಿತಿ ಆಯುಕ್ತ ಮತ್ತು ಮುಖ್ಯ ಮಾಹಿತಿ ಆಯುಕ್ತನಾಗಿ ಒಟ್ಟು ಐದು ವರ್ಷಗಳಿಗಿಂತ ಹೆಚ್ಚಾಗತಕ್ಕದ್ದಲ್ಲ.

(3) ಮುಖ್ಯ ಮಾಹಿತಿ ಆಯುಕ್ತ ಅಥವಾ ಒಬ್ಬ ಮಾಹಿತಿ ಆಯುಕ್ತರು ತನ್ನ ಹುದ್ದೆಯನ್ನು ವಹಿಸಿಕೊಳ್ಳುವುದಕ್ಕೆ ಮುಂಚೆ, ಮೊದಲನೇ ಅನುಸೂಚಿಯಲ್ಲಿ ಪ್ರಮಾಣ ಅಥವಾ ದೃಢೀಕರಣದ ಉದ್ದೇಶಕ್ಕಾಗಿ ರೂಪಿಸಿರುವ ನಮೂನೆಗೆ ಅನುಸಾರವಾಗಿ ರಾಷ್ಟ್ರಪತಿಯ ಅಥವಾ ಆ ಸಂಬಂಧ ರಾಷ್ಟ್ರಪತಿಯವರಿಂದ ನೇಮಕಗೊಂಡ ಇತರ ವ್ಯಕ್ತಿಯ ಮುಂದೆ ಪ್ರಮಾಣ ಅಥವಾ ದೃಢೀಕರಣ ಮಾಡಿ, ಅದಕ್ಕೆ ರುಜುಮಾಡತಕ್ಕದ್ದು.

(4) ಮುಖ್ಯ ಮಾಹಿತಿ ಆಯುಕ್ತ ಅಥವಾ ಒಬ್ಬ ಮಾಹಿತಿ ಆಯುಕ್ತನು ಯಾವುದೇ ಸಮಯದಲ್ಲಿ, ಬರೆದು ತಾನು ಸಹಿ ಹಾಕಿರುವ ರಾಜೀನಾಮೆ ಪತ್ರವನ್ನು ರಾಷ್ಟ್ರಪತಿಗೆ ಸಲ್ಲಿಸುವ ಮೂಲಕ ತನ್ನ ಹುದ್ದೆಗೆ ರಾಜೀನಾಮೆ ನೀಡಬಹುದು:

ಪರಂತು, ಪ್ರಕರಣ 14ರ ಅಡಿಯಲ್ಲಿ ನಿರ್ದಿಷ್ಟಪಡಿಸಿರುವ ರೀತಿಯಲ್ಲಿ ಮುಖ್ಯ ಮಾಹಿತಿ ಆಯುಕ್ತನನ್ನು ಅಥವಾ ಒಬ್ಬ ಮಾಹಿತಿ ಆಯುಕ್ತನನ್ನು ತೆಗೆದುಹಾಕಬಹುದು.

(5) "(ಎ) ಮುಖ್ಯ ಮಾಹಿತಿ ಆಯುಕ್ತನಿಗೆ ಸಂದಾಯ ಮಾಡತಕ್ಕ ಸಂಬಳ ಮತ್ತು ಭತ್ಯೆಗಳು ಹಾಗೂ ಆತನ ಇತರ ಸೇವಾ ನಿಬಂಧನೆಗಳು ಮತ್ತು ಷರತ್ತುಗಳು, ಮುಖ್ಯ ಚುನಾವಣಾ ಆಯುಕ್ತನ ವೇತನ ಮತ್ತು ಭತ್ಯೆಗಳು ಮತ್ತು ಇತರ ಸೇವಾ ನಿಬಂಧನೆಗಳು ಮತ್ತು ಷರತ್ತುಗಳಂತೆಯೇ ಇರತಕ್ಕದ್ದು;"

"(ಬಿ) ಒಬ್ಬ ಮಾಹಿತಿ ಆಯುಕ್ತನಿಗೆ ಸಂದಾಯ ಮಾಡತಕ್ಕ ವೇತನ ಮತ್ತು ಭತ್ಯೆಗಳು ಹಾಗೂ ಆತನ ಇತರ ಸೇವಾ ನಿಬಂಧನೆಗಳು ಮತ್ತು ಷರತ್ತುಗಳು ಒಬ್ಬ ಚುನಾವಣಾ ಆಯುಕ್ತನ ಸಂಬಳ ಮತ್ತು ಭತ್ಯೆಗಳು ಹಾಗೂ ಇತರ ಸೇವಾ ನಿಬಂಧನೆಗಳು ಮತ್ತು ಷರತ್ತುಗಳಂತೆಯೇ ಇರತಕ್ಕದ್ದು":

ಪರಂತು, ಮುಖ್ಯ ಮಾಹಿತಿ ಆಯುಕ್ತನು ಅಥವಾ ಒಬ್ಬ ಮಾಹಿತಿ ಅಯುಕ್ತನು ಆತನ ನೇಮಕಾತಿಯ ಸಮಯದಲ್ಲಿ ಭಾರತ ಸರ್ಕಾರದ ಅಡಿಯಲ್ಲಿ ಅಥವಾ ರಾಜ್ಯ ಸರ್ಕಾರದಡಿಯಲ್ಲಿ ಸಲ್ಲಿಸಿದ ಯಾವುದೇ ಹಿಂದಿನ ಸೇವೆಯ ಸಂಬಂಧದಲ್ಲಿ ನಿವೃತ್ತಿ ವೇತನವನ್ನು, ಅಸಮರ್ಥತೆ ಅಥವಾ

ನೋವಿಗಾಗಿನ ನಿವೃತ್ತಿ ವೇತನವನ್ನು ಹೊರತುಪಡಿಸಿ ಪಡೆಯುತ್ತಿದ್ದರೆ, ಮುಖ್ಯ ಮಾಹಿತಿ ಅಯುಕ್ತ ಅಥವಾ ಮಾಹಿತಿ ಆಯುಕ್ತನಾಗಿ ಸಲ್ಲಿಸುತ್ತಿರುವ ಸೇವೆಗೆ ಸಂಬಂಧಪಟ್ಟಂತೆ ಆತನ ವೇತನವನ್ನು, ಪರಿವರ್ತಿಸಿದ ನಿವೃತ್ತಿ ವೇತನದ ಯಾವುದೇ ಭಾಗವನ್ನೊಳಗೊಂಡ ಆ ನಿವೃತ್ತಿ ವೇತನ ಹಾಗೂ ನಿವೃತ್ತಿ ಉಪಾದಾನಕ್ಕೆ ಸಮಾನವಾದ ನಿವೃತ್ತಿ ವೇತನವನ್ನು ಹೊರತುಪಡಿಸಿ ಇತರ ರೀತಿಯ ನಿವೃತ್ತಿ ಪ್ರಯೋಜನಗಳಿಗೆ ಸಮಾನವಾದ ನಿವೃತ್ತಿ ವೇತನದ ಮೊತ್ತದಷ್ಟು ಕಡಿಮೆ ಮಾಡತಕ್ಕದ್ದು:

ಮತ್ತೂ ಪರಂತು, ಮುಖ್ಯ ಮಾಹಿತಿ ಆಯುಕ್ತ ತನ್ನ ನೇಮಕಾತಿಯ ಸಮಯದಲ್ಲಿ ಯಾವುದೇ ಕೇಂದ್ರ ಅಧಿನಿಯಮ ಅಥವಾ ರಾಜ್ಯ ಅಧಿನಿಯಮದಿಂದ ಅಥವಾ ಅದರ ಅಡಿಯಲ್ಲಿ ಸ್ಥಾಪಿತವಾದ ನಿಗಮದಲ್ಲಿ ಅಥವಾ ಕೇಂದ್ರ ಸರ್ಕಾರ ಅಥವಾ ರಾಜ್ಯ ಸರ್ಕಾರದ ಒಡೆತನದಲ್ಲಿ ಅಥವಾ ನಿಯಂತ್ರಣದಲ್ಲಿ ಇರುವ ಸರ್ಕಾರಿ ಕಂಪನಿಯಲ್ಲಿ ಸಲ್ಲಿಸಿದ ಯಾವುದೇ ಹಿಂದಿನ ಸೇವೆಯ ಸಂಬಂಧದಲ್ಲಿ ಪಿಂಚಣಿ ಪ್ರಯೋಜನಗಳನ್ನು ಪಡೆಯುತ್ತಿದ್ದರೆ, ಮುಖ್ಯ ಮಾಹಿತಿ ಆಯುಕ್ತನಾಗಿ ಅಥವಾ ಮಾಹಿತಿ ಆಯುಕ್ತನಾಗಿ ಸಲ್ಲಿಸುವ ಸೇವೆಯ ಸಂಬಂಧದಲ್ಲಿ ಆತನಿಗೆ ನೀಡುವ ಸಂಬಳವನ್ನು ನಿವೃತ್ತಿ ಪ್ರಯೋಜನಗಳಿಗೆ ಸಮನಾದ ನಿವೃತ್ತಿ ವೇತನದ ಮೊತ್ತದಷ್ಟು ಕಡಿಮೆ ಮಾಡತಕ್ಕದ್ದು.

ಅದು ಅಲ್ಲದೇ, ಮುಖ್ಯ ಮಾಹಿತಿ ಆಯುಕ್ತನ ಮತ್ತು ಮಾಹಿತಿ ಆಯುಕ್ತರುಗಳ ಸಂಬಳ, ಭತ್ಯೆಗಳು ಮತ್ತು ಇತರ ಸೇವಾ ಷರತ್ತುಗಳನ್ನು ಅವರನ್ನು ನೇಮಕ ಮಾಡಿದ ನಂತರ ಅವರಿಗೆ ಅನಾನುಕೂಲವಾಗುವ ರೀತಿಯಲ್ಲಿ ವ್ಯತ್ಯಾಸ ಮಾಡತಕ್ಕದ್ದಲ್ಲ.

(6) ಕೇಂದ್ರ ಸರ್ಕಾರವು, ಮುಖ್ಯ ಮಾಹಿತಿ ಆಯುಕ್ತ ಮತ್ತು ಮಾಹಿತಿ ಆಯುಕ್ತರುಗಳಿಗೆ ಈ ಅಧಿನಿಯಮದ ಅಡಿಯಲ್ಲಿ ತಮ್ಮ ಪ್ರಕಾರ್ಯಗಳ ದಕ್ಷ ನಿರ್ವಹಣೆಗಾಗಿ ಅವಶ್ಯವಾಗಬಹುದಾದಂಥ ಅಧಿಕಾರಿಗಳನ್ನು ಮತ್ತು ನೌಕರರನ್ನು ಒದಗಿಸತಕ್ಕದ್ದು ಹಾಗೂ ಈ ಅಧಿನಿಯಮದ ಉದ್ದೇಶಕ್ಕಾಗಿ ನೇಮಕ ಮಾಡಲಾದ ಅಧಿಕಾರಿಗಳಿಗೆ ಮತ್ತು ಇತರೆ ನೌಕರರಿಗೆ ಸಂದಾಯ ಮಾಡತಕ್ಕ ವೇತನ ಮತ್ತು ಭತ್ಯೆಗಳು ಹಾಗೂ ಅವರ ಸೇವಾ ನಿಬಂಧನೆಗಳು ಹಾಗೂ ಷರತ್ತುಗಳು ನಿರ್ದಿಷ್ಟಪಡಿಸಬಹುದಾದಂತೆ ಇರತಕ್ಕದ್ದು.

14. ಮುಖ್ಯ ಮಾಹಿತಿ ಆಯುಕ್ತನನ್ನು ಅಥವಾ ಮಾಹಿತಿ ಆಯುಕ್ತನನ್ನು ತೆಗೆದುಹಾಕುವುದು.– (1) (3)ನೇ ಉಪಪ್ರಕರಣದ ಉಪಬಂಧಗಳಿಗೊಳಪಟ್ಟು, ಮುಖ್ಯ ಮಾಹಿತಿ ಆಯುಕ್ತ ಅಥವಾ ಯಾರೇ ಮಾಹಿತಿ ಆಯುಕ್ತನನ್ನು, ರಾಷ್ಟ್ರಪತಿಯು ಸರ್ವೋಚ್ಚ ನ್ಯಾಯಾಲಯಕ್ಕೆ ಮಾಡಿದ ಉಲ್ಲೇಖದ ಮೇರೆಗೆ, ಸರ್ವೋಚ್ಚ ನ್ಯಾಯಾಲಯವು ವಿಚಾರಣೆ ನಡೆಸಿದ ತರುವಾಯ, ಮುಖ್ಯ ಮಾಹಿತಿ ಆಯುಕ್ತನನ್ನು ಅಥವಾ ಸಂದರ್ಭಾನುಸಾರ, ಯಾರೇ ಮಾಹಿತಿ ಆಯುಕ್ತನನ್ನು ರುಜುವಾತಾದ ದುರ್ವರ್ತನೆ ಅಥವಾ ಅಸಮರ್ಥತೆಯ ಕಾರಣದ ಮೇಲೆ ತೆಗೆದು ಹಾಕಬೇಕೆಂದು ವರದಿ ಮಾಡಿದ ತರುವಾಯ, ಅಂಥ ಕಾರಣದ ಮೇಲೆ ರಾಷ್ಟ್ರಪತಿಯ ಆದೇಶದ ಮೂಲಕ ಮಾತ್ರ ಆತನನ್ನು ಹುದ್ದೆಯಿಂದ ತೆಗೆದುಹಾಕತಕ್ಕದ್ದು.

(2) ರಾಷ್ಟ್ರಪತಿಯು, ಯಾರ ಸಂಬಂಧದಲ್ಲಿ (1)ನೇ ಉಪಪ್ರಕರಣದ ಅಡಿಯಲ್ಲಿ ಸರ್ವೋಚ್ಚ ನ್ಯಾಯಾಲಯಕ್ಕೆ ಉಲ್ಲೇಖವನ್ನು ಮಾಡಿದ್ದಾರೆಯೋ ಆ ಮುಖ್ಯ ಮಾಹಿತಿ ಆಯುಕ್ತನನ್ನು ಅಥವಾ ಮಾಹಿತಿ ಆಯುಕ್ತನನ್ನು ಅಂಥ ಉಲ್ಲೇಖವನ್ನು ಕುರಿತಂತೆ ಸರ್ವೋಚ್ಚ ನ್ಯಾಯಾಲಯದ ವರದಿಯನ್ನು ಸ್ವೀಕರಿಸಿದ ನಂತರ ರಾಷ್ಟ್ರಪತಿಯು ಆದೇಶಗಳನ್ನು ಹೊರಡಿಸುವವರೆಗೆ ಹುದ್ದೆಯಿಂದ ಅಮಾನತು ಮಾಡಬಹುದು ಮತ್ತು ಅವಶ್ಯವೆಂದು ಭಾವಿಸಿದರೆ ವಿಚಾರಣೆಯ ಅವಧಿಯಲ್ಲಿ ಕಚೇರಿಗೆ ಹಾಜರಾಗುವುದನ್ನು ಸಹ ನಿಷೇಧಿಸಬಹುದು.

(3) (1)ನೇ ಉಪಪ್ರಕರಣದಲ್ಲಿ ಏನೇ ಇದ್ದರೂ, ರಾಷ್ಟ್ರಪತಿಯು, ಮುಖ್ಯ ಮಾಹಿತಿ ಆಯುಕ್ತ ಅಥವಾ ಸಂದರ್ಭಾನುಸಾರ ಮಾಹಿತಿ ಆಯುಕ್ತನು,–

(ಎ) ದಿವಾಳಿ ಎಂದು ನ್ಯಾಯ ನಿರ್ಣೀತನಾಗಿದ್ದರೆ; ಅಥವಾ

(ಬಿ) ನೈತಿಕ ಅಧಃಪತನವನ್ನೊಳಗೊಂಡ ಅಪರಾಧದ ನಿರ್ಣೀತ ಅಪರಾಧಿಯಾಗಿದ್ದಾನೆಂದು ರಾಷ್ಟ್ರಪತಿಯು ಅಭಿಪ್ರಾಯ ಪಟ್ಟರೆ; ಅಥವಾ

(ಸಿ) ತನ್ನ ಪದಾವಧಿಯಲ್ಲಿ, ತನ್ನ ಹುದ್ದೆಯ ಕರ್ತವ್ಯಗಳನ್ನು ಮೀರಿ ಹೊರಗೆ ಯಾವುದೇ ವೇತನ ಪಡೆಯುವ ಉದ್ಯೋಗದಲ್ಲಿ ತೊಡಗಿದ್ದರೆ; ಅಥವಾ

(ಡಿ) ಮಾನಸಿಕ ಅಥವಾ ದೈಹಿಕ ದೌರ್ಬಲ್ಯದ ಕಾರಣದಿಂದ ಹುದ್ದೆಯಲ್ಲಿ ಮುಂದುವರಿಯುವುದಕ್ಕೆ ಅನರ್ಹನಾಗಿದ್ದಾನೆಂದು ರಾಷ್ಟ್ರಪತಿಯು ಅಭಿಪ್ರಾಯಪಟ್ಟರೆ; ಅಥವಾ

(ಇ) ಒಬ್ಬ ಮುಖ್ಯ ಮಾಹಿತಿ ಆಯುಕ್ತನಾಗಿ ಅಥವಾ ಒಬ್ಬ ಮಾಹಿತಿ ಆಯುಕ್ತನಾಗಿ ತನ್ನ ಕಾರ್ಯಗಳಿಗೆ ಪ್ರತಿಕೂಲ ಪರಿಣಾಮವನ್ನುಂಟು ಮಾಡುವ ಸಂಭವವಿರುವಂಥ ಹಣಕಾಸು ಅಥವಾ ಇತರ ಹಿತಾಸಕ್ತಿಯನ್ನು ಹೊಂದಿದ್ದರೆ ರಾಷ್ಟ್ರಪತಿಯು ಆದೇಶದ ಮೂಲಕ ಮುಖ್ಯ ಮಾಹಿತಿ ಆಯುಕ್ತ ಅಥವಾ ಮಾಹಿತಿ ಆಯುಕ್ತನನ್ನು ಹುದ್ದೆಯಿಂದ ತೆಗೆದುಹಾಕಬಹುದು.

(4) ಮುಖ್ಯ ಮಾಹಿತಿ ಆಯುಕ್ತ ಅಥವಾ ಮಾಹಿತಿ ಆಯುಕ್ತನು, ಭಾರತ ಸರ್ಕಾರ ಅಥವಾ ಭಾರತ ಸರ್ಕಾರದ ಪರವಾಗಿ ಮಾಡಿಕೊಂಡ ಯಾವುದೇ ಕರಾರು ಅಥವಾ ಒಪ್ಪಂದದಲ್ಲಿ ಯಾವುದೇ ರೀತಿಯ ಸಂಬಂಧ ಹೊಂದಿದ್ದರೆ ಅಥವಾ ಆಸಕ್ತಿ ಹೊಂದಿದ್ದರೆ ಅಥವಾ ಒಂದು ನಿಗಮಿತ ಕಂಪನಿಯ ಒಬ್ಬ ಸದಸ್ಯನಾಗಿಯಲ್ಲದೆ ಮತ್ತು ಅದರ ಇತರ ಸದಸ್ಯರೊಡನೆ ಒಬ್ಬನಾಗಿಯಲ್ಲದೆ ಅದರ ಲಾಭದಲ್ಲಿ ಅಥವಾ ಅದರಿಂದ ಬರುವ ಯಾವುದೇ ಪ್ರಯೋಜನ ಅಥವಾ ಉಪಲಬ್ಧಿಗಳಲ್ಲಿ ಯಾವುದೇ ರೀತಿಯಲ್ಲಿ ಭಾಗಿಯಾಗಿದ್ದರೆ, (1)ನೇ ಉಪಪ್ರಕರಣದ ಉದ್ದೇಶಗಳಿಗಾಗಿ ಆತನನ್ನು ದುರ್ವರ್ತನೆಗಾಗಿ ತಪ್ಪಿತಸ್ಥನೆಂದು ಭಾವಿಸತಕ್ಕದ್ದು.

# ಅಧ್ಯಾಯ – IV

## ರಾಜ್ಯ ಮಾಹಿತಿ ಆಯೋಗ

15. ರಾಜ್ಯ ಮಾಹಿತಿ ಆಯೋಗದ ರಚನೆ.– (1) ಪ್ರತಿಯೊಂದು ರಾಜ್ಯ ಸರ್ಕಾರವು, ಅಧಿಕೃತ ರಾಜ್ಯಪತ್ರದಲ್ಲಿ ಅಧಿಸೂಚನೆಯ ಮೂಲಕ, ಈ ಅಧಿನಿಯಮದ ಅಡಿಯಲ್ಲಿ ಅದಕ್ಕೆ ದತ್ತವಾದ ಅಧಿಕಾರಗಳನ್ನು ಚಲಾಯಿಸುವುದಕ್ಕೆ, ಮತ್ತು ಅದಕ್ಕೆ ವಹಿಸಲಾದ ಕಾರ್ಯಗಳನ್ನು ನಿರ್ವಹಿಸುವುದಕ್ಕೆ . . . . . . . . . . . (ರಾಜ್ಯದ ಹೆಸರು) ಮಾಹಿತಿ ಆಯೋಗ ಎಂಬ ಒಂದು ನಿಕಾಯವನ್ನು ರಚಿಸತಕ್ಕದ್ದು.

(2) ರಾಜ್ಯದ ಮಾಹಿತಿ ಆಯೋಗವು ಈ ಮುಂದಿನ ವ್ಯಕ್ತಿಗಳನ್ನು ಒಳಗೊಂಡಿರತಕ್ಕದ್ದು,–

(ಎ) ರಾಜ್ಯದ ಮುಖ್ಯ ಮಾಹಿತಿ ಆಯುಕ್ತ; ಮತ್ತು

(ಬಿ) ಅಗತ್ಯವೆಂದು ಭಾವಿಸಬಹುದಾದಂತೆ ಹತ್ತು ಜನರನ್ನು ಮೀರದಷ್ಟು ಸಂಖ್ಯೆಯ ರಾಜ್ಯ ಮಾಹಿತಿ ಆಯಕ್ತರುಗಳು.

(3) ಈ ಮುಂದಿನ ವ್ಯಕ್ತಿಗಳನ್ನೊಳಗೊಂಡ ಸಮಿತಿಯ ಶಿಫಾರಸಿನ ಮೇರೆಗೆ ರಾಜ್ಯಪಾಲರು ರಾಜ್ಯ ಮುಖ್ಯ ಮಾಹಿತಿ ಆಯುಕ್ತನನ್ನು ಮತ್ತು ರಾಜ್ಯ ಮಾಹಿತಿ ಆಯುಕ್ತರುಗಳನ್ನು ನೇಮಕ ಮಾಡತಕ್ಕದ್ದು,–

(i) ಮುಖ್ಯಮಂತ್ರಿ, ಇವರು ಸಮಿತಿಯ ಅಧ್ಯಕ್ಷರಾಗಿರತಕ್ಕದ್ದು;

(ii) ವಿಧಾನ ಸಭೆಯಲ್ಲಿನ ವಿರೋಧ ಪಕ್ಷದ ನಾಯಕ; ಮತ್ತು

(iii) ಮುಖ್ಯಮಂತ್ರಿಯಿಂದ ನಾಮನಿರ್ದೇಶಿತನಾದ ಸಚಿವ ಸಂಪುಟ ದರ್ಜೆಯ ಒಬ್ಬ ಸಚಿವ.

ವಿವರಣೆ.– ಸಂದೇಹಗಳ ನಿವಾರಣೆಯ ಉದ್ದೇಶಗಳಿಗಾಗಿ, ವಿಧಾನಸಭೆಯ ವಿರೋಧ ಪಕ್ಷದ ನಾಯಕನನ್ನು ಆ ರೀತಿ ಮಾನ್ಯ ಮಾಡಿರದಿದ್ದಲ್ಲಿ ವಿಧಾನ ಸಭೆಯಲ್ಲಿ ಸರ್ಕಾರದ ವಿರೋಧ ಪಕ್ಷಗಳಲ್ಲಿ ಅತ್ಯಂತ ಹೆಚ್ಚು ಸದಸ್ಯರನ್ನೊಳಗೊಂಡ ಪಕ್ಷದ ನಾಯಕನನ್ನು ವಿರೋಧ ಪಕ್ಷದ ನಾಯಕನೆಂದು ಭಾವಿಸತಕ್ಕದ್ದು ಎಂಬುದಾಗಿ ಈ ಮೂಲಕ ಘೋಷಿಸಲಾಗಿದೆ.

(4) ರಾಜ್ಯ ಮಾಹಿತಿ ಆಯೋಗದ ವ್ಯವಹಾರಗಳ ಸಾಮಾನ್ಯ ಉಸ್ತುವಾರಿ, ನಿರ್ದೇಶನ ಮತ್ತು ನಿರ್ವಹಣೆಯು ರಾಜ್ಯ ಮುಖ್ಯ ಮಾಹಿತಿ ಆಯುಕ್ತನಲ್ಲಿ ನಿಹಿತವಾಗಿರತಕ್ಕದ್ದು. ಅವನಿಗೆ ರಾಜ್ಯ ಮಾಹಿತಿ ಆಯುಕ್ತರುಗಳು ಸಹಾಯ ನೀಡತಕ್ಕದ್ದು ಮತ್ತು ಅವನು ಈ ಅಧಿನಿಯಮದಡಿಯಲ್ಲಿ ಯಾವುದೇ ಇತರ ಪ್ರಾಧಿಕಾರವು ನೀಡುವ ನಿರ್ದೇಶನಗಳಿಗೆ ಒಳಪಡದೆ ರಾಜ್ಯ ಮಾಹಿತಿ ಆಯೋಗವು ಚಲಾಯಿಸಬಹುದಾದಂಥ ಎಲ್ಲ ಅಧಿಕಾರಗಳನ್ನು ಸ್ವತಂತ್ರವಾಗಿ ಚಲಾಯಿಸಬಹುದು ಮತ್ತು ನಿರ್ವಹಿಸಬಹುದಾದಂಥ ಎಲ್ಲ ಅಂಥ ಕಾರ್ಯಗಳನ್ನು ಮತ್ತು ವಿಷಯಗಳನ್ನು ನಿರ್ವಹಿಸಬಹುದು.

(5) ರಾಜ್ಯ ಮುಖ್ಯ ಮಾಹಿತಿ ಆಯುಕ್ತ ಮತ್ತು ರಾಜ್ಯ ಮಾಹಿತಿ ಆಯುಕ್ತರುಗಳು ಕಾನೂನು, ವಿಜ್ಞಾನ ಮತ್ತು ತಂತ್ರಜ್ಞಾನ, ಸಮಾಜ ಸೇವೆ, ವ್ಯವಸ್ಥಾಪನೆ, ಪತ್ರಿಕೋದ್ಯಮ, ಸಮೂಹ ಮಾಧ್ಯಮ ಅಥವಾ ನಿರ್ವಹಣೆ ಮತ್ತು ಆಡಳಿತದಲ್ಲಿ ಆಳವಾದ ಜ್ಞಾನ ಮತ್ತು ಅನುಭವ ಹೊಂದಿರುವುದರೊಂದಿಗೆ ಸಾರ್ವಜನಿಕ ಜೀವನದಲ್ಲಿ ಉನ್ನತಸ್ಥಾನಗಳಿಸಿರುವಂಥ ವ್ಯಕ್ತಿಗಳಾಗಿರತಕ್ಕದ್ದು.

(6) ರಾಜ್ಯ ಮುಖ್ಯ ಮಾಹಿತಿ ಆಯುಕ್ತನು ಅಥವಾ ರಾಜ್ಯ ಮಾಹಿತಿ ಆಯುಕ್ತರುಗಳು, ಸಂಸತ್ತಿನ ಸದಸ್ಯರಾಗಿರತಕ್ಕದ್ದಲ್ಲ ಅಥವಾ ಯಾವುದೇ ರಾಜ್ಯದ ಅಥವಾ ಸಂದರ್ಭಾನುಸಾರ ಕೇಂದ್ರಾಡಳಿತ ಪ್ರದೇಶದ ವಿಧಾನಮಂಡಲದ ಸದಸ್ಯರಾಗಿರತಕ್ಕದ್ದಲ್ಲ ಅಥವಾ ಯಾವುದೇ ಇತರ ಲಾಭದಾಯಕ ಹುದ್ದೆಯನ್ನು ಹೊಂದಿರತಕ್ಕದ್ದಲ್ಲ ಅಥವಾ ಯಾವುದೇ ರಾಜಕೀಯ ಪಕ್ಷದೊಂದಿಗೆ ಸಂಪರ್ಕ ಹೊಂದಿರತಕ್ಕದ್ದಲ್ಲ ಅಥವಾ ಯಾವುದೇ ವ್ಯವಹಾರವನ್ನು ನಡೆಸತಕ್ಕದ್ದಲ್ಲ ಅಥವಾ ಯಾವುದೇ ವೃತ್ತಿಯನ್ನು ಅವಲಂಬಿಸಿರತಕ್ಕದ್ದಲ್ಲ.

(7) ರಾಜ್ಯ ಮಾಹಿತಿ ಆಯೋಗದ ಕೇಂದ್ರ ಕಚೇರಿಯು, ರಾಜ್ಯ ಸರ್ಕಾರವು ಅಧಿಕೃತ ರಾಜ್ಯಪತ್ರದಲ್ಲಿ ಅಧಿಸೂಚನೆಯ ಮೂಲಕ ರಾಜ್ಯದ ನಿರ್ದಿಷ್ಟಪಡಿಸಬಹುದಾದಂಥ ಯಾವುದೇ ಸ್ಥಳದಲ್ಲಿರತಕ್ಕದ್ದು ಮತ್ತು ರಾಜ್ಯ ಸರ್ಕಾರದ ಪೂರ್ವಾನುಮೋದನೆಯೊಂದಿಗೆ ರಾಜ್ಯ ಮಾಹಿತಿ ಆಯೋಗವು, ರಾಜ್ಯದ ಇತರ ಸ್ಥಳಗಳಲ್ಲಿ ಕಚೇರಿಗಳನ್ನು ಸ್ಥಾಪಿಸಬಹುದು.

16. ಪದಾವಧಿ ಮತ್ತು ಸೇವಾ ಷರತ್ತುಗಳು.– (1) ರಾಜ್ಯ ಮುಖ್ಯ ಮಾಹಿತಿ ಆಯುಕ್ತನು, ತಾನು ಹುದ್ದೆಯನ್ನು ವಹಿಸಿಕೊಂಡ ದಿನಾಂಕದಿಂದ ಐದು ವರ್ಷಗಳ ಅವಧಿಯವರೆಗೆ ಆ ಪದವನ್ನು ಹೊಂದಿರತಕ್ಕದ್ದು ಮತ್ತು ಮರುನೇಮಕಾತಿಗೆ ಅರ್ಹನಾಗಿರತಕ್ಕದ್ದಲ್ಲ:

ಪರಂತು, ಯಾರೇ ರಾಜ್ಯ ಮುಖ್ಯ ಮಾಹಿತಿ ಆಯುಕ್ತನು, ತನಗೆ ಅರವತ್ತೈದು ವರ್ಷವಯಸ್ಸಾದ ನಂತರ ರಾಜ್ಯ ಮುಖ್ಯ ಮಾಹಿತಿ ಆಯುಕ್ತನ ಹುದ್ದೆಯನ್ನು ಹೊಂದಿರತಕ್ಕದ್ದಲ್ಲ.

(2) ಪ್ರತಿಯೊಬ್ಬ ರಾಜ್ಯ ಮಾಹಿತಿ ಆಯುಕ್ತನು, ತಾನು ಹುದ್ದೆಯನ್ನು ವಹಿಸಿಕೊಂಡ ದಿನಾಂಕದಿಂದ ಐದು ವರ್ಷಗಳ ಅವಧಿಯವರೆಗೆ ಅಥವಾ ಆತನಿಗೆ ಅರವತ್ತೈದು ವರ್ಷ ವಯಸ್ಸಾಗುವವರೆಗಿನ ಅವಧಿಯವರೆಗೆ, ಇವುಗಳಲ್ಲಿ ಯಾವುದು ಮೊದಲೋ ಆ ಅವಧಿಯವರೆಗೆ ಪದವನ್ನು ಹೊಂದಿರತಕ್ಕದ್ದು, ಮತ್ತು ಅಂಥ ರಾಜ್ಯ ಮಾಹಿತಿ ಆಯುಕ್ತನಾಗಿ ಮರುನೇಮಕಗೊಳ್ಳುವುದಕ್ಕೆ ಅರ್ಹನಾಗಿರತಕ್ಕದ್ದಲ್ಲ:

ಪರಂತು, ಪ್ರತಿಯೊಬ್ಬ ರಾಜ್ಯ ಮಾಹಿತಿ ಆಯುಕ್ತನು, ಈ ಉಪಪ್ರಕರಣದಡಿಯಲ್ಲಿ ಆತನ ಪದವನ್ನು ತೆರವುಮಾಡಿದ ನಂತರ, 15ನೇ ಪ್ರಕರಣದ (3)ನೇ ಉಪಪ್ರಕರಣದಲ್ಲಿ ನಿರ್ದಿಷ್ಟಪಡಿಸಿರುವ ರೀತಿಯಲ್ಲಿ ರಾಜ್ಯ ಮುಖ್ಯ ಮಾಹಿತಿ ಆಯುಕ್ತನಾಗಿ ನೇಮಕಗೊಳ್ಳಲು ಅರ್ಹನಾಗಿರತಕ್ಕದ್ದು:

ಮತ್ತು ಪರಂತು, ರಾಜ್ಯ ಮಾಹಿತಿ ಆಯುಕ್ತನನ್ನು, ರಾಜ್ಯ ಮುಖ್ಯ ಮಾಹಿತಿ ಆಯುಕ್ತನನ್ನಾಗಿ ನೇಮಕ ಮಾಡಿದಲ್ಲಿ, ಆತನ ಪದಾವಧಿಯು, ರಾಜ್ಯ ಮಾಹಿತಿ ಆಯುಕ್ತ ಮತ್ತು ರಾಜ್ಯ ಮುಖ್ಯ ಮಾಹಿತಿ ಆಯುಕ್ತನಾಗಿ ಒಟ್ಟು ಐದು ವರ್ಷಗಳಿಗಿಂತ ಹೆಚ್ಚಾಗತಕ್ಕದ್ದಲ್ಲ.

(3) ರಾಜ್ಯ ಮುಖ್ಯ ಮಾಹಿತಿ ಆಯುಕ್ತ ಅಥವಾ ರಾಜ್ಯ ಮಾಹಿತಿ ಆಯುಕ್ತನು, ತಾನು ಪದವನ್ನು ವಹಿಸಿಕೊಳ್ಳುವುದಕ್ಕೆ ಮೊದಲು, ರಾಜ್ಯಪಾಲರ ಅಥವಾ ಈ ಬಗ್ಗೆ ರಾಜ್ಯಪಾಲರಿಂದ ನಿಯೋಜಿತರಾದ ಯಾವುದೇ ಇತರ ವ್ಯಕ್ತಿಯ ಮುಂದೆ, ಪ್ರಮಾಣ ಅಥವಾ ದೃಢೀಕರಣದ ಉದ್ದೇಶಕ್ಕಾಗಿ ಮೊದಲನೇ ಅನುಸೂಚಿಯಲ್ಲಿ ರೂಪಿಸಲಾದ ನಮೂನೆಗನುಸಾರವಾಗಿ ಪ್ರಮಾಣವನ್ನು ಅಥವಾ ದೃಢೀಕರಣವನ್ನು ಮಾಡಿ ಅದಕ್ಕೆ ರುಜುಮಾಡತಕ್ಕದ್ದು.

(4) ರಾಜ್ಯ ಮುಖ್ಯ ಮಾಹಿತಿ ಆಯುಕ್ತ ಅಥವಾ ರಾಜ್ಯ ಮಾಹಿತಿ ಆಯುಕ್ತರು, ಯಾವುದೇ ಸಮಯದಲ್ಲಿ, ರಾಜ್ಯಪಾಲನಿಗೆ ಲಿಖಿತದಲ್ಲಿ ತನ್ನ ಸಹಿ ಹಾಕಿರುವ ರಾಜಿನಾಮೆ ಪತ್ರ ನೀಡುವ ಮೂಲಕ ತನ್ನ ಪದಕ್ಕೆ ರಾಜೀನಾಮೆ ಸಲ್ಲಿಸಬಹುದು:

ಪರಂತು, 17ನೇ ಪ್ರಕರಣದಡಿಯಲ್ಲಿ ನಿರ್ದಿಷ್ಟಪಡಿಸಿರುವ ರೀತಿಯಲ್ಲಿ ರಾಜ್ಯ ಮುಖ್ಯ ಮಾಹಿತಿ ಆಯುಕ್ತನನ್ನು ಅಥವಾ ರಾಜ್ಯ ಮಾಹಿತಿ ಆಯುಕ್ತನನ್ನು ತೆಗೆದುಹಾಕಬಹುದು.

(5) (ಎ) ರಾಜ್ಯ ಮುಖ್ಯ ಮಾಹಿತಿ ಆಯುಕ್ತನಿಗೆ ಸಂದಾಯ ಮಾಡತಕ್ಕ ಸಂಬಳ ಮತ್ತು ಭತ್ಯೆಗಳು ಹಾಗೂ ಆತನ ಇತರ ಸೇವಾ ನಿಬಂಧನೆಗಳು ಹಾಗೂ ಷರತ್ತುಗಳು ಚುನಾವಣಾ ಆಯುಕ್ತನ ಸಂಬಳ ಮತ್ತು ಭತ್ಯೆಗಳು ಮತ್ತು ಇತರ ಸೇವಾ ನಿಬಂಧನೆಗಳು ಹಾಗೂ ಷರತ್ತುಗಳಂತೆಯೇ ಇರತಕ್ಕದ್ದು;

(ಬಿ) ರಾಜ್ಯ ಮಾಹಿತಿ ಆಯುಕ್ತನಿಗೆ ಸಂದಾಯ ಮಾಡತಕ್ಕ ಸಂಬಳ ಮತ್ತು ಭತ್ಯೆಗಳು ಹಾಗೂ ಆತನ ಇತರ ಸೇವಾ ನಿಬಂಧನೆಗಳು ಹಾಗೂ ಷರತ್ತುಗಳು ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿಯ ಸಂಬಳ ಮತ್ತು ಭತ್ಯೆಗಳು ಮತ್ತು ಇತರ ಸೇವಾ ನಿಬಂಧನೆಗಳು ಮತ್ತು ಷರತ್ತುಗಳಂತೆಯೇ ಇರತಕ್ಕದ್ದು:

ಪರಂತು, ರಾಜ್ಯ ಮುಖ್ಯ ಮಾಹಿತಿ ಆಯುಕ್ತ ಅಥವಾ ರಾಜ್ಯ ಮಾಹಿತಿ ಆಯುಕ್ತನು, ತನ್ನ ನೇಮಕಾತಿಯ ಸಮಯದಲ್ಲಿ, ಭಾರತ ಸರ್ಕಾರದಡಿಯಲ್ಲಿ ಅಥವಾ ರಾಜ್ಯ ಸರ್ಕಾರದಡಿಯಲ್ಲಿ ಸಲ್ಲಿಸಿದ ಯಾವುದೇ ಹಿಂದಿನ ಸೇವೆಯ ಸಂಬಂಧದಲ್ಲಿ ನಿವೃತ್ತಿ ವೇತನವನ್ನು (ಅಸಮರ್ಥತೆಗಾಗಿ ಅಥವಾ ನೋವಿಗಾಗಿ ಇರುವ ನಿವೃತ್ತಿ ವೇತನವನ್ನು ಹೊರತುಪಡಿಸಿ) ಪಡೆಯುತ್ತಿದ್ದರೆ, ರಾಜ್ಯ ಮುಖ್ಯ ಮಾಹಿತಿ

ಆಯುಕ್ತನಾಗಿ ಅಥವಾ ರಾಜ್ಯ ಮಾಹಿತಿ ಆಯುಕ್ತನಾಗಿ ಸೇವೆ ಸಲ್ಲಿಸುತ್ತಿರುವುದಕ್ಕೆ ಸಂಬಂಧಿಸಿದಂತೆ ಆತನ ಸಂಬಳವನ್ನು, ಪರಿವರ್ತಿಸಲಾದ ನಿವೃತ್ತಿ ವೇತನದ ಯಾವುದೇ ಭಾಗವೂ ಸೇರಿದಂತೆ ಆ ನಿವೃತ್ತಿ ವೇತನ ಮತ್ತು ನಿವೃತ್ತಿ ಉಪಾದಾನಕ್ಕೆ ಸಮನಾದ ಪಿಂಚಣಿಯನ್ನು ಹೊರತುಪಡಿಸಿ ಇತರ ರೀತಿಯ ನಿವೃತ್ತಿ ಪ್ರಯೋಜನಗಳಿಗೆ ಸಮನಾದ ಪಿಂಚಣಿಯ ಮೊತ್ತದಷ್ಟು ಕಡಿತ ಮಾಡತಕ್ಕದ್ದು:

ಮತ್ತು ಪರಂತು, ರಾಜ್ಯ ಮುಖ್ಯ ಮಾಹಿತಿ ಆಯುಕ್ತ ಅಥವಾ ರಾಜ್ಯ ಮಾಹಿತಿ ಆಯುಕ್ತನು ಆತನ ನೇಮಕಾತಿಯ ಸಮಯದಲ್ಲಿ, ಯಾವುದೇ ಕೇಂದ್ರ ಅಧಿನಿಯಮ ಅಥವಾ ರಾಜ್ಯ ಅಧಿನಿಯಮದ ಮೂಲಕ ಅಥವಾ ಅದರ ಅಡಿಯಲ್ಲಿ ಸ್ಥಾಪಿತವಾದ ನಿಗಮದಲ್ಲಿ ಅಥವಾ ಕೇಂದ್ರ ಸರ್ಕಾರ ಅಥವಾ ರಾಜ್ಯ ಸರ್ಕಾರದ ಒಡೆತನಕ್ಕೆ ಅಥವಾ ನಿಯಂತ್ರಣಕ್ಕೆ ಒಳಪಟ್ಟ ಸರ್ಕಾರಿ ಕಂಪನಿಯಲ್ಲಿ ಸಲ್ಲಿಸಿದ ಯಾವುದೇ ಹಿಂದಿನ ಸೇವೆಯ ಸಂಬಂಧದಲ್ಲಿ ಪಿಂಚಣಿ ಸೌಲಭ್ಯಗಳನ್ನು ಸ್ವೀಕರಿಸುತ್ತಿದ್ದರೆ, ರಾಜ್ಯ ಮುಖ್ಯ ಮಾಹಿತಿ ಆಯುಕ್ತನಾಗಿ ಅಥವಾ ರಾಜ್ಯ ಮಾಹಿತಿ ಆಯುಕ್ತನಾಗಿ ಸೇವೆ ಸಲ್ಲಿಸುತ್ತಿರುವುದಕ್ಕೆ ಸಂಬಂಧಿಸಿದಂತೆ ಆತನಿಗೆ ನೀಡುವ ವೇತನವನ್ನು ನಿವೃತ್ತಿ ಪ್ರಯೋಜನಗಳಿಗೆ ಸಮನಾದ ಪಿಂಚಣಿಯ ಮೊತ್ತದಷ್ಟು ಕಡಿತ ಮಾಡತಕ್ಕದ್ದು.

ಅದೂ ಅಲ್ಲದೆ, ರಾಜ್ಯ ಮುಖ್ಯ ಮಾಹಿತಿ ಆಯುಕ್ತ ಮತ್ತು ರಾಜ್ಯ ಮಾಹಿತಿ ಆಯುಕ್ತರುಗಳ ಸಂಬಳಗಳು, ಭತ್ಯೆಗಳು ಮತ್ತು ಇತರ ಸೇವಾ ಷರತ್ತುಗಳನ್ನು ಅವರ ನೇಮಕಾತಿಯ ನಂತರ ಅವರಿಗೆ ಅನಾನುಕೂಲವಾಗುವಂತೆ ವ್ಯತ್ಯಾಸ ಮಾಡತಕ್ಕದ್ದಲ್ಲ.

(6) ರಾಜ್ಯ ಸರ್ಕಾರವು, ರಾಜ್ಯ ಮುಖ್ಯ ಮಾಹಿತಿ ಆಯುಕ್ತ ಮತ್ತು ರಾಜ್ಯ ಮಾಹಿತಿ ಆಯುಕ್ತರುಗಳಿಗೆ, ಈ ಅಧಿನಿಯಮದಡಿಯಲ್ಲಿನ ತಮ್ಮ ಕಾರ್ಯಗಳ ದಕ್ಷ ನಿರ್ವಹಣೆಗಾಗಿ ಅವಶ್ಯವಾಗಬಹುದಾದಂಥ ಅಧಿಕಾರಿಗಳನ್ನು ಮತ್ತು ನೌಕರರನ್ನು ಒದಗಿಸತಕ್ಕದ್ದು, ಮತ್ತು ಈ ಅಧಿನಿಯಮದ ಉದ್ದೇಶಕ್ಕಾಗಿ ನೇಮಕ ಮಾಡಲಾದ ಅಧಿಕಾರಿಗಳಿಗೆ ಮತ್ತು ಇತರ ನೌಕರರಿಗೆ ಸಂದಾಯ ಮಾಡತಕ್ಕ ಸಂಬಳ ಮತ್ತು ಭತ್ಯೆಗಳು ಹಾಗೂ ಅವರ ಸೇವಾ ನಿಬಂಧನೆಗಳು ಮತ್ತು ಷರತ್ತುಗಳು ನಿರ್ದಿಷ್ಟಪಡಿಸಬಹುದಾದಂತೆ ಇರತಕ್ಕದ್ದು.

17. ರಾಜ್ಯ ಮುಖ್ಯ ಮಾಹಿತಿ ಆಯುಕ್ತನನ್ನು ಅಥವಾ ರಾಜ್ಯ ಮಾಹಿತಿ ಆಯುಕ್ತರನ್ನು ತೆಗೆದುಹಾಕುವುದು.– (1) (3)ನೇ ಉಪ–ಪ್ರಕರಣದ ಉಪಬಂಧಗಳಿಗೊಳಪಟ್ಟು, ರಾಜ್ಯ ಮುಖ್ಯ ಮಾಹಿತಿ ಆಯುಕ್ತನನ್ನು ಅಥವಾ ಯಾರೇ ರಾಜ್ಯ ಮಾಹಿತಿ ಆಯುಕ್ತನನ್ನು, ರಾಜ್ಯಪಾಲನು ಸರ್ವೋಚ್ಚ ನ್ಯಾಯಾಲಯಕ್ಕೆ ಮಾಡಿದ ಉಲ್ಲೇಖದ ಮೇರೆಗೆ, ಸರ್ವೋಚ್ಚ ನ್ಯಾಯಾಲಯವು, ವಿಚಾರಣೆ ನಡೆಸಿದ ತರುವಾಯ, ರಾಜ್ಯ ಮುಖ್ಯ ಮಾಹಿತಿ ಆಯುಕ್ತನನ್ನು ಅಥವಾ ಸಂದರ್ಭಾನುಸಾರ, ಯಾರೇ ರಾಜ್ಯ ಮಾಹಿತಿ ಆಯುಕ್ತನನ್ನು ರುಜುವಾತಾದ ದುರ್ವರ್ತನೆ ಅಥವಾ ಅಸಮರ್ಥತೆಯ ಕಾರಣದ ಮೇಲೆ ತೆಗೆದುಹಾಕಬೇಕೆಂದು ವರದಿ ಮಾಡಿದ ತರುವಾಯ, ಅಂಥ ಕಾರಣದ ಮೇಲೆ ರಾಜ್ಯಪಾಲನು ಆದೇಶ ಹೊರಡಿಸುವ ಮೂಲಕ ಮಾತ್ರವೇ ಆತನನ್ನು ಪದದಿಂದ ತೆಗೆದುಹಾಕತಕ್ಕದ್ದು.

(2) ರಾಜ್ಯಪಾಲನು, ಯಾರ ಸಂಬಂಧದಲ್ಲಿ (1)ನೇ ಉಪ ಪ್ರಕರಣದಡಿಯಲ್ಲಿ ಸರ್ವೋಚ್ಚ ನ್ಯಾಯಾಲಯಕ್ಕೆ ಉಲ್ಲೇಖವನ್ನು ಮಾಡಿದ್ದಾರೆಯೋ ಆ ರಾಜ್ಯ ಮುಖ್ಯ ಮಾಹಿತಿ ಆಯುಕ್ತ ಅಥವಾ ರಾಜ್ಯ ಮಾಹಿತಿ ಆಯುಕ್ತನನ್ನು, ಅಂಥ ಉಲ್ಲೇಖದ ಬಗ್ಗೆ ಸರ್ವೋಚ್ಚ ನ್ಯಾಯಾಲಯದ ವರದಿಯನ್ನು ಸ್ವೀಕರಿಸಿದ ನಂತರ ರಾಜ್ಯಪಾಲನು ಆದೇಶಗಳನ್ನು ಹೊರಡಿಸುವವರೆಗೆ, ಪದದಿಂದ ಅವರನ್ನು ಅಮಾನತು ಮಾಡಬಹುದು ಮತ್ತು ಅವಶ್ಯವೆಂದು ಭಾವಿಸಿದರೆ ವಿಚಾರಣೆಯ ಅವಧಿಯಲ್ಲಿ ಕಚೇರಿಗೆ ಹಾಜರಾಗುವುದನ್ನೂ ಸಹ ನಿಷೇಧಿಸಬಹುದು.

(3) (1)ನೇ ಉಪಪ್ರಕರಣದಲ್ಲಿ ಏನೇ ಇದ್ದರೂ, ರಾಜ್ಯ ಮುಖ್ಯ ಮಾಹಿತಿ ಆಯುಕ್ತ ಅಥವಾ ಸಂದರ್ಭಾನುಸಾರ, ರಾಜ್ಯ ಮಾಹಿತಿ ಆಯುಕ್ತನು,–

(ಎ) ದಿವಾಳಿ ಎಂದು ನ್ಯಾಯ ನಿರ್ಣೀತನಾಗಿದ್ದರೆ; ಅಥವಾ

(ಬಿ) ನೈತಿಕ ಅಧಃಪತನವನ್ನೊಳಗೊಂಡ ಅಪರಾಧದ ನಿರ್ಣೀತ ಅಪರಾಧಿ ಯಾಗಿರುವನೆಂದು ರಾಜ್ಯಪಾಲರು ಅಭಿಪ್ರಾಯಪಟ್ಟರೆ; ಅಥವಾ

(ಸಿ) ತನ್ನ ಹುದ್ದೆಯ ಅವಧಿಯಲ್ಲಿ, ತನ್ನ ಹುದ್ದೆಯ ಕರ್ತವ್ಯದ ಹೊರಗೆ ಯಾವುದೇ ವೇತನ ಪಡೆಯುವ ಉದ್ಯೋಗದಲ್ಲಿ ತೊಡಗಿದ್ದರೆ; ಅಥವಾ

(ಡಿ) ಮಾನಸಿಕ ಅಥವಾ ದೈಹಿಕ ದೌರ್ಬಲ್ಯದ ಕಾರಣದಿಂದ ಹುದ್ದೆಯಲ್ಲಿ ಮುಂದುವರಿಯುವುದಕ್ಕೆ ಅನರ್ಹನಾಗಿದ್ದಾನೆಂದು ರಾಜ್ಯಪಾಲನು ಅಭಿಪ್ರಾಯಪಟ್ಟರೆ; ಅಥವಾ

(ಇ) ಒಬ್ಬ ರಾಜ್ಯ ಮುಖ್ಯ ಮಾಹಿತಿ ಆಯುಕ್ತನಾಗಿ ಅಥವಾ ಒಬ್ಬ ರಾಜ್ಯ ಮಾಹಿತಿ ಆಯುಕ್ತನಾಗಿ ತನ್ನ ಕಾರ್ಯಗಳಿಗೆ ಪ್ರತಿಕೂಲ ಪರಿಣಾಮವನ್ನುಂಟು ಮಾಡುವ ಸಂಭವವಿರುವಂಥ ಹಣಕಾಸು ಅಥವಾ ಇತರ ಹಿತಾಸಕ್ತಿಯನ್ನು ಹೊಂದಿದ್ದರೆ ರಾಜ್ಯಪಾಲನು ಆದೇಶದ ಮೂಲಕ ರಾಜ್ಯ ಮುಖ್ಯ ಮಾಹಿತಿ ಆಯುಕ್ತನನ್ನು ಅಥವಾ ರಾಜ್ಯ ಮಾಹಿತಿ ಆಯುಕ್ತನನ್ನು ಪದದಿಂದ ತೆಗೆದುಹಾಕಬಹುದು.

(4) ರಾಜ್ಯ ಮುಖ್ಯ ಮಾಹಿತಿ ಆಯುಕ್ತ ಅಥವಾ ರಾಜ್ಯ ಮಾಹಿತಿ ಆಯುಕ್ತನು, ರಾಜ್ಯ ಸರ್ಕಾರ ಅಥವಾ ರಾಜ್ಯ ಸರ್ಕಾರದ ಪರವಾಗಿ ಮಾಡಿಕೊಂಡ ಯಾವುದೇ ಕರಾರು ಅಥವಾ ಒಪ್ಪಂದದಲ್ಲಿ ಯಾವುದೇ ರೀತಿಯ ಸಂಬಂಧ ಹೊಂದಿದ್ದರೆ ಅಥವಾ ಆಸಕ್ತಿ ಹೊಂದಿದ್ದರೆ ಅಥವಾ ಒಂದು ನಿಗಮಿತ ಕಂಪನಿಯ ಒಬ್ಬ ಸದಸ್ಯನಾಗಿಯಲ್ಲದೆ ಮತ್ತು ಅದರ ಇತರ ಸದಸ್ಯರೊಡನೆ ಒಬ್ಬನಾಗಿಯಲ್ಲದೆ ಅದರ ಲಾಭದಲ್ಲಿ ಅಥವಾ ಅದರಿಂದ ಬರುವ ಯಾವುದೇ ಪ್ರಯೋಜನದಲ್ಲಿ ಅಥವಾ ಉಪಲಬ್ಧಿಗಳಲ್ಲಿ ಯಾವುದೇ ರೀತಿಯಲ್ಲಿ ಭಾಗಿಯಾಗಿದ್ದರೆ, ಆತನನ್ನು, (1)ನೇ ಉಪಪ್ರಕರಣದ ಉದ್ದೇಶಗಳಿಗಾಗಿ ದುರ್ವರ್ತನೆಯ ತಪ್ಪಿತಸ್ಥನೆಂದು ಭಾವಿಸತಕ್ಕದ್ದು.

# ಅಧ್ಯಾಯ – V

## ಮಾಹಿತಿ ಆಯೋಗಗಳ ಅಧಿಕಾರಗಳು ಮತ್ತು ಕಾರ್ಯಗಳು, ಅಪೀಲು ಮತ್ತು ದಂಡನೆಗಳು

18. ಮಾಹಿತಿ ಆಯೋಗದ ಅಧಿಕಾರಗಳು ಮತ್ತು ಕಾರ್ಯಗಳು.– (1) (ಎ) ಈ ಅಧಿನಿಯಮದಡಿಯಲ್ಲಿ ಕೇಂದ್ರ ಸಹಾಯಕ ಸಾರ್ವಜನಿಕ ಮಾಹಿತಿ ಅಧಿಕಾರಿಗೆ ಅಥವಾ ಸಂದರ್ಭಾನುಸಾರ, ರಾಜ್ಯ ಸಹಾಯಕ ಸಾರ್ವಜನಿಕ ಮಾಹಿತಿ ಅಧಿಕಾರಿಗೆ ಅಂಥ ಯಾರೇ ಅಧಿಕಾರಿಯನ್ನು ನಿಯೋಜಿಸಲಾಗಿಲ್ಲವೆಂಬ ಕಾರಣದಿಂದ ಅಥವಾ 19ನೇ ಪ್ರಕರಣದ (1)ನೇ ಉಪಪ್ರಕರಣದಲ್ಲಿ ನಿರ್ದಿಷ್ಟಪಡಿಸಲಾದ ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿ ಅಥವಾ ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿ ಅಥವಾ ಹಿರಿಯ ಅಧಿಕಾರಿಗೆ ಅಥವಾ ಕೇಂದ್ರ ಮಾಹಿತಿ ಆಯುಕ್ತ ಅಥವಾ ಸಂದರ್ಭಾನುಸಾರ, ರಾಜ್ಯ ಮಾಹಿತಿ ಆಯುಕ್ತನಿಗೆ ಅದನ್ನು ರವಾನಿಸುವುದಕ್ಕಾಗಿ ಈ ಅಧಿನಿಯಮದಡಿಯಲ್ಲಿ ಮಾಹಿತಿಗಾಗಿ ಸಲ್ಲಿಸಿದ ಆತನ ಅರ್ಜಿಯನ್ನು ಅಥವಾ ಅಪೀಲನ್ನು ಸ್ವೀಕರಿಸಲು ಕೇಂದ್ರ ಸಹಾಯಕ ಸಾರ್ವಜನಿಕ ಮಾಹಿತಿ ಅಧಿಕಾರಿ ಅಥವಾ ಸಂದರ್ಭಾನುಸಾರ, ರಾಜ್ಯ ಸಾರ್ವಜನಿಕ ಸಹಾಯಕ ಮಾಹಿತಿ ಅಧಿಕಾರಿಯು ನಿರಾಕರಿಸಿದನೆಂಬ ಕಾರಣದಿಂದ ಕೋರಿಕೆಯನ್ನು ಸಲ್ಲಿಸಲು ಸಾಧ್ಯವಾಗದಿರುವಂಥ;

(ಬಿ) ಈ ಅಧಿನಿಯಮದಡಿಯಲ್ಲಿ ಕೋರಲಾದ ಯಾವುದೇ ಮಾಹಿತಿ ಪಡೆಯಲು ಅವಕಾಶವನ್ನು ನಿರಾಕರಿಸಲಾಗಿರುವಂಥ;

(ಸಿ) ಮಾಹಿತಿಗಾಗಿ ಮಾಡಿಕೊಂಡ ಮನವಿಗೆ ಈ ಅಧಿನಿಯಮದಡಿಯಲ್ಲಿ ನಿರ್ದಿಷ್ಟಪಡಿಸಲಾದ ಕಾಲಪರಿಮಿತಿಯೊಳಗೆ ಉತ್ತರ ದೊರೆಯದಿರುವಂಥ ಅಥವಾ ಮಾಹಿತಿಯನ್ನು ಒದಗಿಸಿಲ್ಲದಿರುವಂಥ;

(ಡಿ) ಆತನು ಅನುಚಿತವೆಂದು ಪರಿಗಣಿಸುವ ಶುಲ್ಕದ ಮೊತ್ತವನ್ನು ಸಂದಾಯ ಮಾಡುವಂತೆ ಅಗತ್ಯಪಡಿಸಲಾಗಿರುವಂಥ;

(ಇ) ಆತನಿಗೆ, ಈ ಅಧಿನಿಯಮದಡಿಯಲ್ಲಿ ಅಪೂರ್ಣ, ತಪ್ಪುದಾರಿಗೆ ಎಳೆಯುವ ಅಥವಾ ಸುಳ್ಳು ಮಾಹಿತಿಯನ್ನು ನೀಡಿದ್ದಾರೆಂದು ನಂಬುವಂಥ; ಮತ್ತು

(ಎಫ್) ಈ ಅಧಿನಿಯಮದಡಿಯಲ್ಲಿ ದಾಖಲೆಗಳಿಗಾಗಿ ಕೋರುವುದಕ್ಕೆ ಅಥವಾ ದಾಖಲೆಗಳನ್ನು ಪಡೆಯುವುದಕ್ಕೆ ಸಂಬಂಧಿಸಿದ ಯಾವುದೇ ಇತರ ವಿಷಯದ ಸಂಬಂಧದಲ್ಲಿ ಯಾರೇ ವ್ಯಕ್ತಿಯಿಂದ ಈ ಅಧಿನಿಯಮದ ಉಪಬಂಧಗಳಿಗೊಳಪಟ್ಟು ಫಿರ್ಯಾದನ್ನು ಸ್ವೀಕರಿಸಿ ವಿಚಾರಣೆ ನಡೆಸುವುದು ಕೇಂದ್ರ ಮಾಹಿತಿ ಆಯೋಗದ ಅಥವಾ ಸಂದರ್ಭಾನುಸಾರ, ರಾಜ್ಯ ಮಾಹಿತಿ ಆಯೋಗದ ಕರ್ತವ್ಯವಾಗಿರತಕ್ಕದ್ದು.

(2) ಕೇಂದ್ರ ಮಾಹಿತಿ ಆಯೋಗ ಅಥವಾ ಸಂದರ್ಭಾನುಸಾರ, ರಾಜ್ಯ ಮಾಹಿತಿ ಆಯೋಗವು, ಈ ವಿಷಯದ ಬಗ್ಗೆ ವಿಚಾರಣೆ ನಡೆಸುವುದಕ್ಕೆ ಸೂಕ್ತ ಕಾರಣಗಳಿವೆಯೆಂದು ಮನಗಂಡರೆ, ಅದು ಆ ಸಂಬಂಧದಲ್ಲಿ ವಿಚಾರಣೆಯನ್ನು ಪ್ರಾರಂಭಿಸಬಹುದು.

(3) ಕೇಂದ್ರ ಮಾಹಿತಿ ಆಯೋಗ ಅಥವಾ ಸಂದರ್ಭಾನುಸಾರ, ರಾಜ್ಯ ಮಾಹಿತಿ ಆಯೋಗವು, ಈ ಪ್ರಕರಣದ ಅಡಿಯಲ್ಲಿ ಯಾವುದೇ ವಿಷಯದ ಬಗ್ಗೆ ವಿಚಾರಣೆಯನ್ನು ನಡೆಸುವಾಗ, ಈ ಮುಂದಿನ ವಿಷಯಗಳ ಸಂಬಂಧದಲ್ಲಿ ಸಿವಿಲ್ ಪ್ರಕ್ರಿಯಾ ಸಂಹಿತೆ, 1908ರ ಅಡಿಯಲ್ಲಿ ಹೂಡಿದ ದಾವೆಯನ್ನು ಅಧಿವಿಚಾರಣೆ ಮಾಡುವಾಗ ಸಿವಿಲ್ ನ್ಯಾಯಾಲಯದಲ್ಲಿ ನಿಹಿತಗೊಳಿಸಲಾದಂತಹದೇ ಅಧಿಕಾರಗಳನ್ನು ಹೊಂದಿರತಕ್ಕದ್ದು, ಎಂದರೆ:–

(ಎ) ವ್ಯಕ್ತಿಗಳ ಹಾಜರಾತಿಗಾಗಿ ಸಮನು ಮಾಡುವುದು ಮತ್ತು ಒತ್ತಾಯಿಸುವುದು ಹಾಗೂ ಪ್ರಮಾಣ ವಚನದ ಮೇಲೆ ಮೌಖಿಕ ಅಥವಾ ಲಿಖಿತ ಸಾಕ್ಷ್ಯವನ್ನು ನೀಡುವುದಕ್ಕೆ ಮತ್ತು ದಸ್ತಾವೇಜುಗಳು ಅಥವಾ ವಸ್ತುಗಳನ್ನು ಹಾಜರುಪಡಿಸುವುದಕ್ಕೆ ಅವರನ್ನು ಒತ್ತಾಯಿಸುವುದು;

(ಬಿ) ದಸ್ತಾವೇಜುಗಳ ಶೋಧನೆ ಮತ್ತು ಪರಿಶೀಲನೆಯನ್ನು ಅಗತ್ಯಪಡಿಸುವುದು;

(ಸಿ) ಅಫಿದಾವಿತ್ತಿನ ಮೇಲೆ ಸಾಕ್ಷ್ಯವನ್ನು ಸ್ವೀಕರಿಸುವುದು;

(ಡಿ) ಯಾವುದೇ ನ್ಯಾಯಾಲಯ ಅಥವಾ ಕಚೇರಿಯಿಂದ ಯಾವುದೇ ಸಾರ್ವಜನಿಕ ದಾಖಲೆ ಅಥವಾ ಅದರ ಪ್ರತಿಗಳನ್ನು ಕಡ್ಡಾಯವಾಗಿ ಕೋರುವುದು;

(ಇ) ಸಾಕ್ಷಿದಾರರ ಅಥವಾ ದಸ್ತಾವೇಜುಗಳ ಪರೀಕ್ಷೆಗಾಗಿ ಸಮನ್ಸ್‌ಗಳನ್ನು ಹೊರಡಿಸುವುದು;

(ಎಫ್) ಗೊತ್ತುಪಡಿಸಬಹುದಾದ ಯಾವುದೇ ಇತರ ವಿಷಯ.

(4) ಸಂಸತ್ತಿನ, ಅಥವಾ ಸಂದರ್ಭಾನುಸಾರ, ರಾಜ್ಯ ವಿಧಾನ ಮಂಡಲದ ಯಾವುದೇ ಇತರ ಅಧಿನಿಯಮದಲ್ಲಿ ಅಸಂಗತವಾದುದು ಏನೇ ಇದ್ದರೂ, ಕೇಂದ್ರ ಮಾಹಿತಿ ಆಯೋಗ ಅಥವಾ ಸಂದರ್ಭಾನುಸಾರ, ರಾಜ್ಯ ಮಾಹಿತಿ ಆಯೋಗವು, ಈ ಅಧಿನಿಯಮದಡಿಯಲ್ಲಿ ಯಾವುದೇ ದೂರನ್ನು ವಿಚಾರಣೆ ಮಾಡುವ ಅವಧಿಯಲ್ಲಿ ಈ ಅಧಿನಿಯಮವು ಅನ್ವಯಿಸುವ ಸಾರ್ವಜನಿಕ ಪ್ರಾಧಿಕಾರದ ನಿಯಂತ್ರಣದಲ್ಲಿರುವ ಯಾವುದೇ ದಾಖಲೆಯನ್ನು ಪರೀಕ್ಷಿಸಬಹುದು ಮತ್ತು ಅಂಥ ದಾಖಲೆಯನ್ನು ಯಾವುವೇ ಕಾರಣಗಳ ಮೇಲೆ ಅದಕ್ಕೆ ದೊರೆಯದಂತೆ ತಡೆಹಿಡಿಯತಕ್ಕದ್ದಲ್ಲ.

19. ಅಪೀಲು.– (1) 7ನೇ ಪ್ರಕರಣದ (1)ನೇ ಉಪ–ಪ್ರಕರಣದಲ್ಲಿ ಅಥವಾ (3)ನೇ ಉಪಪ್ರಕರಣದ (ಎ) ಖಂಡದಲ್ಲಿ ನಿರ್ದಿಷ್ಟಪಡಿಸಲಾದ ಸಮಯದೊಳಗೆ ನಿರ್ಣಯವನ್ನು ಸ್ವೀಕರಿಸದಿರುವಂಥ ಅಥವಾ ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿಯ ಅಥವಾ ಸಂದರ್ಭಾನುಸಾರ, ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿಯ ನಿರ್ಣಯದಿಂದ ಬಾಧಿತನಾದಂಥ ಯಾರೇ ವ್ಯಕ್ತಿಯು, ಅಂಥ ಅವಧಿಯು ಮುಕ್ತಾಯಗೊಂಡಂದಿನಿಂದ ಅಥವಾ ನಿರ್ಣಯವನ್ನು ಸ್ವೀಕರಿಸಿದ ದಿನದಿಂದ ಮೂವತ್ತು ದಿನಗಳೊಳಗೆ ಪ್ರತಿಯೊಂದು ಸಾರ್ವಜನಿಕ ಪ್ರಾಧಿಕಾರದಲ್ಲಿ, ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿ ಅಥವಾ ಸಂದರ್ಭಾನುಸಾರ, ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿಗಿಂತ ಹಿರಿಯ ದರ್ಜೆಯ ಅಧಿಕಾರಿಗೆ ಅಪೀಲು ಸಲ್ಲಿಸಬಹುದು:

ಪರಂತು, ಅಪೀಲುದಾರನು, ಸಕಾಲದಲ್ಲಿ ಅಪೀಲು ಸಲ್ಲಿಸಲು ಸಾಕಷ್ಟು ಕಾರಣದಿಂದ ಪ್ರತಿಬಂಧಿತನಾಗಿದ್ದಾನೆಂದು ಅಧಿಕಾರಿಗೆ ಮನದಟ್ಟಾದರೆ ಅಂಥ ಅಧಿಕಾರಿಯು ಮೂವತ್ತು ದಿನಗಳ ಅವಧಿ ಮುಗಿದ ತರುವಾಯ ಅಪೀಲನ್ನು ಸ್ವೀಕರಿಸಬಹುದು.

(2) ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿ ಅಥವಾ ಸಂದರ್ಭಾನುಸಾರ, ಒಬ್ಬ ರಾಜ್ಯ ಮಾಹಿತಿ ಅಧಿಕಾರಿಯು ಮೂರನೇ ಪಕ್ಷದಾರನ ಮಾಹಿತಿಯನ್ನು ಬಹಿರಂಗಪಡಿಸುವಂತೆ 11ನೇ ಪ್ರಕರಣದ ಮೇರೆಗೆ ಮಾಡಿದ ಆದೇಶದ ವಿರುದ್ಧ ಅಪೀಲು ಸಲ್ಲಿಸಿದಲ್ಲಿ ಸಂಬಂಧಪಟ್ಟ ಮೂರನೇ ಪಕ್ಷದಾರನು ಆದೇಶದ ದಿನಾಂಕದಿಂದ ಮೂವತ್ತು ದಿನಗಳೊಳಗೆ ಅಪೀಲು ಸಲ್ಲಿಸತಕ್ಕದ್ದು.

(3) (1)ನೇ ಉಪಪ್ರಕರಣದ ಮೇರೆಗಿನ ನಿರ್ಣಯದ ವಿರುದ್ಧ ಸಲ್ಲಿಸುವ ಎರಡನೇ ಅಪೀಲನ್ನು, ಕೇಂದ್ರ ಮಾಹಿತಿ ಆಯೋಗ ಅಥವಾ ರಾಜ್ಯ ಮಾಹಿತಿ ಆಯೋಗವು ನಿರ್ಣಯವನ್ನು ಮಾಡಬೇಕಿದ್ದ ಅಥವಾ ವಾಸ್ತವವಾಗಿ ಸ್ವೀಕರಿಸಿದ ದಿನಾಂಕದಿಂದ ತೊಂಬತ್ತು ದಿನಗಳ ಒಳಗಾಗಿ ಸಲ್ಲಿಸತಕ್ಕದ್ದು:

ಪರಂತು, ಕೇಂದ್ರ ಮಾಹಿತಿ ಆಯೋಗ ಅಥವಾ ಸಂದರ್ಭಾನುಸಾರ, ರಾಜ್ಯ ಮಾಹಿತಿ ಆಯೋಗಕ್ಕೆ ಅಪೀಲುದಾರನು ಸಕಾಲದಲ್ಲಿ ಅಪೀಲನ್ನು ಸಲ್ಲಿಸಲು ಯುಕ್ತ ಕಾರಣದಿಂದ ಪ್ರತಿಬಂಧಿತನಾಗಿದ್ದಾನೆಂದು ಮನದಟ್ಟಾದರೆ, ತೊಂಭತ್ತು ದಿನಗಳ ಅವಧಿಯು ಮುಗಿದ ತರುವಾಯ ಆ ಅಪೀಲನ್ನು ಸ್ವೀಕರಿಸಬಹುದು.

(4) ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿ ಅಥವಾ ಸಂದರ್ಭಾನುಸಾರ, ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿಯು ಮಾಡಿದ ಯಾವ ನಿರ್ಣಯದ ವಿರುದ್ಧ ಅಪೀಲು ಸಲ್ಲಿಸಲಾಗಿದೆಯೋ ಅದು ಮೂರನೆಯ ಪಕ್ಷಕಾರನ ಮಾಹಿತಿಗೆ ಸಂಬಂಧಿಸಿದ್ದರೆ, ಕೇಂದ್ರ ಮಾಹಿತಿ ಆಯೋಗ ಅಥವಾ

ಸಂದರ್ಭಾನುಸಾರ, ರಾಜ್ಯ ಮಾಹಿತಿ ಆಯೋಗವು ಮೂರನೆಯ ಪಕ್ಷದಾರನಿಗೆ ತನ್ನ ಅಹವಾಲನ್ನು ಹೇಳಿಕೊಳ್ಳಲು ಸೂಕ್ತ ಅವಕಾಶವನ್ನು ನೀಡತಕ್ಕದ್ದು.

(5) ಯಾವುವೇ ಅಪೀಲು ವ್ಯವಹರಣೆಗಳಲ್ಲಿ, ಕೋರಿಕೆಯ ನಿರಾಕರಣೆ ಸಮರ್ಥನೀಯವಾಗಿತ್ತು ಎಂಬುದನ್ನು ರುಜುವಾತುಪಡಿಸುವ ಹೊಣೆ ಕೋರಿಕೆಯನ್ನು ನಿರಾಕರಿಸಿದ ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿ ಅಥವಾ ಸಂದರ್ಭಾನುಸಾರ, ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿಯ ಮೇಲೆ ಇರತಕ್ಕದ್ದು.

(6) (1)ನೇ ಉಪಪ್ರಕರಣದ ಅಡಿಯಲ್ಲಿ ಅಥವಾ (2)ನೇ ಉಪ ಪ್ರಕರಣದ ಅಡಿಯಲ್ಲಿ ಸಲ್ಲಿಸಲಾದ ಅಪೀಲನ್ನು, ಅದನ್ನು ಸ್ವೀಕರಿಸಿದ ಮೂವತ್ತು ದಿನಗಳೊಳಗೆ ಅಥವಾ ಸಂದರ್ಭಾನುಸಾರ, ಅದನ್ನು ಸಲ್ಲಿಸಿದ ದಿನಾಂಕದಿಂದ ಒಟ್ಟು ನಲವತ್ತೈದು ದಿನಗಳನ್ನು ಮೀರದ ಹಾಗೆ ವಿಸ್ತರಿಸಿದ ಅವಧಿಯೊಳಗೆ ವಿಲೆ ಮಾಡಿ ಅದರ ಕಾರಣಗಳನ್ನು ಲಿಖಿತದಲ್ಲಿ ದಾಖಲಿಸತಕ್ಕದ್ದು.

(7) ಕೇಂದ್ರ ಮಾಹಿತಿ ಆಯೋಗ ಅಥವಾ ಸಂದರ್ಭಾನುಸಾರ, ರಾಜ್ಯ ಮಾಹಿತಿ ಆಯೋಗದ ನಿರ್ಣಯಗಳು ಬಂಧಕವಾಗಿರತಕ್ಕದ್ದು.

(8) ಕೇಂದ್ರ ಮಾಹಿತಿ ಆಯೋಗ ಅಥವಾ ಸಂದರ್ಭಾನುಸಾರ, ರಾಜ್ಯ ಮಾಹಿತಿ ಆಯೋಗವು, ತನ್ನ ನಿರ್ಣಯದಲ್ಲಿ,–

(ಎ) ಈ ಅಧಿನಿಯಮದ ಉಪಬಂಧಗಳನ್ನು ಪಾಲಿಸುವಂತೆ ಮಾಡಲು ಈ ಮುಂದಿನವುಗಳನ್ನು ಒಳಗೊಂಡಂತೆ ಅವಶ್ಯವಾಗಬಹುದಾದಂಥ ಯಾವುವೇ ಕ್ರಮಗಳನ್ನು ಕೈಗೊಳ್ಳಲು ಸಾರ್ವಜನಿಕ ಪ್ರಾಧಿಕಾರವನ್ನು ಅಗತ್ಯಪಡಿಸುವ ಅಧಿಕಾರವನ್ನು ಹೊಂದಿರುತ್ತದೆ.

(i) ನಿರ್ದಿಷ್ಟ ರೀತಿಯಲ್ಲಿ ಮಾಹಿತಿ ಪಡೆಯಲು ಅವಕಾಶ ನೀಡುವಂತೆ ಕೋರಿದರೆ ಆ ರೀತಿಯಲ್ಲಿ ಮಾಹಿತಿ ಪಡೆಯಲು ಅವಕಾಶ ನೀಡುವುದು;

(ii) ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿ ಅಥವಾ ಸಂದರ್ಭಾನುಸಾರ, ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿಯನ್ನು ನೇಮಿಸುವುದು;

(iii) ಕೆಲವು ಮಾಹಿತಿಯನ್ನು ಅಥವಾ ಮಾಹಿತಿಯ ಪ್ರವರ್ಗಗಳನ್ನು ಪ್ರಕಟಿಸುವುದು;

(iv) ದಾಖಲೆಗಳ ನಿರ್ವಹಣೆ, ವ್ಯವಸ್ಥಾಪನೆ ಮತ್ತು ನಾಶಕ್ಕೆ ಸಂಬಂಧಿಸಿದಂತೆ ತಾನು ಅನುಸರಿಸುತ್ತಿರುವ ಪದ್ಧತಿಗಳಲ್ಲಿ ಅಗತ್ಯ ಬದಲಾವಣೆಗಳನ್ನು ಮಾಡುವುದು;

(v) ಮಾಹಿತಿ ಹಕ್ಕಿನ ಬಗ್ಗೆ ತನ್ನ ಅಧಿಕಾರಿಗಳಿಗೆ ತರಬೇತಿ ಅವಕಾಶವನ್ನು ಹೆಚ್ಚಿಸುವುದು;

(vi) 4ನೇ ಪ್ರಕರಣದ (1)ನೇ ಉಪ ಪ್ರಕರಣದ (ಬಿ) ಖಂಡದ ಪ್ರಕಾರ ವಾರ್ಷಿಕ ವರದಿಯೊಂದನ್ನು ಅದಕ್ಕೆ ಒದಗಿಸುವುದು.

(ಬಿ) ಯಾವುದೇ ನಷ್ಟ ಅಥವಾ ಇತರ ಹಾನಿಗಾಗಿ ಫಿರ್ಯಾದಿಗೆ ನಷ್ಟ ಪರಿಹಾರ ನೀಡುವಂತೆ ಸಾರ್ವಜನಿಕ ಪ್ರಾಧಿಕಾರವನ್ನು ಅಗತ್ಯಪಡಿಸುವುದು;

(ಸಿ) ಈ ಅಧಿನಿಯಮದ ಅಡಿಯಲ್ಲಿ ಉಪಬಂಧಿಸಲಾದ ಯಾವುದೇ ಒಂದು ದಂಡನೆಯನ್ನು ವಿಧಿಸುವುದು;

(ಡಿ) ಅರ್ಜಿಯನ್ನು ತಿರಸ್ಕರಿಸುವುದು.

(9) ಕೇಂದ್ರ ಮಾಹಿತಿ ಆಯೋಗ ಅಥವಾ ಸಂದರ್ಭಾನುಸಾರ, ರಾಜ್ಯ ಮಾಹಿತಿ ಆಯೋಗವು, ಫಿರ್ಯಾದಿಗೆ ಮತ್ತು ಸಾರ್ವಜನಿಕ ಪ್ರಾಧಿಕಾರಕ್ಕೆ ಅಪೀಲು ಸಲ್ಲಿಸುವ ಹಕ್ಕು ಸೇರಿದಂತೆ ತನ್ನ ನಿರ್ಣಯವನ್ನು ತಿಳಿಸತಕ್ಕದ್ದು.

(10) ಕೇಂದ್ರ ಮಾಹಿತಿ ಆಯೋಗ ಅಥವಾ ಸಂದರ್ಭಾನುಸಾರ, ರಾಜ್ಯ ಮಾಹಿತಿ ಆಯೋಗವು ನಿಯಮಿಸಬಹುದಾದಂಥ ಪ್ರಕ್ರಿಯೆಗನುಸಾರವಾಗಿ ಅಪೀಲಿನ ಬಗ್ಗೆ ತೀರ್ಮಾನ ತೆಗೆದುಕೊಳ್ಳತಕ್ಕದ್ದು.

20. ದಂಡನೆಗಳು.– (1) ಕೇಂದ್ರ ಮಾಹಿತಿ ಆಯೋಗ ಅಥವಾ ಸಂದರ್ಭಾನುಸಾರ ರಾಜ್ಯ ಮಾಹಿತಿ ಆಯೋಗವು ಯಾವುದೇ ದೂರು ಅಥವಾ ಕೋರಿಕೆಯ ಬಗ್ಗೆ ತೀರ್ಮಾನ ತೆಗೆದುಕೊಳ್ಳುವ ಸಮಯದಲ್ಲಿ, ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿ ಅಥವಾ ಸಂದರ್ಭಾನುಸಾರ, ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿಯು, ಯಾವುದೇ ಯುಕ್ತ ಕಾರಣವಿಲ್ಲದೆ ಮಾಹಿತಿ ಕೋರಿ ಸಲ್ಲಿಸಿದ ಅರ್ಜಿಯನ್ನು ಸ್ವೀಕರಿಸಲು ನಿರಾಕರಿಸಿದ್ದಾನೆಂದು ಅಥವಾ 7ನೇ ಪ್ರಕರಣದ (1)ನೇ ಉಪ ಪ್ರಕರಣದ ಅಡಿಯಲ್ಲಿ ನಿರ್ದಿಷ್ಟಪಡಿಸಿದ ಸಮಯದೊಳಗೆ ಮಾಹಿತಿಯನ್ನು ಒದಗಿಸಿಲ್ಲವೆಂದು ಅಭಿಪ್ರಾಯಪಟ್ಟಲ್ಲಿ, ಅಥವಾ ಮಾಹಿತಿಗಾಗಿ ಕೋರಿಕೆಯನ್ನು ದುರುದ್ದೇಶದಿಂದ ನಿರಾಕರಿಸಿದ್ದಾನೆಂದು ಅಥವಾ ಗೊತ್ತಿದ್ದೂ ಸರಿಯಲ್ಲದ, ಅಪೂರ್ಣ ಅಥವಾ ದಾರಿತಪ್ಪಿಸುವ ಮಾಹಿತಿಗಳನ್ನು ನೀಡಿದ್ದಾನೆಂದು ಅಥವಾ ಕೋರಿಕೆಯ ವಿಷಯವಾಗಿದ್ದ ಮಾಹಿತಿಯನ್ನು ನಾಶಪಡಿಸಿದ್ದಾನೆಂದು ಅಥವಾ ಮಾಹಿತಿ ಒದಗಿಸುವುದಕ್ಕೆ ಯಾವುದೇ ರೀತಿಯಿಂದ ಅಡ್ಡಿಪಡಿಸಿದ್ದಾನೆಂದು ಅಭಿಪ್ರಾಯಪಟ್ಟಲ್ಲಿ, ಅರ್ಜಿಯನ್ನು ಸ್ವೀಕರಿಸಿದ ದಿನದವರೆಗೆ ಅಥವಾ ಮಾಹಿತಿಯನ್ನು ಒದಗಿಸಿದ ದಿನದವರೆಗೆ ಪ್ರತಿದಿನಕ್ಕೆ ಎರಡುನೂರ ಐವತ್ತು ರೂಪಾಯಿಗಳ ಜುಲ್ಮಾನೆಯನ್ನು ವಿಧಿಸತಕ್ಕದ್ದು, ಆದರೆ, ಜುಲ್ಮಾನೆಯ ಒಟ್ಟು ಮೊತ್ತವು ಇಪ್ಪತ್ತೈದು ಸಾವಿರ ರೂ.ಗಳನ್ನು ಮೀರತಕ್ಕದ್ದಲ್ಲ:

ಪರಂತು, ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿಗೆ ಅಥವಾ ಸಂದರ್ಭಾನುಸಾರ, ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿಗೆ ಯಾವುದೇ ದಂಡನೆಯನ್ನು ವಿಧಿಸುವ ಮುನ್ನ ಅವನಿಗೆ ತನ್ನ ಅಹವಾಲನ್ನು ಹೇಳಿಕೊಳ್ಳಲು ಯುಕ್ತ ಅವಕಾಶವನ್ನು ನೀಡತಕ್ಕದ್ದು.ಮತ್ತೂ

ಪರಂತು, ತಾನು ಸಮುಚಿತವಾಗಿ ಮತ್ತು ಶ್ರದ್ಧೆಯಿಂದ ಕಾರ್ಯ ನಿರ್ವಹಿಸಿದ್ದೇನೆಂದು ರುಜುವಾತುಪಡಿಸುವುದು ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿ ಅಥವಾ ಸಂದರ್ಭಾನುಸಾರ, ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿಯ ಹೊಣೆಯಾಗಿರತಕ್ಕದ್ದು.

(2) ಕೇಂದ್ರ ಮಾಹಿತಿ ಆಯೋಗ ಅಥವಾ ಸಂದರ್ಭಾನುಸಾರ ರಾಜ್ಯ ಮಾಹಿತಿ ಆಯೋಗವು ಯಾವುದೇ ದೂರು ಅಥವಾ ಮನವಿಯ ಬಗ್ಗೆ ನಿರ್ಧಾರ ತೆಗೆದುಕೊಳ್ಳುವ ಸಮಯದಲ್ಲಿ, ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿ ಅಥವಾ ಸಂದರ್ಭಾನುಸಾರ, ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿಯು ಯಾವುದೇ ಯುಕ್ತ ಕಾರಣವಿಲ್ಲದೆ ಹಾಗೂ ಸತತವಾಗಿ, ಮಾಹಿತಿ ಕೋರಿ ಸಲ್ಲಿಸಿದ ಅರ್ಜಿಯನ್ನು ಸ್ವೀಕರಿಸಲು ವಿಫಲನಾಗಿದ್ದಾನೆಂದು ಅಥವಾ 7ನೇ ಪ್ರಕರಣದ (1)ನೇ ಉಪಪ್ರಕರಣದಲ್ಲಿ ನಿರ್ದಿಷ್ಟಪಡಿಸಿದ ಸಮಯದೊಳಗೆ ಮಾಹಿತಿ ನೀಡಿಲ್ಲವೆಂದು ಅಥವಾ ದುರುದ್ದೇಶದಿಂದ ಮಾಹಿತಿಯ ಕೋರಿಕೆಯನ್ನು ನಿರಾಕರಿಸಿದ್ದಾನೆಂದು ಅಥವಾ ಗೊತ್ತಿದ್ದೂ ಸರಿಯಲ್ಲದ, ಅಪೂರ್ಣ ಅಥವಾ ದಾರಿ ತಪ್ಪಿಸುವ ಮಾಹಿತಿ ನೀಡಿದ್ದಾನೆಂದು ಅಥವಾ ಕೋರಿಕೆಯ ವಿಷಯವಾಗಿದ್ದ ಮಾಹಿತಿಯನ್ನು ನಾಶಪಡಿಸಿದ್ದಾನೆಂದು ಅಥವಾ ಮಾಹಿತಿ ಒದಗಿಸುವುದಕ್ಕೆ ಯಾವುದೇ ರೀತಿಯಿಂದ ಅಡ್ಡಿಪಡಿಸಿದ್ದಾನೆಂದು ಅಭಿಪ್ರಾಯಪಟ್ಟರೆ ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿ ಅಥವಾ ಸಂದರ್ಭಾನುಸಾರ, ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿಯ ವಿರುದ್ಧ ಅವನಿಗೆ ಅನ್ವಯವಾಗುವ ಸೇವಾ ನಿಯಮಗಳ ಅಡಿಯಲ್ಲಿ ಶಿಸ್ತು ಕ್ರಮ ಕೈಗೊಳ್ಳಲು ಶಿಫಾರಸ್ಸು ಮಾಡತಕ್ಕದ್ದು.

# ಅಧ್ಯಾಯ – VI

## ಸಂಕೀರ್ಣ

21. ಸದ್ಭಾವನೆಯಿಂದ ಕೈಗೊಂಡ ಕ್ರಮದ ರಕ್ಷಣೆ.– ಈ ಅಧಿನಿಯಮದ ಅಥವಾ ಅದರ ಅಡಿಯಲ್ಲಿ ರಚಿಸಲಾದ ನಿಯಮಗಳ ಅಡಿಯಲ್ಲಿ ಸದ್ಭಾವನೆಯಿಂದ ಮಾಡಿದ ಅಥವಾ ಮಾಡಲು ಉದ್ದೇಶಿಸಿದ ಯಾವುದೇ ಕಾರ್ಯಕ್ಕಾಗಿ, ಯಾರೇ ವ್ಯಕ್ತಿಯ ವಿರುದ್ಧ ಯಾವುದೇ ದಾವೆ, ಪ್ರಾಸಿಕ್ಯೂಷನ್ ಅಥವಾ ಇತರ ಕಾನೂನು ಕ್ರಮವನ್ನು ಕೈಗೊಳ್ಳತಕ್ಕದ್ದಲ್ಲ.

22. ಅಧಿನಿಯಮವು ಅಧ್ಯಾರೋಹಿ ಪರಿಣಾಮವನ್ನು ಹೊಂದಿರುವುದು.– ಸರ್ಕಾರಿ ರಹಸ್ಯಗಳ ಅಧಿನಿಯಮ 1923 (1923ರ 19)ರಲ್ಲಿ ಮತ್ತು ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಇತರ ಕಾನೂನು ಅಥವಾ ಈ ಅಧಿನಿಯಮದ ಹೊರತಾಗಿ ಇತರ ಯಾವುದೇ ಕಾನೂನಿನ ಬಲದಿಂದ ಪರಿಣಾಮ ಹೊಂದಿರುವ ಯಾವುದೇ ಲಿಖಿತದಲ್ಲಿ ಅಸಂಗತವಾದುದೇನೇ ಇದ್ದರೂ ಈ ಅಧಿನಿಯಮದ ಉಪಬಂಧಗಳು ಪರಿಣಾಮಕಾರಿಯಾಗಿರತಕ್ಕದ್ದು.

23. ನ್ಯಾಯಾಲಯಗಳ ಅಧಿಕಾರ ವ್ಯಾಪ್ತಿಯ ಪ್ರತಿಭಂದಕ :– ಯಾವುದೇ ನ್ಯಾಯಾಲಯವೂ ಈ ಅಧಿನಿಯಮದ ಅಡಿಯಲ್ಲಿ ಮಾಡಲಾದ ಯಾವುದೇ ಆದೇಶದ ಸಂಬಂಧದಲ್ಲಿ ಯಾವುದೇ ದಾವೆ, ಅರ್ಜಿ ಅಥವಾ ಇತರ ವ್ಯವಹರಣೆಯನ್ನು ಸ್ವೀಕರಿಸತಕ್ಕದ್ದಲ್ಲ ಮತ್ತು ಈ ಅಧಿನಿಯಮದ ಅಡಿಯಲ್ಲಿನ ಒಂದು ಅಪೀಲಿನ ಮೂಲಕವಲ್ಲದೆ ಯಾವುದೇ ಅಂಥ ಆದೇಶವನ್ನು ಪ್ರಶ್ನಿಸತಕ್ಕದ್ದಲ್ಲ.

24. ಅಧಿನಿಯಮವು ಕೆಲವು ಸಂಸ್ಥೆಗಳಿಗೆ ಅನ್ವಯಿಸದಿರುವುದು.– (1) ಈ ಅಧಿನಿಯಮದಲ್ಲಿ ಇರುವುದು ಯಾವುದೂ, ಎರಡನೇ ಅನುಸೂಚಿಯಲ್ಲಿ ನಿರ್ದಿಷ್ಟಪಡಿಸಿರುವ, ಕೇಂದ್ರ ಸರ್ಕಾರವು ಸ್ಥಾಪಿಸಿ ನಡೆಸುತ್ತಿರುವ ಸಂಸ್ಥೆಗಳಾಗಿರುವ ಗುಪ್ತ ಮಾಹಿತಿ ಮತ್ತು ಭದ್ರತಾ ಸಂಸ್ಥೆಗಳಿಗೆ ಅಥವಾ ಅಂಥ ಸಂಸ್ಥೆಗಳು ಸರ್ಕಾರಕ್ಕೆ ಒದಗಿಸಿರುವ ಯಾವುವೇ ಮಾಹಿತಿಗಳಿಗೆ ಅನ್ವಯವಾಗತಕ್ಕದ್ದಲ್ಲ:

ಪರಂತು, ಭ್ರಷ್ಟಾಚಾರದ ಆರೋಪಗಳಿಗೆ ಹಾಗೂ ಮಾನವ ಹಕ್ಕುಗಳ ಉಲ್ಲಂಘನೆಗಳಿಗೆ ಸಂಬಂಧಿಸಿದ ಮಾಹಿತಿಯನ್ನು ಈ ಉಪ ಪ್ರಕರಣದ ಅಡಿಯಲ್ಲಿ ಹೊರತುಪಡಿಸತಕ್ಕದ್ದಲ್ಲ.ಮತ್ತೂ ಪರಂತು, ಮಾನವ ಹಕ್ಕುಗಳ ಉಲ್ಲಂಘನೆಯ ಆರೋಪಗಳಿಗೆ ಸಂಬಂಧಿಸಿದಂತೆ ಮಾಹಿತಿಯನ್ನು ಕೋರಿರುವ ಸಂದರ್ಭದಲ್ಲಿ, ಕೇಂದ್ರ ಮಾಹಿತಿ ಆಯೋಗವು ಸಮ್ಮತಿಸಿದ ತರುವಾಯ ಮಾತ್ರವೇ ಆ ಮಾಹಿತಿಯನ್ನು ಒದಗಿಸತಕ್ಕದ್ದು ಮತ್ತು 7ನೇ ಪ್ರಕರಣದಲ್ಲಿ ಏನೇ ಇದ್ದರೂ ಮನವಿಯನ್ನು ಸ್ವೀಕರಿಸಿದ ದಿನಾಂಕದಿಂದ ನಲವತ್ತೈದು ದಿನಗಳೊಳಗೆ ಅಂಥ ಮಾಹಿತಿಯನ್ನು ಒದಗಿಸತಕ್ಕದ್ದು.

(2) ಕೇಂದ್ರ ಸರ್ಕಾರವು, ಅಧಿಕೃತ ರಾಜಪತ್ರದಲ್ಲಿ ಅಧಿಸೂಚನೆಯ ಮೂಲಕ, ಆ ಸರ್ಕಾರದಿಂದ ಸ್ಥಾಪಿಸಲಾದ ಯಾವುದೇ ಇತರ ಗುಪ್ತಮಾಹಿತಿ ಅಥವಾ ಭದ್ರತಾ ಸಂಸ್ಥೆಯನ್ನು ಸೇರಿಸಿ ಅಥವಾ ಅದರಲ್ಲಿ ಈಗಾಗಲೇ ನಿರ್ದಿಷ್ಟಪಡಿಸಿದ ಯಾವುದೇ ಸಂಸ್ಥೆಯನ್ನು ಅದರಿಂದ ಬಿಟ್ಟು ಅನುಸೂಚಿಯನ್ನು ತಿದ್ದುಪಡಿ ಮಾಡಬಹುದು ಮತ್ತು ಅಂಥ ಅಧಿಸೂಚನೆಯ ಪ್ರಕಟಣೆಯ ನಂತರ ಅಂಥ ಸಂಸ್ಥೆಯನ್ನು ಅನುಸೂಚಿಯಲ್ಲಿ ಸೇರಿಸಲಾಗಿದೆಯೆಂದು ಅಥವಾ ಸಂದರ್ಭಾನುಸಾರ, ಬಿಟ್ಟುಬಿಡಲಾಗಿದೆಯೆಂದು ಭಾವಿಸತಕ್ಕದ್ದು.

(3) (2)ನೇ ಉಪ–ಪ್ರಕರಣದ ಅಡಿಯಲ್ಲಿ ಹೊರಡಿಸಿದ ಪ್ರತಿಯೊಂದು ಅಧಿಸೂಚನೆಯನ್ನು ಸಂಸತ್ತಿನ ಪ್ರತಿಯೊಂದು ಸದನದ ಮುಂದೆ ಮಂಡಿಸತಕ್ಕದ್ದು.

(4) ಈ ಅಧಿನಿಯಮದಲ್ಲಿ ಒಳಗೊಂಡಿರುವ ಯಾವುದೂ, ಸರ್ಕಾರವು ಅಧಿಕೃತ ರಾಜ್ಯಪತ್ರದಲ್ಲಿ ಅಧಿಸೂಚನೆಯ ಮೂಲಕ ಕಾಲಕಾಲಕ್ಕೆ ನಿರ್ದಿಷ್ಟಪಡಿಸಬಹುದಾದಂತೆ, ರಾಜ್ಯ ಸರ್ಕಾರದಿಂದ ಸ್ಥಾಪಿಸಲಾದ ಸಂಸ್ಥೆಗಳಾಗಿರುವಂಥ ಗುಪ್ತಮಾಹಿತಿ ಮತ್ತು ಭದ್ರತಾ ಸಂಸ್ಥೆಗಳಿಗೆ ಅನ್ವಯಿಸತಕ್ಕದ್ದಲ್ಲ:

ಪರಂತು, ಭ್ರಷ್ಟಾಚಾರದ ಆಪಾದನೆಗಳಿಗೆ ಸಂಬಂಧಿಸಿದ ಮಾಹಿತಿಯನ್ನು ಈ ಉಪ ಪ್ರಕರಣದ ಅಡಿಯಲ್ಲಿ ಹೊರತುಪಡಿಸತಕ್ಕದ್ದಲ್ಲ:ಮತ್ತೂ

ಪರಂತು, ಮಾನವ ಹಕ್ಕುಗಳ ಉಲ್ಲಂಘನೆಯ ಆಪಾದನೆಗಳ ಸಂಬಂಧದ ಮಾಹಿತಿಯನ್ನು ಕೋರಲಾಗಿರುವ ಸಂದರ್ಭದಲ್ಲಿ, ಆ ಮಾಹಿತಿಯನ್ನು ರಾಜ್ಯ ಮಾಹಿತಿ ಆಯೋಗವು ಅನುಮೋದಿಸಿದ ತರುವಾಯ ಮಾತ್ರವೇ ಒದಗಿಸತಕ್ಕದ್ದು ಮತ್ತು 7ನೇ ಪ್ರಕರಣದಲ್ಲಿ ಏನೇ ಇದ್ದರೂ ಕೋರಿಕೆಯನ್ನು ಸ್ವೀಕರಿಸಿದ ದಿನಾಂಕದಿಂದ ನಲವತ್ತೈದು ದಿನಗಳ ಒಳಗೆ ಅಂಥ ಮಾಹಿತಿಯನ್ನು ಒದಗಿಸತಕ್ಕದ್ದು.

(5) (4)ನೇ ಉಪಪ್ರಕರಣದ ಅಡಿಯಲ್ಲಿ ಹೊರಡಿಸಲಾದ ಪ್ರತಿಯೊಂದು ಅಧಿಸೂಚನೆಯನ್ನು ರಾಜ್ಯ ವಿಧಾನ ಮಂಡಲದ ಮುಂದೆ ಮಂಡಿಸತಕ್ಕದ್ದು.

25. ಮೇಲ್ವಿಚಾರಣೆ ಮತ್ತು ವರದಿ ಮಾಡುವುದು.– (1) ಕೇಂದ್ರ ಮಾಹಿತಿ ಆಯೋಗ ಅಥವಾ ಸಂದರ್ಭಾನುಸಾರ, ರಾಜ್ಯ ಮಾಹಿತಿ ಆಯೋಗವು, ಪ್ರತಿಯೊಂದು ವರ್ಷದ ಮುಕ್ತಾಯದ ನಂತರ, ಸಾಧ್ಯವಾದಷ್ಟು ಬೇಗನೆ, ಆ ವರ್ಷದ ಅವಧಿಯಲ್ಲಿ ಈ ಅಧಿನಿಯಮದ ಉಪಬಂಧಗಳನ್ನು ಕಾರ್ಯಗತಗೊಳಿಸಿದ ಬಗ್ಗೆ ಒಂದು ವರದಿಯನ್ನು ಸಿದ್ಧಪಡಿಸತಕ್ಕದ್ದು ಮತ್ತು ಅದರ ಒಂದು ಪ್ರತಿಯನ್ನು ಸಮುಚಿತ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

(2) ಪ್ರತಿಯೊಂದು ಸಚಿವಾಲಯವು ಅಥವಾ ಇಲಾಖೆಯು ತನ್ನ ಅಧಿಕಾರ ವ್ಯಾಪ್ತಿಯಲ್ಲಿ ಬರುವ ಸಾರ್ವಜನಿಕ ಪ್ರಾಧಿಕಾರಗಳಿಗೆ ಸಂಬಂಧಿಸಿದಂತೆ, ಈ ಪ್ರಕರಣದ ಅಡಿಯಲ್ಲಿ ವರದಿಯನ್ನು ಸಿದ್ಧಪಡಿಸಲು ಅಗತ್ಯಪಡಿಸಲಾದಂಥ ಮಾಹಿತಿಯನ್ನು ಸಂಗ್ರಹಿಸಿ ಕೇಂದ್ರ ಮಾಹಿತಿ ಆಯೋಗಕ್ಕೆ ಅಥವಾ ಸಂದರ್ಭಾನುಸಾರ, ರಾಜ್ಯ ಮಾಹಿತಿ ಆಯೋಗಕ್ಕೆ ಒದಗಿಸತಕ್ಕದ್ದು ಮತ್ತು ಆ ಮಾಹಿತಿಯನ್ನು ಒದಗಿಸುವುದಕ್ಕೆ ಸಂಬಂಧಿಸಿದ ಅಗತ್ಯತೆಗಳನ್ನು ಪಾಲಿಸತಕ್ಕದ್ದು ಮತ್ತು ಈ ಪ್ರಕರಣದ ಉದ್ದೇಶಗಳಿಗಾಗಿ ದಾಖಲೆಗಳನ್ನು ಇರಿಸಿಕೊಳ್ಳತಕ್ಕದ್ದು.

(3) ವರದಿಯ ವರ್ಷಕ್ಕೆ ಸಂಬಂಧಿಸಿದಂತೆ ಪ್ರತಿಯೊಂದು ವರದಿಯಲ್ಲಿ ಈ ಮುಂದಿನವುಗಳನ್ನು ತಿಳಿಸತಕ್ಕದ್ದು,–

(ಎ) ಪ್ರತಿಯೊಂದು ಸಾರ್ವಜನಿಕ ಪ್ರಾಧಿಕಾರಕ್ಕೆ ಸಲ್ಲಿಸಿದ ಕೋರಿಕೆಗಳ ಸಂಖ್ಯೆ;

(ಬಿ) ಕೋರಿಕೆಗಳ ಅನುಸರಣೆಯಲ್ಲಿ ಅರ್ಜಿದಾರರಿಗೆ ದಾಖಲೆಗಳನ್ನು ನೋಡುವ ಹಕ್ಕಿಲ್ಲವೆಂದು ತೆಗೆದುಕೊಂಡ ತೀರ್ಮಾನಗಳ ಸಂಖ್ಯೆ, ಈ ತೀರ್ಮಾನಗಳನ್ನು ಈ ಅಧಿನಿಯಮದ ಯಾವ ಉಪಬಂಧಗಳ ಅಡಿಯಲ್ಲಿ ಕೈಗೊಳ್ಳಲಾಗಿದೆಯೋ ಆ ಉಪಬಂಧಗಳು ಮತ್ತು ಇಂಥ ಉಪಬಂಧಗಳನ್ನು ಅನ್ವಯಿಸಿರುವ ಪ್ರಕರಣಗಳ ಸಂಖ್ಯೆ;

(ಸಿ) ಕೇಂದ್ರ ಮಾಹಿತಿ ಆಯೋಗ ಅಥವಾ ಸಂದರ್ಭಾನುಸಾರ, ರಾಜ್ಯ ಮಾಹಿತಿ ಆಯೋಗಕ್ಕೆ ಪುನರವಲೋಕನಕ್ಕಾಗಿ ಸಲ್ಲಿಸಲಾದ ಅಪೀಲುಗಳ ಸಂಖ್ಯೆ, ಅಪೀಲುಗಳ ಸ್ವರೂಪ ಮತ್ತು ಅಪೀಲುಗಳಲ್ಲಿ ಕೈಗೊಂಡ ನಿರ್ಧಾರ;

(ಡಿ) ಈ ಅಧಿನಿಯಮವನ್ನು ಅನ್ವಯಿಸುವ ಸಂಬಂಧದಲ್ಲಿ ಯಾವುದೇ ಅಧಿಕಾರಿಯ ವಿರುದ್ಧ ತೆಗೆದುಕೊಂಡ ಯಾವುದೇ ಶಿಸ್ತು ಕ್ರಮದ ವಿವರಗಳು;

(ಇ) ಈ ಅಧಿನಿಯಮದ ಅಡಿಯಲ್ಲಿ ಪ್ರತಿಯೊಂದು ಸಾರ್ವಜನಿಕ ಪ್ರಾಧಿಕಾರದಿಂದ ಸಂಗ್ರಹಿಸಲಾದ ಶುಲ್ಕಗಳ ಮೊತ್ತ;

(ಎಫ್) ಈ ಅಧಿನಿಯಮದ ಆಶಯ ಮತ್ತು ಉದ್ದೇಶಗಳನ್ನು ಜಾರಿಗೊಳಿಸಲು ಮತ್ತು ಕಾರ್ಯರೂಪಕ್ಕೆ ತರಲು ಸಾರ್ವಜನಿಕ ಪ್ರಾಧಿಕಾರಗಳು ಮಾಡಿದ ಪ್ರಯತ್ನವನ್ನು ಸೂಚಿಸುವ ಯಾವುವೇ ಸಂಗತಿಗಳು;

(ಜಿ) ನಿರ್ದಿಷ್ಟ ಸಾರ್ವಜನಿಕ ಪ್ರಾಧಿಕಾರಗಳಿಗೆ ಸಂಬಂಧಿಸಿದಂತೆ ಅಭಿವೃದ್ಧಿ, ಪ್ರಗತಿ (ಬೆಳವಣಿಗೆ), ಆಧುನೀಕರಣ, ಸುಧಾರಣೆಗೆ ಮಾಡುವ ಶಿಫಾರಸುಗಳನ್ನು ಒಳಗೊಂಡಂತೆ ಸುಧಾರಣೆಗೆ ಸಂಬಂಧಿಸಿದ ಶಿಫಾರಸುಗಳು ಅಥವಾ ಈ ಅಧಿನಿಯಮಕ್ಕೆ ಅಥವಾ ಇತರ ಶಾಸನಕ್ಕೆ ಅಥವಾ ಸಾಮಾನ್ಯ ಕಾನೂನಿಗೆ ತಿದ್ದುಪಡಿ ಅಥವಾ ಮಾಹಿತಿ ಪಡೆಯುವ ಹಕ್ಕನ್ನು ಕಾರ್ಯಾಚರಣೆಗೊಳಿಸುವುದಕ್ಕೆ ಸುಸಂಗತವಾದ ಯಾವುದೇ ಇತರ ವಿಷಯ.

(4) ಕೇಂದ್ರ ಸರ್ಕಾರವು ಅಥವಾ ಸಂದರ್ಭಾನುಸಾರ, ರಾಜ್ಯ ಸರ್ಕಾರವು ಪ್ರತಿಯೊಂದು ವರ್ಷ ಮುಕ್ತಾಯಗೊಂಡ ನಂತರ ಕಾರ್ಯಸಾಧ್ಯವಾದಷ್ಟು ಬೇಗನೆ, ಕೇಂದ್ರ ಮಾಹಿತಿ ಆಯೋಗದ ಅಥವಾ ಸಂದರ್ಭಾನುಸಾರ, ರಾಜ್ಯ ಮಾಹಿತಿ ಆಯೋಗದ ವರದಿಯ ಒಂದು ಪ್ರತಿಯನ್ನು ಸಂಸತ್ತಿನ ಪ್ರತಿಯೊಂದು ಸದನದ ಮುಂದೆ ಅಥವಾ ಸಂದರ್ಭಾನುಸಾರ, ರಾಜ್ಯ ವಿಧಾನ ಮಂಡಲದಲ್ಲಿ, ಎರಡು ಸದನಗಳಿರುವಲ್ಲಿ ಪ್ರತಿಯೊಂದು ಸದನದ ಮುಂದೆ ಮತ್ತು ಒಂದು ಸದನವಿರುವಲ್ಲಿ ಆ ಸದನದ ಮುಂದೆ ಮಂಡಿಸುವಂತೆ ಮಾಡಬಹುದು.

(5) ಈ ಅಧಿನಿಯಮದ ಅಡಿಯಲ್ಲಿ ತನ್ನ ಕಾರ್ಯಗಳನ್ನು ನಿರ್ವಹಿಸುವುದಕ್ಕೆ ಸಂಬಂಧಿಸಿದಂತೆ, ಸಾರ್ವಜನಿಕ ಪ್ರಾಧಿಕಾರವು ಅನುಸರಿಸುತ್ತಿರುವ ಪದ್ಧತಿಯು ಈ ಅಧಿನಿಯಮದ ಉಪಬಂಧಗಳಿಗೆ ಅಥವಾ ಆಶಯಕ್ಕೆ ಅನುಗುಣವಾಗಿಲ್ಲವೆಂದು ಕೇಂದ್ರ ಮಾಹಿತಿ ಆಯೋಗಕ್ಕೆ ಅಥವಾ ಸಂದರ್ಭಾನುಸಾರ, ರಾಜ್ಯ ಮಾಹಿತಿ ಆಯೋಗಕ್ಕೆ ಕಂಡು ಬಂದಲ್ಲಿ, ತನ್ನ ಅಭಿಪ್ರಾಯದಲ್ಲಿ ಅದಕ್ಕೆ ಅನುಗುಣವಾಗಿರುವ ಅಂಥ ಪದ್ಧತಿಯನ್ನು ಮತ್ತು ತೆಗೆದುಕೊಳ್ಳಬೇಕಾದ ಕ್ರಮಗಳನ್ನು ನಿರ್ದಿಷ್ಟಪಡಿಸಿ ಪ್ರಾಧಿಕಾರಕ್ಕೆ ಶಿಫಾರಸು ಮಾಡಬಹುದು.

26. ಸಮುಚಿತ ಸರ್ಕಾರವು ಕಾರ್ಯಕ್ರಮಗಳನ್ನು ಸಿದ್ಧಪಡಿಸುವುದು.– (1) ಸಮುಚಿತ ಸರ್ಕಾರವು ಹಣಕಾಸು ಮತ್ತು ಇತರ ಸಂಪನ್ಮೂಲಗಳು ಲಭ್ಯವಿರುವಷ್ಟರ ಮಟ್ಟಿಗೆ,–

(ಎ) ಈ ಅಧಿನಿಯಮದ ಅಡಿಯಲ್ಲಿ ಉದ್ದೇಶಿಸಿದ ಹಕ್ಕುಗಳನ್ನು ಹೇಗೆ ಚಲಾಯಿಸಬೇಕೆಂಬ ಬಗ್ಗೆ ಸಾರ್ವಜನಿಕರ ಅದರಲ್ಲೂ ವಿಶೇಷವಾಗಿ ಅವಕಾಶ ವಂಚಿತ ಸಮುದಾಯಗಳ ತಿಳಿವಳಿಕೆ ಮಟ್ಟವನ್ನು ಹೆಚ್ಚಿಸಲು ಶೈಕ್ಷಣಿಕ ಕಾರ್ಯಕ್ರಮಗಳನ್ನು ರೂಪಿಸಬಹುದು ಮತ್ತು ಸಂಘಟಿಸಬಹುದು;

(ಬಿ) (ಎ) ಖಂಡದಲ್ಲಿ ಉಲ್ಲೇಖಿಸಿರುವ ಕಾರ್ಯಕ್ರಮಗಳನ್ನು ರೂಪಿಸುವುದರಲ್ಲಿ ಮತ್ತು ಸಂಘಟಿಸುವುದರಲ್ಲಿ ಭಾಗವಹಿಸಲು ಮತ್ತು ಅಂಥ ಕಾರ್ಯಕ್ರಮಗಳನ್ನು ಸ್ವತಃ ತಾವೇ ಕೈಗೊಳ್ಳಲು ಸಾರ್ವಜನಿಕ ಪ್ರಾಧಿಕಾರಗಳನ್ನು ಪ್ರೋತ್ಸಾಹಿಸಬಹುದು;

(ಸಿ) ಸಾರ್ವಜನಿಕ ಪ್ರಾಧಿಕಾರಗಳು ತಮ್ಮ ಕಾರ್ಯಚಟುವಟಿಕೆಗಳ ಬಗ್ಗೆ ನಿಖರವಾದ ಮಾಹಿತಿಯನ್ನು ಸಕಾಲದಲ್ಲಿ ಮತ್ತು ಪರಿಣಾಮಕಾರಿ ರೀತಿಯಲ್ಲಿ ಪ್ರಸಾರ ಮಾಡುವುದಕ್ಕೆ ಉತ್ತೇಜಿಸಬಹುದು; ಮತ್ತು

(ಡಿ) ಸಾರ್ವಜನಿಕ ಪ್ರಾಧಿಕಾರಗಳ ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿಗಳನ್ನು ಅಥವಾ ಸಂದರ್ಭಾನುಸಾರ, ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿಗಳನ್ನು ತರಬೇತುಗೊಳಿಸಬಹುದು ಮತ್ತು ಸಾರ್ವಜನಿಕ ಪ್ರಾಧಿಕಾರಗಳು ತಮ್ಮ ಬಳಕೆಗಾಗಿ ಸುಸಂಗತ ತರಬೇತಿ ಪರಿಕರಗಳನ್ನು ತಾವೇ ತಯಾರಿಸಿಕೊಳ್ಳಬಹುದು.

(2) ಸಮುಚಿತ ಸರ್ಕಾರವು, ಈ ಅಧಿನಿಯಮವು ಪ್ರಾರಂಭವಾದಂದಿನಿಂದ ಹದಿನೆಂಟು ತಿಂಗಳುಗಳೊಳಗೆ, ಈ ಅಧಿನಿಯಮದಲ್ಲಿ ನಿರ್ದಿಷ್ಟಪಡಿಸಿದ ಯಾವುದೇ ಹಕ್ಕನ್ನು ಚಲಾಯಿಸಲು ಇಚ್ಛಿಸುವ ವ್ಯಕ್ತಿಗೆ ಯುಕ್ತವಾಗಿ ಅಗತ್ಯವಾಗಬಹುದಾದಂಥ ಮಾಹಿತಿಯನ್ನು ಸುಲಭವಾಗಿ ತಿಳಿಯುವ ರೂಪವನ್ನು ಮತ್ತು ರೀತಿಯನ್ನು ಒಳಗೊಂಡ ಮಾರ್ಗದರ್ಶಿ ಪುಸ್ತಿಕೆಯನ್ನು ತನ್ನ ಅಧಿಕೃತ ಭಾಷೆಯಲ್ಲಿ ಸಂಕಲಿಸತಕ್ಕದ್ದು.

(3) ಸಮುಚಿತ ಸರ್ಕಾರವು, ಅಗತ್ಯವೆನಿಸಿದಲ್ಲಿ (2)ನೇ ಉಪಪ್ರಕರಣದಲ್ಲಿ ಉಲ್ಲೇಖಿಸಿರುವ ಮಾರ್ಗದರ್ಶಿ ಸೂತ್ರಗಳನ್ನು ನಿಯತ ಅಂತರಗಳಲ್ಲಿ ನಿರ್ದಿಷ್ಟವಾಗಿ ಮತ್ತು (2)ನೇ ಉಪಪ್ರಕರಣದ ಸಾಮಾನ್ಯ ಅನ್ವಯಕ್ಕೆ ಬಾಧಕವಾಗದಂತೆ ಆ ದಿನದವರೆಗೆ ಸಿದ್ಧಪಡಿಸಿ ಪ್ರಕಟಿಸತಕ್ಕದ್ದು ಮತ್ತು ಇದು ಕೆಳಗಿನವುಗಳನ್ನು ಒಳಗೊಂಡಿರತಕ್ಕದ್ದು:–

(ಎ) ಈ ಅಧಿನಿಯಮದ ಉದ್ದೇಶಗಳು;

(ಬಿ) 5ನೇ ಪ್ರಕರಣದ (1)ನೇ ಉಪ ಪ್ರಕರಣದ ಅಡಿಯಲ್ಲಿ ನೇಮಕಗೊಂಡ ಪ್ರತಿಯೊಂದು ಸಾರ್ವಜನಿಕ ಪ್ರಾಧಿಕಾರದ ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿ ಅಥವಾ ಸಂದರ್ಭಾನುಸಾರ, ರಾಜ್ಯ

ಸಾರ್ವಜನಿಕ ಮಾಹಿತಿ ಅಧಿಕಾರಿಯ ಅಂಚೆ ಮತ್ತು ರಸ್ತೆ ವಿಳಾಸ, ದೂರವಾಣಿ ಹಾಗೂ ಫ್ಯಾಕ್ಸ್ ಸಂಖ್ಯೆ ಹಾಗೂ ಲಭ್ಯವಿದ್ದಲ್ಲಿ ಇ–ಮೇಲ್ ವಿಳಾಸ;

(ಸಿ) ಮಾಹಿತಿಯನ್ನು ಪಡೆಯಲು ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿ ಅಥವಾ ಸಂದರ್ಭಾನುಸಾರ, ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿಗೆ ಮಾಹಿತಿ ಪಡೆಯಲು ಕೋರಿಕೆಯನ್ನು ಸಲ್ಲಿಸುವ ವಿಧಾನ ಮತ್ತು ನಮೂನೆ;

(ಡಿ) ಈ ಅಧಿನಿಯಮದ ಅಡಿಯಲ್ಲಿ ಸಾರ್ವಜನಿಕ ಪ್ರಾಧಿಕಾರದ ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿ ಅಥವಾ ಸಂದರ್ಭಾನುಸಾರ, ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿಯಿಂದ ದೊರೆಯುವಂಥ ನೆರವು ಮತ್ತು ಈ ಅಧಿಕಾರಿಗಳ ಕರ್ತವ್ಯಗಳು;

(ಇ) ಕೇಂದ್ರ ಮಾಹಿತಿ ಆಯೋಗ ಅಥವಾ ಸಂದರ್ಭಾನುಸಾರ, ರಾಜ್ಯ ಮಾಹಿತಿ ಆಯೋಗದಿಂದ ದೊರೆಯುವ ನೆರವು;

(ಎಫ್) ಆಯೋಗಕ್ಕೆ ಅಪೀಲನ್ನು ಸಲ್ಲಿಸುವ ವಿಧಾನವನ್ನೂ ಒಳಗೊಂಡಂತೆ, ಈ ಅಧಿನಿಯಮದ ಮೂಲಕ ಪ್ರದತ್ತವಾದ ಅಥವಾ ವಿಧಿಸಲಾದ ಹಕ್ಕು ಅಥವಾ ಕರ್ತವ್ಯಕ್ಕೆ ಸಂಬಂಧಪಟ್ಟಂತೆ ಕೈಗೊಂಡ ಕ್ರಮಕ್ಕೆ ಅಥವಾ ಕ್ರಮ ಕೈಗೊಳ್ಳಲು ವಿಫಲವಾದುದಕ್ಕೆ ಸಂಬಂಧಿಸಿದಂತೆ ಕಾನೂನಿನಲ್ಲಿ ಲಭ್ಯವಿರುವ ಎಲ್ಲ ಪರಿಹಾರಗಳು;

(ಜಿ) 4ನೇ ಪ್ರಕರಣಕ್ಕೆ ಅನುಸಾರವಾಗಿ ದಾಖಲೆಗಳ ಪ್ರವರ್ಗಗಳನ್ನು ಸ್ವಯಿಚ್ಛೆಯಿಂದ ಬಹಿರಂಗಪಡಿಸಲು ಕಲ್ಪಿಸಲಾದ ಉಪಬಂಧಗಳು;

(ಎಚ್) ಮಾಹಿತಿಯನ್ನು ಪಡೆಯಲು ಸಲ್ಲಿಸಲಾದ ಕೋರಿಕೆಗಳಿಗೆ ಸಂಬಂಧಿಸಿದಂತೆ ಸಂದಾಯ ಮಾಡಬೇಕಾದ ಶುಲ್ಕಕ್ಕೆ ಸಂಬಂಧಪಟ್ಟ ನೋಟೀಸುಗಳು;

(ಐ) ಈ ಅಧಿನಿಯಮಕ್ಕೆ ಅನುಸಾರವಾಗಿ ಮಾಹಿತಿಯನ್ನು ಪಡೆಯುವುದಕ್ಕೆ ಸಂಬಂಧಿಸಿದಂತೆ ಮಾಡಲಾದ ಅಥವಾ ಹೊರಡಿಸಲಾದ ಹೆಚ್ಚುವರಿ ವಿನಿಯಮನಗಳು ಅಥವಾ ಸುತ್ತೋಲೆಗಳು.

(4) ಸಮುಚಿತ ಸರ್ಕಾರವು, ಅವಶ್ಯವೆನಿಸಿದರೆ ನಿಯತ ಅಂತರಗಳಲ್ಲಿ ಮಾರ್ಗದರ್ಶಿ ಸೂತ್ರಗಳನ್ನು ಆ ದಿನದವರೆಗೆ ಸಿದ್ಧಪಡಿಸಿ ಪ್ರಕಟಿಸತಕ್ಕದ್ದು.

27. ಸಮುಚಿತ ಸರ್ಕಾರದ ನಿಯಮ ರಚನಾಧಿಕಾರ.– (1) ಸಮುಚಿತ ಸರ್ಕಾರವು, ಅಧಿಕೃತ ರಾಜ್ಯಪತ್ರದಲ್ಲಿ ಅಧಿಸೂಚನೆಯ ಮೂಲಕ ಈ ಅಧಿನಿಯಮದ ಉಪಬಂಧಗಳನ್ನು ಜಾರಿಗೊಳಿಸಲು ನಿಯಮಗಳನ್ನು ರಚಿಸಬಹುದು.

(2) ವಿಶೇಷವಾಗಿ, ಮತ್ತು ಈ ಹಿಂದೆ ಹೇಳಿದ ಅಧಿಕಾರದ ಸಾಮಾನ್ಯ ಅನ್ವಯಕ್ಕೆ ಬಾಧಕವಾಗದಂತೆ ಅಂಥ ನಿಯಮಗಳು ಈ ಕೆಳಕಂಡ ಎಲ್ಲ ಅಥವಾ ಯಾವುವೇ ವಿಷಯಗಳ ಬಗ್ಗೆ ಉಪಬಂಧ ಕಲ್ಪಿಸಬಹುದು, ಎಂದರೆ,–

(ಎ) 4ನೇ ಪ್ರಕರಣದ (4)ನೇ ಉಪ ಪ್ರಕರಣದ ಅಡಿಯಲ್ಲಿ ಪ್ರಸಾರ ಮಾಡಬೇಕಾದ ವಿಷಯ ಸಾಮಗ್ರಿಗಳ ಬೆಲೆ, ಮಾಧ್ಯಮದ ವೆಚ್ಚ ಅಥವಾ ಮುದ್ರಣ ವೆಚ್ಚ;

(ಬಿ) 6ನೇ ಪ್ರಕರಣದ (1)ನೇ ಉಪ ಪ್ರಕರಣದ ಅಡಿಯಲ್ಲಿ ಸಂದಾಯ ಮಾಡಬೇಕಾದ ಶುಲ್ಕ;

(ಸಿ) 7ನೇ ಪ್ರಕರಣದ (1) ಮತ್ತು (5)ನೇ ಉಪ ಪ್ರಕರಣಗಳ ಅಡಿಯಲ್ಲಿ ಸಂದಾಯ ಮಾಡಬೇಕಾದ ಶುಲ್ಕ;

(ಡಿ) 13ನೇ ಪ್ರಕರಣದ (7)ನೇ ಉಪಪ್ರಕರಣ ಹಾಗು 16ನೇ ಪ್ರಕರಣದ (6)ನೇ ಉಪಪ್ರಕರಣದ ಮೇರೆಗೆ ಅಧಿಕಾರಿಗಳಿಗೆ ಮತ್ತು ಇತರ ನೌಕರರಿಗೆ ಸಂದಾಯ ಮಾಡಬೇಕಾದ ವೇತನ ಮತ್ತು ಭತ್ಯೆಗಳು ಹಾಗು ಅವರ ಸೇವಾ ನಿಬಂಧನೆಗಳು ಮತ್ತು ಷರತ್ತುಗಳು;

(ಇ) 19ನೇ ಪ್ರಕರಣದ (10)ನೇ ಉಪ ಪ್ರಕರಣದ ಅಡಿಯಲ್ಲಿ ಅಪೀಲುಗಳನ್ನು ತೀರ್ಮಾನಿಸುವಲ್ಲಿ ಕೇಂದ್ರ ಮಾಹಿತಿ ಆಯೋಗವು ಅಥವಾ ಸಂದರ್ಭಾನುಸಾರ, ರಾಜ್ಯ ಮಾಹಿತಿ ಆಯೋಗವು ಅನುಸರಿಸಬೇಕಾದ ಕಾರ್ಯವಿಧಾನ; ಮತ್ತು

(ಎಫ್) ನಿಯಮಿಸಬೇಕಾದ ಅಥವಾ ನಿಯಮಿಸಬಹುದಾದ ಯಾವುದೇ ಇತರ ವಿಷಯ.

28. ಸಕ್ಷಮ ಪ್ರಾಧಿಕಾರದಿಂದ ನಿಯಮ ರಚನಾಧಿಕಾರ.– (1) ಸಕ್ಷಮ ಪ್ರಾಧಿಕಾರವು, ಅಧಿಕೃತ ರಾಜ್ಯಪತ್ರದಲ್ಲಿ ಅಧಿಸೂಚನೆಯ ಮೂಲಕ ಈ ಅಧಿನಿಯಮದ ಉಪಬಂಧಗಳ ನಿರ್ವಹಣೆಗೆ ಸಂಬಂಧಿಸಿದಂತೆ ನಿಯಮಗಳನ್ನು ರಚಿಸಬಹುದು.

(2) ವಿಶೇಷವಾಗಿ ಮತ್ತು ಈ ಹಿಂದೆ ಹೇಳಿದ ಅಧಿಕಾರದ ಸಾಮಾನ್ಯಾನ್ವಯಕ್ಕೆ ಬಾಧಕವಾಗದಂತೆ ಅಂಥ ನಿಯಮಗಳು ಈ ಕೆಳಕಂಡ ಎಲ್ಲ ಅಥವಾ ಯಾವುವೇ ವಿಷಯಗಳ ಬಗ್ಗೆ ಉಪಬಂಧ ಕಲ್ಪಿಸಬಹುದು, ಎಂದರೆ:–

(i) 4ನೇ ಪ್ರಕರಣದ (4)ನೇ ಉಪ ಪ್ರಕರಣದ ಅಡಿಯಲ್ಲಿ ಪ್ರಸಾರ ಮಾಡಬೇಕಾದ ವಿಷಯ ಸಾಮಗ್ರಿಗಳ ಬೆಲೆ, ಮಾಧ್ಯಮದ ವೆಚ್ಚ ಅಥವಾ ಅವುಗಳ ಮುದ್ರಣ ವೆಚ್ಚ ;

(ii) 6ನೇ ಪ್ರಕರಣದ (1)ನೇ ಉಪ ಪ್ರಕರಣದ ಅಡಿಯಲ್ಲಿ ಸಂದಾಯ ಮಾಡಬೇಕಾದ ಶುಲ್ಕ;

(iii) 7ನೇ ಪ್ರಕರಣದ (1)ನೇ ಉಪ ಪ್ರಕರಣದ ಅಡಿಯಲ್ಲಿ ಸಂದಾಯ ಮಾಡಬೇಕಾದ ಶುಲ್ಕ; ಮತ್ತು

(iv) ನಿಯಮಿಸಬೇಕಾದ ಅಥವಾ ನಿಯಮಿಸಬಹುದಾದ ಯಾವುದೇ ಇತರ ವಿಷಯ.

29. ನಿಯಮಗಳನ್ನು ಮಂಡಿಸುವುದು.– (1) ಕೇಂದ್ರ ಸರ್ಕಾರವು, ಈ ಅಧಿನಿಯಮದ ಅಡಿಯಲ್ಲಿ ರಚಿಸಿದ ಪ್ರತಿಯೊಂದು ನಿಯಮವನ್ನು, ಅದನ್ನು ರಚಿಸಿದ ತರುವಾಯ ಸಾಧ್ಯವಾದಷ್ಟು ಬೇಗನೆ, ಸಂಸತ್ತಿನ ಪ್ರತಿಯೊಂದು ಸದನದ ಮುಂದೆ, ಅದು ಒಟ್ಟು ಮೂವತ್ತು ದಿವಸಗಳ ಅವಧಿಯವರೆಗೆ ಅಡಕವಾಗಬಹುದಾದ ಅಧಿವೇಶನದಲ್ಲಿರುವಾಗ ಒಂದು ಅಥವಾ ಒಂದಾದ ಮೇಲೊಂದರಂತೆ ಬರುವ ಎರಡು ಅಥವಾ ಹೆಚ್ಚು ಅಧಿವೇಶನಗಳಲ್ಲಿ ಮಂಡಿಸತಕ್ಕದ್ದು ಮತ್ತು ಮೇಲೆ ಹೇಳಿದ ಅಧಿವೇಶನ ಅಥವಾ ಒಂದಾದ ಮೇಲೊಂದರಂತೆ ಬರುವ ಅಧಿವೇಶನಗಳ ನಿಕಟೋತ್ತರ ಅಧಿವೇಶನವು ಮುಕ್ತಾಯಗೊಳ್ಳುವುದಕ್ಕೆ ಮುಂಚೆ ಆ ನಿಯಮದಲ್ಲಿ ಯಾವುದೇ ಮಾರ್ಪಾಟನ್ನು ಮಾಡಬೇಕೆಂದು ಎರಡೂ ಸದನಗಳು ಒಪ್ಪಿದರೆ ಅಥವಾ ಆ ನಿಯಮವನ್ನು ರಚಿಸಕೂಡದೆಂದು ಎರಡೂ ಸದನಗಳು ಒಪ್ಪಿದರೆ, ಆ ತರುವಾಯ ಆ ನಿಯಮವು ಹಾಗೆ ಮಾರ್ಪಾಟಾದ ರೂಪದಲ್ಲಿ ಮಾತ್ರ ಪರಿಣಾಮಕಾರಿಯಾಗತಕ್ಕದ್ದು ಅಥವಾ ಸಂದರ್ಭಾನುಸಾರ, ಪರಿಣಾಮಕಾರಿಯಾಗತಕ್ಕದ್ದಲ್ಲ. ಆದಾಗ್ಯೂ, ಅಂಥ ಯಾವುದೇ ಮಾರ್ಪಾಟು ಅಥವಾ ರದ್ದತಿಯೂ ಆ ನಿಯಮದ ಮೇರೆಗೆ ಹಿಂದೆ ಮಾಡಿದ ಯಾವುದೇ ಕಾರ್ಯದ ಸಿಂಧುತ್ವಕ್ಕೆ ಬಾಧಕವಾಗತಕ್ಕದ್ದಲ್ಲ.

(2) ಈ ಅಧಿನಿಯಮದ ಅಡಿಯಲ್ಲಿ ರಾಜ್ಯ ಸರ್ಕಾರವು ರಚಿಸಿದ ಪ್ರತಿಯೊಂದು ನಿಯಮವನ್ನು, ಅದನ್ನು ಅಧಿಸೂಚಿಸಿದ ತರುವಾಯ ಆದಷ್ಟು ಬೇಗನೆ, ರಾಜ್ಯ ವಿಧಾನಮಂಡಲದ ಮುಂದೆ ಮಂಡಿಸತಕ್ಕದ್ದು.

30. ತೊಂದರೆಗಳನ್ನು ನಿವಾರಿಸುವ ಅಧಿಕಾರ.– (1) ಈ ಅಧಿನಿಯಮದ ಉಪಬಂಧಗಳನ್ನು ಜಾರಿಗೊಳಿಸುವಲ್ಲಿ ಯಾವುದೇ ತೊಂದರೆ ಉದ್ಭವಿಸಿದರೆ, ಅಂಥ ತೊಂದರೆಯನ್ನು ನಿವಾರಿಸಲು ಕೇಂದ್ರ ಸರ್ಕಾರವು, ರಾಜಪತ್ರದಲ್ಲಿ ಪ್ರಕಟಿಸಿದ ಆದೇಶದ ಮೂಲಕ, ತನಗೆ ಅವಶ್ಯ ಅಥವಾ ವಿಹಿತ ಎಂದು ಕಂಡುಬರಬಹುದಾದಂಥ ಮತ್ತು ಈ ಅಧಿನಿಯಮದ ಉಪಬಂಧಗಳಿಗೆ ಅಸಂಗತವಾಗಿರದಂಥ ಉಪಬಂಧಗಳನ್ನು ಕಲ್ಪಿಸಬಹುದು:

ಪರಂತು, ಅಂಥ ಯಾವುದೇ ಆದೇಶವನ್ನು ಈ ಅಧಿನಿಯಮವು ಪ್ರಾರಂಭವಾದ ದಿನಾಂಕದಿಂದ ಎರಡು ವರ್ಷಗಳ ಅವಧಿ ಪೂರ್ಣಗೊಂಡ ನಂತರ ಮಾಡತಕ್ಕದ್ದಲ್ಲ.

(2) ಈ ಪ್ರಕರಣದ ಮೇರೆಗೆ ಮಾಡಲಾದ ಪ್ರತಿಯೊಂದು ಆದೇಶವನ್ನು, ಅದನ್ನು ಮಾಡಿದ ತರುವಾಯ ಸಾಧ್ಯವಾದಷ್ಟು ಬೇಗನೆ, ಸಂಸತ್ತಿನ ಪ್ರತಿಯೊಂದು ಸದನದ ಮುಂದೆ ಮಂಡಿಸತಕ್ಕದ್ದು.

31. ನಿರಸನ.– ಮಾಹಿತಿ ಸ್ವಾತಂತ್ರ್ಯ ಅಧಿನಿಯಮ, 2002ನ್ನು ಈ ಮೂಲಕ ನಿರಸನಗೊಳಿಸಲಾಗಿದೆ.